ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫೧

**ಪಟ್ಟಿ – ೦೯**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆಂಟನೆಯ ಮುಂದುವರೆದ ಅಧಿವೇಶನ

**ಶುಕ್ರವಾರ, ದಿನಾಂಕ : ೧೩ನೇ ಮಾರ್ಚ್, ೨೦೨೬**

---

## ಸಮೂಹ – V

೧. ಸಮಾಜ ಕಲ್ಯಾಣ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

೩. ಕೃಷಿ ಸಚಿವರು

೪. ಕಾರ್ಮಿಕ ಸಚಿವರು

೫. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೬. ಯೋಜನೆ ಮತ್ತು ಸಾಂಖ್ಯಿಕ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

## ಕೃತಕ ಬುದ್ಧಿಮತ್ತೆ (AI) ತಂತ್ರಜ್ಞಾನ ಸವಾಲುಗಳ ಕುರಿತು

**ಡಾ॥ ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೧೦೦೩ (೧೧೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರ ಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃತಕ ಬುದ್ಧಿಮತ್ತೆ (AI) ತಂತ್ರಜ್ಞಾನ ಪ್ರಸ್ತುತ ಅತ್ಯಂತ ತ್ವರಿತವಾಗಿ ಜನತಾಂತ್ರೀಕರಣವಾಗುತ್ತಿರುವುದರಿಂದ, ರಾಜ್ಯದ ಜನತೆಗೆ ವಿಶೇಷವಾಗಿ ಯುವ ಜನತೆಯ ಹಾಗೂ ಅವರ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು, ಇದರ ಅನುಕೂಲ ಹಾಗೂ ಅನಾನುಕೂಲಗಳ ಬಗ್ಗೆ ಹಾಗೂ ಅಗತ್ಯತೆಗೆ ಅನುಗುಣವಾಗಿ ಕೃತಕ ಬುದ್ಧಿಮತ್ತೆ (AI) ಬಳಸಲು ನೆರವಾಗುವಂತೆ ಸರ್ಕಾರ ರೂಪಿಸಿರುವ ಅಥವಾ ರೂಪಿಸುತ್ತಿರುವ ನಿಯಮ/ ಯೋಜನೆಗಳೇನು ; (ಪೂರ್ಣ ವಿವರ ಒದಗಿಸುವುದು)

(ಆ) ಸರ್ಕಾರ ಇಲ್ಲಿಯವರೆವಿಗೂ ಯಾವುದೇ ಕ್ರಮ ಕೈಗೊಳ್ಳದಿದ್ದಲ್ಲಿ, ಮುಂದಿನ ದಿನಗಳಲ್ಲಿ ಕೃತಕ ಬುದ್ಧಿಮತ್ತೆಯೊಡ್ಡುವ (AI) ಸವಾಲುಗಳನ್ನು ಎದುರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಕುರಿತು

**ಡಾ॥ ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೧೦೦೪ (೧೧೬೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರ ಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ನಕ್ಸಲ್ ಪೀಡಿತ ಮತ್ತು ಕಾಡಂಚಿನ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ರೂ. ೭ (ಏಳು) ಕೋಟಿಗೂ ಅಧಿಕ ಅನುದಾನವನ್ನು ಬಿಡುಗಡೆ ಮಾಡಿದೆಯೇ ; (ಆಯ್ಕೆ ಮಾಡಿಕೊಂಡಿರುವ ಗ್ರಾಮ/ಸ್ಥಳಗಳ ವಿವರ ಒದಗಿಸುವುದು)

(ಆ) ಈ ಹಣವನ್ನು ಮುಖ್ಯವಾಗಿ ರಸ್ತೆ, ವಿದ್ಯುತ್, ಕುಡಿಯುವ ನೀರು ಮತ್ತು ಕಾಲುಸಂಕಗಳಂತಹ ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕಲ್ಲದೆ, ಜನರ ವಸತಿ, ಶಾಲೆ, ಪಂಚಾಯತಿ ಕಟ್ಟಡಗಳು ನಿರ್ಮಾಣ/ ದುರಸ್ತಿಗೆ ಬಳಸಲು ಉದ್ದೇಶಿಸಲಾಗಿದೆಯೇ ? (ಮಾನದಂಡಗಳ ವಿವರ ಒದಗಿಸುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಒದಗಿಸುವ ಮೂಲಸೌಕರ್ಯ ಮತ್ತು ಅಭಿವೃದ್ಧಿಯ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦೫ (೧೨೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್ ಮಟ್ಟದಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಯಾವ–ಯಾವ ರೀತಿಯ ಯೋಜನೆಗಳನ್ನು ಕೈಗೊಳ್ಳಲಾಗಿದೆ ; ಸದರಿ ಯೋಜನೆಗಳು ಯಾವ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಆ) ಕಳೆದ ಮೂರು ವರ್ಷಗಳಲ್ಲಿ ಗ್ರಾಮ ರಸ್ತೆ ಅಭಿವೃದ್ಧಿಗೆ ಕೈಗೊಂಡಿರುವ ಯೋಜನೆಗಳು ಯಾವುವು ; ಸದರಿ ಯೋಜನೆಗಳ ಪ್ರಸ್ತುತ ಸ್ಥಿತಿ ಏನು ;

(ಇ) ಗ್ರಾಮೀಣ ಪ್ರದೇಶಗಳಲ್ಲಿ ಡಿಜಿಟಲ್ ಸಂಪರ್ಕ ಮತ್ತು ಇ–ಪಂಚಾಯತ್ ವ್ಯವಸ್ಥೆಯ ಪ್ರಗತಿ ಹೇಗೆ ನಡೆಯುತ್ತಿದೆ ;

(ಈ) ಗ್ರಾಮ ಸ್ವಚ್ಛತಾ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆ ಮಾಡಲಾಗುತ್ತಿದೆಯೇ ? (ವಿವರಣೆ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಒದಗಿಸುವ ವಿದ್ಯಾರ್ಥಿ ವೇತನ ಮತ್ತು ಶಿಕ್ಷಣದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦೬ (೧೨೦೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿ ವೇತನಗಳ ಒಟ್ಟು ಅನುದಾನ ಎಷ್ಟು ;

(ಆ) ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿ ವೇತನ ವಿತರಣೆಯಲ್ಲಿ ಉಂಟಾದ ವಿಳಂಬಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ವಿದೇಶ ವಿದ್ಯಾಭ್ಯಾಸಕ್ಕಾಗಿ ನೀಡಲಾಗುವ ವಿದ್ಯಾರ್ಥಿ ವೇತನ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ಹಿಂದುಳಿದ ವರ್ಗಗಳ ವಸತಿ ನಿಲಯಗಳ ಸ್ಥಿತಿ ಸುಧಾರಣೆಗೆ ಸರ್ಕಾರ ಕೈಗೊಂಡಿರುವ ಯೋಜನೆಗಳೇನು ?

## ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ವಸತಿ ಮತ್ತು ವಿದ್ಯಾರ್ಥಿ ನಿಲಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦೭ (೧೨೦೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ವಿದ್ಯಾರ್ಥಿ ನಿಲಯಗಳಲ್ಲಿ ನೀರು, ವಿದ್ಯುತ್, ಶೌಚಾಲಯ ಹಾಗೂ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ವಿದ್ಯಾರ್ಥಿ ನಿಲಯಗಳಿಗೆ ಒದಗಿಸುತ್ತಿರುವ ಮೂಲಭೂತ ಸೌಕರ್ಯಗಳಲ್ಲಿ ಯಾವ ರೀತಿಯ ಬದಲಾವಣೆಗಳನ್ನು ತರಲಾಗಿದೆ ;

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಲಾಗಿದೆ ; ಮುಂದಿನ ದಿನಗಳಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕಾರ್ಮಿಕ ಕಲ್ಯಾಣ ಇಲಾಖೆಯಲ್ಲಿ ನೀಡುತ್ತಿರುವ ಯೋಜನೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦೮ (೧೨೦೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕರಿಗೆ ನೀಡಲಾಗುತ್ತಿರುವ ಸೌಲಭ್ಯ/ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಅಡಿಯಲ್ಲಿ ನೋಂದಾಯಿತ ಕಾರ್ಮಿಕರ ಸಂಖ್ಯೆ ಎಷ್ಟು; ಅವರಿಗೆ ನೀಡಿರುವ ಅನುದಾನ/ಪಿಂಚಣಿ ವಿವರವೇನು ;

(ಇ) ಗಿಗ್ ಮತ್ತು ಪ್ಲಾಟ್‌ಫಾರ್ಮ್ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರದ ವಿಶೇಷ ಯೋಜನೆಗಳನ್ನು ನೀಡಲಾಗುತ್ತಿದೆಯೇ ? (ಮಾಹಿತಿ ಒದಗಿಸುವುದು)

## ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಯೋಜನೆಗಳ ಅನುಷ್ಠಾನ ಮತ್ತು ಫಲಾನುಭವಿಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦೯ (೧೨೦೪) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಗ್ರ ಶಿಶು ಅಭಿವೃದ್ಧಿ ಸೇವೆಗಳ (ICDS) ಯೋಜನೆಯಡಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಾಣ/ ನವೀಕರಣಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಯೋಜನೆವಾರು ಮಾಹಿತಿ ಒದಗಿಸುವುದು)

(ಇ) ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿ ಎಷ್ಟು ಗರ್ಭಿಣಿ ಮಹಿಳೆಯರು ಪ್ರಯೋಜನ ಪಡೆದಿದ್ದಾರೆ ;

(ಈ) ಬೇಟಿ ಬಚಾವೋ ಬೇಟಿ ಪಡಾವೋ (Beti Bachao Beti padhao) ಯೋಜನೆಯಡಿ ಜಿಲ್ಲಾವಾರು ಲಿಂಗಾನುಪಾತದಲ್ಲಿ ಸುಧಾರಣೆ ಕಂಡು ಬಂದಿದೆಯೇ ?

## ಮಾರ್ಕಂಡಯ್ಯ ಜಲಾಶಯ ಯೋಜನೆಯ ಕಾಮಗಾರಿ ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೦ (೧೦೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿಗೆ ಕುಡಿಯುವ ನೀರಿನ ಸರಬರಾಜಿಗಾಗಿ ಮಾರ್ಕಂಡಯ್ಯ ಜಲಾಶಯ ಯೋಜನೆಗೆ ಸರ್ಕಾರ ಖರ್ಚು ಮಾಡಿರುವ ಒಟ್ಟು ಯೋಜನಾವೆಚ್ಚ ಎಷ್ಟು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಸಂಪೂರ್ಣ ಸದರಿ ಜಲಾಶಯದಿಂದ ಮಾಲೂರು ತಾಲ್ಲೂಕಿನ ೬ ವಲಯಗಳ ೧೮೪ ಜನ ವಸತಿಗಳಿಗೆ ಕುಡಿಯುವ ನೀರಿನ ಸರಬರಾಜು ಮಾಡುವ ಉದ್ದೇಶಿತ ಯೋಜನೆ ಪ್ರಸ್ತುತ ಸಂಪೂರ್ಣ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ ಕಾಮಗಾರಿ/ ಯೋಜನೆ ಸ್ಥಗಿತಗೊಂಡಿದೆ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಮಾರ್ಕಂಡಯ್ಯ ಜಲಾಶಯ ಯೋಜನೆ ಸ್ಥಗಿತಗೊಂಡಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಪೂರ್ಣವಾದ ಮಾಹಿತಿ ನೀಡುವುದು ;

(ಈ) ಉದ್ದೇಶಿತ ೧೮೪ ಜನ ವಸತಿಗಳಿಗೆ ಕುಡಿಯುವ ನೀರು ಯಾವ ಕಾಲಮಿತಿಯೊಳಗೆ ಸರಬರಾಜು ಮಾಡಲಾಗುವುದು ; (ವಿವರ ಒದಗಿಸುವುದು)

(ಉ) ಈ ಯೋಜನೆಯಡಿಯಲ್ಲಿ ಗುತ್ತಿಗೆದಾರರ ಮೇಲೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಘನ ತ್ಯಾಜ್ಯ ವಿಲೇವಾರಿ ಘಟಕ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೧ (೧೧೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಘನ ತ್ಯಾಜ್ಯ ವಿಲೇವಾರಿ ಘಟಕಗಳಿವೆ ; ಅದನ್ನು ಯಾರ ಮೂಲಕ ನಿರ್ವಹಣೆಯನ್ನು ಮಾಡಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಯ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಗೆ ಬರುವ ಘಟಕಗಳು ಎಷ್ಟು ; (ವಿವರ ನೀಡುವುದು)

(ಇ) ಈ ಘಟಕಗಳ ನಿರ್ವಹಣೆ ಮಾಡಲು ವರ್ಷಕ್ಕೆ ತಗಲುವ ವೆಚ್ಚವೆಷ್ಟು; ಅದರಲ್ಲಿ ರಾಜ್ಯ ಸರ್ಕಾರದ ಅನುದಾನವೆಷ್ಟು ; ಕೇಂದ್ರ ಸರ್ಕಾರದ ಅನುದಾನವೆಷ್ಟು ;

(ಈ) ಈ ಘಟಕ ನಿರ್ವಹಣೆಗೆ ತಗಲುವ ವೆಚ್ಚವನ್ನು ಯಾವ ಅನುದಾನದಿಂದ ಬಿಡುಗಡೆ ಮಾಡಲಾಗುತ್ತಿದೆ ಮತ್ತು ಮುಂದಿನ ವರ್ಷಗಳಲ್ಲಿ ಇದರ ನಿರ್ವಹಣೆ ಬಗ್ಗೆ ಕೈಗೊಳ್ಳಲಿರುವ ಕ್ರಮಗಳೇನು ?

## ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೨ (೧೧೮೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಮಕ್ಕಳ ಕಲ್ಯಾಣಕ್ಕಾಗಿ ೨೦೨೪–೨೫ನೇ ಸಾಲಿನಲ್ಲಿ ವಿನಿಯೋಗಿಸಿರುವ ಅನುದಾನವೆಷ್ಟು ;

(ಆ) ಸದರಿ ಅನುದಾನದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಒದಗಿಸಿರುವ ವಿವಿಧ ಸೌಲಭ್ಯಗಳು ಯಾವುವು ; ಪ್ರತಿ ಸೌಲಭ್ಯಕ್ಕೆ ಖರ್ಚುಮಾಡಿರುವ ಅನುದಾನ ಎಷ್ಟು ;

(ಇ) ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಕ್ಕಳ ಶೈಕ್ಷಣಿಕ ಧನ ಸಹಾಯಕ್ಕಾಗಿ ೨೦೨೪–೨೫ನೇ ಸಾಲಿನಲ್ಲಿ ಖರ್ಚು ಮಾಡಿದ ಮೊತ್ತವೆಷ್ಟು ಹಾಗೂ ಶೈಕ್ಷಣಿಕ ಧನ ಸಹಾಯ ಪಡೆದ ಮಕ್ಕಳ ಸಂಖ್ಯೆ ಎಷ್ಟು ;

(ಈ) ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಕ್ಕಳ ಶೈಕ್ಷಣಿಕ ಧನ ಸಹಾಯಕ್ಕಾಗಿ ೨೦೨೪–೨೫ನೇ ಸಾಲಿನಲ್ಲಿ ಎಷ್ಟು ಅರ್ಜಿಗಳನ್ನು ಸಲ್ಲಿಸಿದ್ದು ಇದರಲ್ಲಿ ಧನ ಸಹಾಯ ಮಂಜೂರು ಮಾಡಿದ ಪ್ರಕರಣಗಳು ಎಷ್ಟು ಹಾಗೂ ತಿರಸ್ಕೃತಗೊಂಡ ಪ್ರಕರಣಗಳು ಎಷ್ಟು ?

## ವಸತಿ ನಿಲಯಗಳು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೩ (೧೧೮೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಇರುವ ವಸತಿ ನಿಲಯಗಳ ಸಂಖ್ಯೆ ಎಷ್ಟು; ಸರ್ಕಾರದಿಂದ ಮಂಜೂರಾಗಿರುವ ಮೇಲ್ವಿಚಾರಕರ ಹುದ್ದೆಗಳ ಸಂಖ್ಯೆ ಎಷ್ಟು; ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಬಾಕಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಖಾಲಿ ಇರುವ ಮೇಲ್ವಿಚಾರಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಇ) ವಸತಿ ನಿಲಯಗಳ ಕಟ್ಟಡಗಳು ಹಳೆಯ ಕಟ್ಟಡಗಳಾಗಿದ್ದು ದುರಸ್ತಿ ಕಾರ್ಯ ಕೈಗೊಳ್ಳಲಾಗಿದೆಯೇ ; ಎಷ್ಟು ಕಟ್ಟಡಗಳ ದುರಸ್ತಿ ಕಾರ್ಯ ಕೈಗೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ವಸತಿ ನಿಲಯಗಳಿಗೆ ಆಹಾರ ದಾಸ್ತಾನು ಸಾಮಾಗ್ರಿಗಳ ಸರಬರಾಜು ಟೆಂಡರ್ ಪ್ರಕ್ರಿಯೆ ನಿಗಧಿತ ಸಮಯಕ್ಕೆ ಆಗದೆ ಇರುವುದರಿಂದ ಮಕ್ಕಳು ಮತ್ತು ಮೇಲ್ವಿಚಾರಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

# ಸಿಂಧನೂರು ತಾಲ್ಲೂಕಿನಲ್ಲಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೪ (೧೯೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಸದರಿ ಅಂಗನವಾಡಿ ಕೇಂದ್ರಗಳಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಟ್ಟಡಗಳ ಸಂಖ್ಯೆ ಎಷ್ಟು ;

(ಇ) ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ಸರ್ಕಾರದ ನಿಲುವೇನು ;

(ಈ) ಯಾವ ಕಾಲಮಿತಿಯೊಳಗೆ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಅನುದಾನ ಬಿಡುಗಡೆ ಮಾಡಲಾಗುವುದು ?

# ಸಿಂಧನೂರು ತಾಲ್ಲೂಕಿನಲ್ಲಿ ದುರಸ್ತಿ/ಶಿಥಿಲಗೊಂಡಿರುವ ರೈತ ಸಂಪರ್ಕ ಕೇಂದ್ರಗಳಿಗೆ ಹೊಸ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೫ (೧೯೭೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು ಎಷ್ಟು ರೈತ ಸಂಪರ್ಕ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಸದರಿ ರೈತ ಸಂಪರ್ಕ ಕೇಂದ್ರಗಳಲ್ಲಿ ಸುಮಾರು ೧೪ ಕೇಂದ್ರಗಳ ಮೇಲ್ಛಾವಣಿಯು ಶಿಥಿಲಗೊಂಡಿದ್ದು, ಮಳೆ ಬಂದರೆ ಸೋರಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರದಿಂದ ಈ ಸಂಬಂಧ ಯಾವ ಕ್ರಮವಹಿಸಲಾಗಿದೆ ;

(ಈ) ಯಾವ ಕಾಲಮಿತಿಯೊಳಗೆ ಸದರಿ ರೈತ ಸಂಪರ್ಕ ಕೇಂದ್ರಗಳಿಗೆ ಹೊಸ ಕಟ್ಟಡಗಳನ್ನು ನಿರ್ಮಿಸಲು ಅಗತ್ಯ ಅನುದಾನವನ್ನು ಬಿಡುಗಡೆ ಮಾಡಲಾಗುವುದು ?

## ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಹಳ್ಳಿಗಳಿಗೆ ಶುದ್ಧ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೬ (೧೧೯೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ಬಹುತೇಕ ಹಳ್ಳಿಗಳು ಶುದ್ಧ ಕುಡಿಯುವ ನೀರಿನ ಪೂರೈಕೆಯಿಂದ ವಂಚಿತವಾಗಿರುವುದು ಹಾಗೂ ಈಗಾಗಲೇ ಕೆಲವು ಗ್ರಾಮಗಳಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ದುಸ್ಥಿತಿಯಲ್ಲಿದ್ದು, ಸಮರ್ಪಕವಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮುಂಬರುವ ಬೇಸಿಗೆಯಲ್ಲಿ ಬಿಸಿಲಿನ ತಾಪವು ಹೆಚ್ಚಾಗುವ ಸಂಭವವಿದ್ದು, ಬೇಸಿಗೆಯು ಸಂಭವಿಸುವ ಮುಂಚಿತವಾಗಿ ಈ ಭಾಗದ ಪ್ರತೀ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಸರ್ಕಾರವು ಚಿಂತಿಸುವುದೇ ;

(ಇ) ಇಡೀ ಕಲ್ಯಾಣ ಕರ್ನಾಟಕ ಭಾಗದಲ್ಲಿ ಬರುವ ಎಲ್ಲಾ ಜಿಲ್ಲೆಗಳ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರನ್ನು ಪೂರೈಸುವ ಸಂಬಂಧ ಇಲಾಖೆಯು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ವಿಶೇಷ ಪ್ಯಾಕೇಜ್ ಅನ್ನು ಜಾರಿಗೊಳಿಸುವ ಸಂಬಂಧ ಸರ್ಕಾರದ ನಿಲುವೇನು ;

(ಈ) ಯಾವ ಕಾಲಮಿತಿಯೊಳಗೆ ಈ ಶುದ್ಧ ಕುಡಿಯುವ ನೀರಿನ ಸಮಸ್ಯೆಯನ್ನು ಸರ್ಕಾರದಿಂದ ಪರಿಹರಿಸಲಾಗುವುದು ?

## ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ಇಲಾಖೆಯ ಸೌಲಭ್ಯಗಳನ್ನು ವಿಸ್ತರಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೭ (೧೯೯೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮನೆ ಕೆಲಸ, ಕೂಲಿ ಕೆಲಸ ಹಾಗೂ ಹೋಟೆಲ್ ಕೆಲಸ ಸೇರಿದಂತೆ ಇನ್ನಿತರೆ ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುತ್ತಿರುವ ಮಹಿಳೆಯರನ್ನು ಒಳಗೊಂಡಂತೆ ಎಲ್ಲಾ ಕಾರ್ಮಿಕರು ಕಾರ್ಮಿಕ ಇಲಾಖೆಯ ಸೇವೆಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುತ್ತಿರುವ ಮಹಿಳೆಯರನ್ನು ಒಳಗೊಂಡಂತೆ ಎಲ್ಲಾ ಕಾರ್ಮಿಕರ ಗಣತಿಯನ್ನು ಸರ್ಕಾರದಿಂದ ಮಾಡಲಾಗಿದೆಯೇ ;

(ಇ) ಇಲ್ಲವಾದಲ್ಲಿ, ಸದರಿ ಗಣತಿಯನ್ನು ಸರ್ಕಾರದಿಂದ ಕೈಗೊಂಡು, ಪ್ರತಿಯೊಬ್ಬರಿಗೂ ನೋಂದಣಿಯನ್ನು ಮಾಡಿಸಿ ಇಲಾಖೆಯಿಂದ ದೊರೆಯುವ ಸೌಲಭ್ಯವನ್ನು ಒದಗಿಸುವ ಕುರಿತು ಸರ್ಕಾರದ ನಿಲುವೇನು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರದಿಂದ ಕ್ರಮವಹಿಸಲಾಗುವುದು ?

## AI ತಂತ್ರಜ್ಞಾನದಿಂದ ಉಂಟಾಗುವ ಉದ್ಯೋಗ ನಷ್ಟದ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೧೦೧೮ (೧೨೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) AI ತಂತ್ರಜ್ಞಾನ ವೇಗವಾಗಿ ಜಗತ್ತಿನಲ್ಲಿ ವಿಸ್ತರಿಸುತ್ತಿರುವುದರಿಂದ ಕರ್ನಾಟಕ ರಾಜ್ಯದ ಯಾವ ಯಾವ ಕ್ಷೇತ್ರಗಳಲ್ಲಿ ಯಾವ ರೀತಿಯಲ್ಲಿ ಪರಿಣಾಮ ಉಂಟಾಗಬಹುದೆಂಬ ಅಂದಾಜನ್ನು ನಡೆಸಲಾಗಿದೆಯೇ ; (ವಿವರ ಒದಗಿಸುವುದು)

(ಆ) ಇತ್ತೀಚೆಗೆ ನವದೆಹಲಿಯಲ್ಲಿ ನಡೆದ ಅಂತರ್ ರಾಷ್ಟ್ರೀಯ AI ಸಮ್ಮೇಳನದಲ್ಲಿ ನಮ್ಮ ರಾಜ್ಯಕ್ಕೆ ಇರುವ Potential ನ್ನೂ ಸರ್ಕಾರ ಯಾವ ರೀತಿಯಲ್ಲಿ ಗುರುತಿಸಿಕೊಂಡು ಬಂದಿದೆ ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ AI ತಂತ್ರಜ್ಞಾನವನ್ನು ಯುವ ಪೀಳಿಗೆಗೆ ಪರಿಚಯಿಸಿ ಈಗಾಗಲೇ ಐಟಿ ಕ್ರಾಂತಿ ಉಂಟಾದಂತೆ AI ಕ್ಷೇತ್ರದಲ್ಲೂ ಸ್ಥಾಪಿಸಲು ಸರ್ಕಾರದ ಮುಂದಿರುವ ಆಲೋಚನೆಗಳೇನು ? (ವಿವರ ಒದಗಿಸುವುದು)

## ಶೇಂಗಾ ಬೆಳೆಯನ್ನು ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೦೧೯ (೧೧೭೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಜಿಲ್ಲೆಗಳಲ್ಲಿ ಹೆಚ್ಚಾಗಿ ಶೇಂಗಾ ಬೆಳೆಯಲಾಗುತ್ತಿದೆ ;

(ಆ) ಶೇಂಗಾ ಬಿತ್ತನೆ ಪ್ರದೇಶ ವರ್ಷದಿಂದ ವರ್ಷಕ್ಕೆ ಗಣನೀಯವಾಗಿ ಕುಗ್ಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ಮೂರು ವರ್ಷಗಳಲ್ಲಿ ಶೇಂಗಾ ಬಿತ್ತನೆಯ ಪ್ರದೇಶದ ವಿವರ ನೀಡುವುದು ; (ಜಿಲ್ಲಾವಾರು, ವರ್ಷವಾರು ಮಾಹಿತಿ ಒದಗಿಸುವುದು)

(ಇ) ಅಡಿಗೆ ಎಣ್ಣೆ ಉತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸಲು ಎಣ್ಣೆ ಕಾಳುಗಳ ಉತ್ಪಾದನೆ ಹೆಚ್ಚಿಸಲು ಇರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಯಾವುವು ; ಇವುಗಳಿಂದ ರೈತರಿಗೆ ಸಿಗುವ ಸೌಲಭ್ಯಗಳೇನು ;

(ಈ) ಇತ್ತೀಚೆಗೆ ಬೆಲೆ ಕುಸಿತ, ಮಳೆಯ ಅಭಾವ, ಉತ್ತಮ ಬೆಂಬಲ ಬೆಲೆ ಸಿಗದ ಕಾರಣ ಶೇಂಗಾ ಉತ್ಪಾದನೆ ಗಣನೀಯವಾಗಿ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರೈತರ ಸಂಕಷ್ಟಕ್ಕೆ ಸ್ಪಂದಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಸರ್ಕಾರ ಶೇಂಗಾ ಬೋರ್ಡ್ ಸ್ಥಾಪಿಸುವ ಮೂಲಕ ಶೇಂಗಾ ಬೆಳೆಗಾರರ ಹಿತಕಾಯುವುದೇ ; ಶೇಂಗಾ ಬೆಳೆಗಾರರ ಹಿತ ಕಾಪಾಡಲು, ಶೇಂಗಾ ಬೆಳೆಯನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಅರಿವು ಕೇಂದ್ರಗಳ (ಗ್ರಂಥಾಲಯ) ಮೇಲ್ವಿಚಾರಕರ ವೇತನ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೦೨೦ (೧೧೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಇರುವ ಅರಿವು ಕೇಂದ್ರಗಳ (ಗ್ರಂಥಾಲಯ) ಮೇಲ್ವಿಚಾರಕರ ಸಂಖ್ಯೆ ಎಷ್ಟು ;

(ಆ) ಅರಿವು ಕೇಂದ್ರಗಳ ಮೇಲ್ವಿಚಾರಕರಿಗೆ ನೀಡುತ್ತಿರುವ ವೇತನವೆಷ್ಟು ; ಅದರಲ್ಲಿ ಸರ್ಕಾರದ ಪಾಲು ಎಷ್ಟು ಮತ್ತು ಗ್ರಾಮ ಪಂಚಾಯಿತಿಯ ಪಾಲು ಎಷ್ಟು ;

(ಇ) ಹಲವು ಗ್ರಾಮ ಪಂಚಾಯತಿಗಳಿಂದ ನೀಡಬೇಕಾದ ವೇತನವನ್ನು ಮೇಲ್ವಿಚಾರಕರಿಗೆ ನೀಡದೆ ಇರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಮೊತ್ತವನ್ನು ಪಾವತಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಈ) ಹಲವು ಗ್ರಾಮ ಪಂಚಾಯಿತಿಗಳಲ್ಲಿ ಆರ್ಥಿಕ ಮುಗ್ಗಟ್ಟು ಇರುವ ಕಾರಣ ವೇತನ ಪಾವತಿ ಮಾಡಲು ಸಾಧ್ಯವಾಗಿರುವುದಿಲ್ಲವಾದ್ದರಿಂದ ಪೂರ್ಣ ಪ್ರಮಾಣದ ವೇತನವನ್ನು ಸರ್ಕಾರದಿಂದ ಪಾವತಿ ಮಾಡಲಾಗುವುದೇ ; ಇಲ್ಲದೆ ಇದ್ದಲ್ಲಿ, ಮೇಲ್ವಿಚಾರಕರಿಗೆ ಸಕಾಲದಲ್ಲಿ ವೇತನ ಪಾವತಿಗೆ ಸರ್ಕಾರ ಕೈಗೊಳ್ಳುವ ಕ್ರಮವೇನು ?

## ರಾಜ್ಯದ ಹಲವೆಡೆ ನೀರಿನ ಸಮಸ್ಯೆಯಿರುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೦೨೧ (೧೨೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೇಸಿಗೆ ಅರಂಭಕ್ಕೂ ಮೊದಲೇ ರಾಜ್ಯದಲ್ಲಿ ಕೆಲವೆಡೆ ನೀರಿನ ಸಮಸ್ಯೆ ಪ್ರಾರಂಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಜಿಲ್ಲೆಗಳಲ್ಲಿ ನೀರಿನ ಸಮಸ್ಯೆ ಕಂಡು ಬಂದಿದೆ ; ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ತುಮಕೂರು ಮತ್ತು ದಾವಣಗೆರೆ ಜಿಲ್ಲೆಯ ಎಷ್ಟು ಗ್ರಾಮಗಳಲ್ಲಿ ನೀರಿನ ಸಮಸ್ಯೆ ಕಂಡು ಬಂದಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ನೀರಿನ ಸಮಸ್ಯೆ ನಿವಾರಣೆಗಾಗಿ ಹೊಸ ಕೊಳವೆ ಬಾವಿ ಕೊರೆಸಲು ಮತ್ತು ಹಳೆಯ ಬೋರ್ ವೆಲ್ ದುರಸ್ತಿ ಕಾರ್ಯಕ್ಕಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಈ) ಖಾಸಗಿ ಬೋರ್‌ವೆಲ್‌ಗಳನ್ನು ಕುಡಿಯುವ ನೀರಿಗೆ ಬಳಸಿದಲ್ಲಿ ಸದರಿ ರೈತರಿಗೆ/ಬೋರ್ ವೆಲ್ ಮಾಲೀಕರಿಗೆ ಸರ್ಕಾರದಿಂದ ನೀಡುವ ಪರಿಹಾರವೇನು ?

# ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ನೌಕರರ ಜ್ಯೇಷ್ಠತಾ ಪಟ್ಟಿ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೦೨೨ (೧೧೭೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ಗಳಲ್ಲಿ ಮಂಜೂರಾದ ನೌಕರರ ಸಂಖ್ಯೆ ಮತ್ತು ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ಮತ್ತು ಖಾಲಿಯಿರುವ ನೌಕರರ ಸಂಖ್ಯೆ ಎಷ್ಟು ;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಪ್ರತಿವರ್ಷ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆ ಮತ್ತು ಎಷ್ಟು ಜಿಲ್ಲಾ ಪಂಚಾಯಿತಿಗಳಲ್ಲಿ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿಲ್ಲ ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಜ್ಯೇಷ್ಠತಾ ಪಟ್ಟಿಯನ್ನು ಎಷ್ಟು ವರ್ಷಗಳಿಗೆ ಒಂದು ಬಾರಿ ಪ್ರಕಟಿಸಬೇಕೆಂಬ ನಿಯಮವಿದೆ ; ಸದರಿ ನಿಯಮ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ನೌಕರರಿಗೂ ಅನ್ವಯವಾಗುತ್ತದೆಯೇ ; ಆಗುವುದಿದ್ದರೆ, ಹಲವು ತಾಲ್ಲೂಕು ಮತ್ತು ಜಿಲ್ಲೆಗಳಲ್ಲಿ ಜ್ಯೇಷ್ಠತಾ ಪಟ್ಟಿ ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರತಿ ವರ್ಷ ಜ್ಯೇಷ್ಠತಾ ಪಟ್ಟಿ ಪ್ರಕಟಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಗ್ರೂಪ್ 'ಸಿ' ನೌಕರರ ಬಡ್ತಿಗೆ ಅರ್ಹತೆಯನ್ನು ಪರಿಗಣಿಸಲು ಇರುವ ಮಾನದಂಡಗಳೇನು ?

## ಖಾಸಗಿ ಟ್ರಸ್ಟ್ ಮತ್ತು ಹಾಸ್ಟೆಲ್‌ಗಳ ಸ್ಥಾಪಿಸುವ ಅಥವಾ ನಡೆಸುವ ಮಾರ್ಗಸೂಚಿಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೩ (೧೧೭೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೋಷಕರ ಒಪ್ಪಿಗೆ ಹೊಂದಿರುವ ಮಕ್ಕಳಿಗೆ ಟ್ರಸ್ಟ್‌ಗಳು ಅಥವಾ ವ್ಯಕ್ತಿಗಳ ಅಡಿಯಲ್ಲಿ ಖಾಸಗಿ ಹಾಸ್ಟೆಲ್‌ಗಳನ್ನು ಸ್ಥಾಪಿಸಲು ನಿಗದಿಗೊಳಿಸಿರುವ ಮಾರ್ಗಸೂಚಿಗಳ ವಿವರಗಳನ್ನು ಒದಗಿಸುವುದು ;

(ಆ) ರಾಜ್ಯ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ಇತರ ರಾಜ್ಯಗಳ ಮಕ್ಕಳು ಉಳಿಯಬಹುದೇ ; ಹೊರ ರಾಜ್ಯದ ಮಕ್ಕಳಿಗೆ ಅವಕಾಶ ನೀಡುವ ವಸತಿ ನಿಲಯಗಳು ಮತ್ತು ಕಲ್ಯಾಣ ಯೋಜನೆಗಳ ವಿವರಗಳನ್ನು ಒದಗಿಸುವುದು ;

(ಇ) ಸ್ಥಳೀಯ ಶಾಲೆಗಳಲ್ಲಿ ಪ್ರವೇಶ ಪಡೆಯುತ್ತಿರುವ ಮತ್ತು ಪೋಷಕರ ಒಪ್ಪಿಗೆಯೊಂದಿಗೆ ಹಾಸ್ಟೆಲ್‌ಗಳಲ್ಲಿ ವಾಸಿಸುವ ಬಾಲಕಿಯರು ಮತ್ತು ಬಾಲಕರಿಬ್ಬರಿಗೂ ಖಾಸಗಿ ಹಾಸ್ಟೆಲ್‌ಗಳನ್ನು ಗುರುತಿಸಲು ಸಮಾಜ ಕಲ್ಯಾಣ ಇಲಾಖೆಯು ಹಾಸ್ಟೆಲ್ ಅಧಿಕಾರಿಗಳಿಗೆ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ; ಅನುಮೋದಿತ ಖಾಸಗಿ ಹಾಸ್ಟೆಲ್‌ಗಳ ಪಟ್ಟಿಯನ್ನು ಒದಗಿಸುವುದು ;

(ಈ) ೧೮ ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಮಠಗಳು ಮತ್ತು ಧಾರ್ಮಿಕ ಸಂಸ್ಥೆಗಳು ನಡೆಸುವ ಉಚಿತ ಹಾಸ್ಟೆಲ್‌ಗಳಲ್ಲಿ ಉಳಿದು ಅಧ್ಯಯನ ಮಾಡುತ್ತಾರೆಯೇ ; ಉಚಿತ ಹಾಸ್ಟೆಲ್‌ಗಳನ್ನು ನಿರ್ವಹಿಸುವ ಮಠಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಮಾರ್ಗಸೂಚಿಗಳನ್ನು ನೀಡಲಾಗಿದೆಯೇ ; ಹಾಗಿದ್ದಲ್ಲಿ, ಮಾರ್ಗಸೂಚಿಗಳ ವಿವರಗಳನ್ನು ಒದಗಿಸುವುದು ;

(ಉ) ಮಕ್ಕಳಿಗೆ ಸರ್ಕಾರಿ ಹಾಸ್ಟೆಲ್‌ಗಳನ್ನು ನಡೆಸುವಾಗ ಸಮಾಜ ಕಲ್ಯಾಣ ಇಲಾಖೆಯಿಂದ ಸಿಡಬ್ಲ್ಯೂಸಿ ಅಧಿಕಾರಿಗಳಿಗೆ ಕಲ್ಪಿಸಿರುವ ಮಾರ್ಗಸೂಚಿಗಳು ಯಾವುವು ; ಮಕ್ಕಳು ಸಿಡಬ್ಲ್ಯೂಸಿಗೆ ವರದಿ ಮಾಡುವಂತೆ ಒತ್ತಾಯಿಸಲಾಗಿದೆಯೇ ; ಹಾಗಿದ್ದಲ್ಲಿ, ಸಮಾಜ ಕಲ್ಯಾಣ ಇಲಾಖೆಯಿಂದ ಸಿಡಬ್ಲ್ಯೂಸಿಗೆ ಸೂಚಿಸಲಾದ ಮಾರ್ಗಸೂಚಿಗಳ ಮಾಹಿತಿ ಒದಗಿಸುವುದು ?

## ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೆ ಇರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೪ (೧೧೭೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷದಿಂದ ಹಿಂದುಳಿದ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ಕೋರ್ಸ್ ವಿದ್ಯಾರ್ಥಿಗಳಿಗೆ ನೀಡಿರುವ ವಿದ್ಯಾರ್ಥಿ ವೇತನದ ಮೊತ್ತವೆಷ್ಟು ;

(ಆ) ಕಳೆದ ಮೂರು ವರ್ಷಗಳಿಂದ ಈ ಇಲಾಖೆಯಲ್ಲಿ ಅನುದಾನದ ಕೊರತೆಯಿಂದ ಸುಮಾರು ೨೬೩.೫೯ ಕೋಟಿ ರೂ. ವಿದ್ಯಾರ್ಥಿ ವೇತನವನ್ನು ಬಾಕಿ ಉಳಿಸಿಕೊಂಡಿರುವುದು ನಿಜವೇ ;

(ಇ) ಕಳೆದ ಮೂರು ವರ್ಷದಿಂದ ಇಲ್ಲಿಯವರೆಗೂ ವಿದ್ಯಾರ್ಥಿ ವೇತನಕ್ಕಾಗಿ ಬಂದಂತಹ ಅರ್ಜಿಗಳ ಸಂಖ್ಯೆಯೆಷ್ಟು ; ಇದರಲ್ಲಿ ಅರ್ಹತೆವುಳ್ಳವರು ಹಾಗೂ ಅರ್ಹತೆ ಇಲ್ಲದವರ ಸಂಖ್ಯೆಯೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಅರ್ಹತೆವುಳ್ಳ ಎಲ್ಲಾ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿ ವೇತನ ನೀಡಲಾಗಿದೆಯೇ ;

(ಉ) ಮೆಟ್ರಿಕ್ ನಂತರದ ಕೋರ್ಸ್‌ಗಳ ವಿದ್ಯಾರ್ಥಿಗಳು ಯಾವ ಯಾವ ಯೋಜನೆಯಡಿಯಲ್ಲಿ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಾಗಿರುತ್ತಾರೆ ?

## ಬೆಂಗಳೂರು ನಗರ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ (SCP/TSP) ಕಾಮಗಾರಿ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೫ (೧೧೭೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಗಳಲ್ಲಿ SCP/TSP ಯೋಜನೆಯಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಕಾಮಗಾರಿಗಳು ಕೈಗೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಸಮಾಜ ಕಲ್ಯಾಣ ಇಲಾಖೆಗೆ ಬರುವ ನಿಗಮಗಳಿಗೆ ಎಷ್ಟು ಅನುದಾನವನ್ನು ನೀಡಲಾಗಿದೆ ಮತ್ತು ನೀಡಲಾಗಿದ್ದ ಅನುದಾನದಲ್ಲಿ ಎಷ್ಟು ಖರ್ಚು ಮಾಡಲಾಗಿದೆ ; (ವಿವರ ನೀಡುವುದು)

(ಇ) ನಿಗಮಗಳಿಂದ ಕಳೆದ ೨ ವರ್ಷಗಳಲ್ಲಿ ಕೊಳವೆ ಬಾವಿ ಕೊರೆಯಲು ಬಿಡುಗಡೆಯಾದ ಅನುದಾನವೆಷ್ಟು ;

(ಈ) ಬೆಂಗಳೂರು ನಗರ ಜಿಲ್ಲೆಯ ಸುತ್ತಮುತ್ತ ಈವರೆಗೂ ಕೊರೆದಿರುವ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿರುವ ವಲಸೆ ಕಾರ್ಮಿಕರಿಂದ ಸ್ಥಳೀಯರು ನಿರುದ್ಯೋಗಿಯಾಗುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೬ (೧೨೪೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಲಸೆ ಕಾರ್ಮಿಕರ ಸಂಖ್ಯೆಯೆಷ್ಟು ಹಾಗೂ ಇದುವರೆಗೂ ಎಷ್ಟು ಕಾರ್ಮಿಕರು ಇಲಾಖೆಯಲ್ಲಿ ನೋಂದಾಯಿಸಿ ಕೊಂಡಿರುತ್ತಾರೆ ಹಾಗೂ ಯಾವ ಯಾವ ರಾಜ್ಯದಿಂದ ಬಂದಿರುತ್ತಾರೆ ಮತ್ತು ಇವರಿಗೆ ನೀಡಲಾಗುತ್ತಿರುವ ಸೌಲಭ್ಯಗಳೇನು ;

(ಆ) ಅನ್ಯ ರಾಜ್ಯದ ಕಾರ್ಮಿಕರ ಎದುರು ಸ್ಥಳೀಯ ಕಾರ್ಮಿಕರಿಗೆ ಕೆಲಸವಿಲ್ಲದಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ರಾಜ್ಯದಲ್ಲಿ ವಲಸೆ ಕಾರ್ಮಿಕರ ಸಂಖ್ಯೆ ಸುಮಾರು ೨೦ ಲಕ್ಷಕ್ಕೂ ಹೆಚ್ಚಿದ್ದು, ಇದರಲ್ಲಿ ಕೇವಲ ೫% ರಷ್ಟು ವಲಸಿಗರು ಮಾತ್ರ ನೋಂದಣಿ ಮಾಡಿಸಿಕೊಂಡಿರುವುದು ನಿಜವೇ ;

(ಈ) ವಲಸಿಗರಿಂದ ನಗರ ಮತ್ತು ಗ್ರಾಮೀಣ ಭಾಗದ ಸ್ಥಳೀಯ ಕಾರ್ಮಿರಿಗೆ ಅನ್ಯಾಯವಾಗುತ್ತಿದ್ದು, ಇದಕ್ಕೆ ಕಾರಣವೇನು ;

(ಉ) ವಲಸಿಗರು ಎಲ್ಲಾ ಕೆಲಸಗಳನ್ನು ಮಾಡುತ್ತಿರುವುದರಿಂದ, ರಾಜ್ಯದಲ್ಲಿರುವ ಕನ್ನಡಿಗರು ನಿರುದ್ಯೋಗಿಗಳಾಗುತ್ತಾರೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಭಿಕ್ಷಾಟನಾ ಸೆಸ್ ಹಣವನ್ನು ಇಲಾಖೆ ವರ್ಗಾಯಿಸದೇ ಬಾಕಿ ಉಳಿಸಿಕೊಂಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೭ (೧೨೪೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ ರಿಂದ ೨೦೨೨ ರವರೆಗೆ ರಾಜ್ಯದ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಬಿಬಿಎಂಪಿ), ಸ್ಥಳೀಯ ಸಂಸ್ಥೆಗಳಿಂದ (ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿ) ಇವುಗಳಿಂದ ಸಂಗ್ರಹಿಸಲಾಗಿರುವ ಭಿಕ್ಷಾಟನಾ ಉಪಕರಗಳ (ಸೆಸ್) ಹಣವೆಷ್ಟು ; (ಪ್ರತ್ಯೇಕವಾಗಿ ಮಾಹಿತಿ ಒದಗಿಸುವುದು)

(ಆ) ಸಂಗ್ರಹಿಸಲಾಗಿರುವ ಹಣವನ್ನು ಪೂರ್ಣ ಪ್ರಮಾಣದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ವರ್ಗಾಯಿಸಲಾಗಿದೆಯೇ ಅಥವಾ ಬಾಕಿ

ಉಳಿಸಿಕೊಳ್ಳಲಾಗಿದೆಯೇ ; ಬಾಕಿ ಉಳಿಸಿಕೊಂಡಿದ್ದಲ್ಲಿ, ಯಾವ ಕಾರಣದಿಂದ ಬಾಕಿ ಉಳಿಸಿಕೊಳ್ಳಲಾಗಿದೆ ; ಇದರ ಜವಾಬ್ದಾರಿ ಯಾವ ಅಧಿಕಾರಿಗೆ ವಹಿಸಲಾಗಿದೆ ; ಇದುವರೆಗೂ ಯಾವ ಕ್ರಮ ತೆಗೆದುಕೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದ ಎಲ್ಲಾ ಪ್ರಮುಖ ನಗರಗಳಲ್ಲಿ ಭಿಕ್ಷಾಟನೆ ಮಾಡುವವರ ಸಂಖ್ಯೆ ಹೆಚ್ಚಾಗಿದೆ ಹಾಗೂ ಇದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಳೆದ ೫ ವರ್ಷದಿಂದ ಇಲ್ಲಿಯವರೆಗೂ ಸಾರ್ವಜನಿಕ ಸ್ಥಳಗಳಲ್ಲಿ ಭಿಕ್ಷೆ ಬೇಡುವವರನ್ನು ಹಿಡಿಯಲಾಗಿದ್ದು, ಅವರಿಗೆ ಪರ್ಯಾಯವಾಗಿ ಯಾವ ಪರಿಹಾರವನ್ನು ನೀಡಲಾಗಿದೆ ;

(ಉ) ಕಳೆದ ೩ ವರ್ಷದಿಂದ ಕೇಂದ್ರ ಪರಿಹಾರ ಕೇಂದ್ರಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಇವುಗಳನ್ನು ಯಾವ ಯಾವ ಕಾರ್ಯಗಳಿಗೆ ಬಳಸಿಕೊಳ್ಳಲಾಗಿದೆ ಹಾಗೂ ಸಂಗ್ರಹವಾಗುವ ಭಿಕ್ಷುಕರ ಸೆಸ್ ಹಣವನ್ನು, ಭಿಕ್ಷುಕರ ಕ್ಷೇಮಾಭಿವೃದ್ಧಿ ಕಾರ್ಯಗಳನ್ನು ಹೊರತುಪಡಿಸಿ, ಬೇರೆ ಬೇರೆ ಕೆಲಸಗಳಿಗೆ ಬಳಸಿಕೊಳ್ಳಲು ನಿಯಮದಲ್ಲಿ ಅವಕಾವಿದೆಯೇ ? (ನಿಯಮದ ಪ್ರತಿಯನ್ನು ಒದಗಿಸುವುದು)

## ವಿದ್ಯಾರ್ಥಿ ವೇತನ ಬಾಕಿ ಉಳಿಸಿಕೊಂಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೮ (೧೨೪೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷದಿಂದ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ಕೋರ್ಸ್ ವಿದ್ಯಾರ್ಥಿಗಳಿಗೆ ನೀಡಿರುವ ವಿದ್ಯಾರ್ಥಿ ವೇತನದ ಮೊತ್ತವೆಷ್ಟು ;

(ಆ) ಕಳೆದ ಮೂರು ವರ್ಷಗಳಿಂದ ಸರ್ಕಾರದಲ್ಲಿ ಅನುದಾನ ಕೊರತೆಯಿಂದ ಸುಮಾರು ೨೬೩.೫೯ ಕೋಟಿ ರೂ. ವಿದ್ಯಾರ್ಥಿ ವೇತನವನ್ನು ಬಾಕಿ ಉಳಿಸಿಕೊಂಡಿರುವುದು ನಿಜವೇ ;

(ಇ) ಕಳೆದ ಮೂರು ವರ್ಷದಿಂದ ಇಲ್ಲಿಯವರೆಗೂ ವಿದ್ಯಾರ್ಥಿ ವೇತನಕ್ಕಾಗಿ ಬಂದಂತ ಅರ್ಜಿಗಳ ಸಂಖ್ಯೆಯೆಷ್ಟು ; ಇದರಲ್ಲಿ ಅರ್ಹತೆವುಳ್ಳವರು ಹಾಗೂ ಅರ್ಹತೆ ಇಲ್ಲದವರ ಸಂಖ್ಯೆಯೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಅರ್ಹತೆವುಳ್ಳ ಎಲ್ಲಾ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿ ವೇತನ ನೀಡಲಾಗಿದೆಯೇ ;

(ಉ) ಮೆಟ್ರಿಕ್ ನಂತರದ ಕೋರ್ಸ್‌ಗಳ ವಿದ್ಯಾರ್ಥಿಗಳು ಯಾವ ಯಾವ ಯೋಜನೆಯಡಿಯಲ್ಲಿ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಾಗಿರುತ್ತಾರೆ ?

## ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ನೀಡಲಾಗಿರುವ ಸಂಸ್ಥೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೯ (೧೨೪೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಕಳೆದ ೩ ವರ್ಷದಿಂದ ಇಲ್ಲಿಯವರೆಗೂ ವಿದ್ಯಾರ್ಥಿಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಗೆಂದು ಎಷ್ಟು ಹಣವನ್ನು ಖರ್ಚು ಮಾಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ನೀಡಲಾಗುವ ಸಂಸ್ಥೆಗಳನ್ನು ಯಾವ ನಿಯಮದಡಿಯಲ್ಲಿ ಆಯ್ಕೆ ಮಾಡಿಕೊಳ್ಳಲಾಗುವುದು ; ಸರ್ಕಾರ ವಿಧಿಸಿರುವ ಮಾನದಂಡವೇನು ;

(ಇ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಅರ್ಹ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿಗೆಂದು ನಿಗದಿಪಡಿಸಿರುವ ಕೋಟ್ಯಾಂತರ ರೂಪಾಯಿಗಳ ಟೆಂಡರ್ ಅನ್ನು ನುರಿತ ತರಬೇತಿ ಸಂಸ್ಥೆಗೆ ನೀಡದೆ, ಟೆಂಡರ್‌ನಲ್ಲಿ ಎಲ್–೧ ಆಗಿದ್ದ ಕಡಿಮೆ ಗುಣಮಟ್ಟದ ತರಬೇತಿ ಸಂಸ್ಥೆಗೆ ಟೆಂಡರ್ ನೀಡಲಾಗಿದೆಯೇ ;

(ಈ) ಡಾ॥ ಬಾಬು ಜಗಜೀವನರಾಮ್ ಭವನ (ಸುಮನಹಳ್ಳಿ) ಹಾಗೂ ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಸುಸಜ್ಜಿತ ತರಬೇತಿ ಕೇಂದ್ರಗಳ ಸೌಲಭ್ಯಗಳಿದ್ದರೂ ಸಹ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ, ಖಾಸಗಿ ಸಂಸ್ಥೆಗಳಿಗೆ ತರಬೇತಿ ನೀಡುವ ಉದ್ದೇಶವೇನು ?

## ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಬೇಸಿಗೆ ಕಾಲದಲ್ಲಿ ನೀರಿನ ಅಭಾವ ಉಂಟಾಗದಂತೆ ರೂಪಿಸಲಾದ ಯೋಜನೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೦ (೧೨೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗುವ ಹಿನ್ನಲೆ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ ಸರ್ಕಾರ ಯಾವ ಯೋಜನೆ (ಆಕ್ಷನ್ ಪ್ಲಾನ್) ರೂಪಿಸಿದೆ ; (ವಿವರ ಒದಗಿಸುವುದು)

(ಆ) ಟ್ಯಾಂಕರ್ ಮೂಲಕ ನೀರು ಪೂರೈಕೆ, ಬೋರ್‌ವೆಲ್ ಪುನಃಶ್ಚೇತನ, ಹೊಸ ಕುಡಿಯುವ ನೀರಿನ ಯೋಜನೆಗಳು ಹಾಗೂ ನೀರು ಸಂರಕ್ಷಣೆ ಕ್ರಮಗಳ ಕುರಿತಂತೆ ಕೈಗೊಂಡಿರುವ ಕ್ರಮಗಳೇನು ;

(ಇ) ಮುಂದಿನ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗದಂತೆ ತಡೆಗಟ್ಟಲು ಯಾವುದೇ ವಿಶೇಷ ಪ್ಯಾಕೇಜ್ ಅಥವಾ ತುರ್ತು ನಿಧಿ ಮೀಸಲಿಟ್ಟಿದೆಯೇ ? (ವಿವರ ಒದಗಿಸುವುದು)

## ಕಲ್ಯಾಣ ಕರ್ನಾಟಕ ಪ್ರದೇಶದ ಗ್ರಾಮ ಪಂಚಾಯಿತಿಗಳ ಸುಪರ್ದಿಯಲ್ಲಿರುವ ಕುಡಿಯುವ ನೀರಿನ ಘಟಕಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೧ (೧೨೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲಾವಾರು ಗ್ರಾಮ ಪಂಚಾಯಿತಿಗಳ ಸುಪರ್ದಿಯಲ್ಲಿ ಇರುವ ಒಟ್ಟು ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಘಟಕಗಳು ಎಷ್ಟು ; ಕಾರ್ಯನಿರ್ವಹಿಸದೆ/ದುರಸ್ತಿಯಲ್ಲಿರುವ ಘಟಕಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಘಟಕಗಳ ನಿರ್ವಹಣೆ ಮತ್ತು ದುರಸ್ತಿ ಕಾರ್ಯಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ವೆಚ್ಚ ಮತ್ತು ಸಾಧನೆ ವಿವರ ನೀಡುವುದು)

(ಇ) ಹಲವಾರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ವಹಣೆ ಕೊರತೆಯಿಂದ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವುಗಳನ್ನು ದುರಸ್ತಿಗೊಳಿಸಲು ಹಾಗೂ ನಿಯಮಿತ ನಿರ್ವಹಣೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

# ಕಳೆದ ೩ ವರ್ಷಗಳಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ನಿರ್ಮಾಣ ಮಾಡಲಾದ ಕೃಷಿ ಹೊಂಡಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೨ (೧೨೨೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ (೨೦೨೩–೨೪ ರಿಂದ ೨೦೨೫–೨೬ರವರೆಗೆ) ಕೊಪ್ಪಳ ಜಿಲ್ಲೆಯಲ್ಲಿ ನಿರ್ಮಾಣ ಮಾಡಲಾದ ಕೃಷಿ ಹೊಂಡಗಳ ಒಟ್ಟು ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

(ಆ) ಕೃಷಿ ಹೊಂಡ ನಿರ್ಮಾಣಕ್ಕೆ ಸರ್ಕಾರದಿಂದ ನೀಡಲಾಗುವ ಸಹಾಯಧನ (Subsidy) ಪ್ರಮಾಣ ಎಷ್ಟು ; ಸಾಮಾನ್ಯ ವರ್ಗ, ಎಸ್ಸಿ/ಎಸ್ಟಿ ಹಾಗೂ ಇತರ ವರ್ಗಗಳಿಗಾಗಿ ಪ್ರತ್ಯೇಕ ಸಹಾಯಧನ ದರ ಎಷ್ಟು ; (ಮಾಹಿತಿಯನ್ನು ಒದಗಿಸುವುದು)

(ಇ) ಈ ಯೋಜನೆಯಡಿ ಲಾಭ ಪಡೆದಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ವರ್ಗವಾರು ವಿವರ ಒದಗಿಸುವುದು)

(ಈ) ಇನ್ನೂ ಅನುದಾನ ಬಿಡುಗಡೆಗಾಗಿ ಬಾಕಿ ಇರುವ ಅರ್ಜಿಗಳ/ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿ ಮೊತ್ತದ ಒಟ್ಟು ಪ್ರಮಾಣ ಎಷ್ಟು ;

(ಉ) ಬಾಕಿ ಇರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಅದನ್ನು ಯಾವ ದಿನಾಂಕದೊಳಗೆ ಫಲಾನುಭವಿಗಳಿಗೆ ಪಾವತಿಸಲಾಗುವುದು ? (ಮಾಹಿತಿಯನ್ನು ಒದಗಿಸುವುದು)

## ತುಳು ಭಾಷಿಗರ ಬೇಡಿಕೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೩ (೧೨೭೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಳು ಭಾಷೆ ಮಾತನಾಡುವ ತುಳು ಭಾಷಿಗರು ಪ್ರಪಂಚದಾದ್ಯಂತ ದೊಡ್ಡ ಸಂಖ್ಯೆಯಲ್ಲಿದ್ದು, ರಾಜ್ಯದ ಎರಡನೇ ಭಾಷೆಯನ್ನಾಗಿ ಮಾಡಬೇಕೆಂಬ ಬೇಡಿಕೆಯು ಯಾವ ಹಂತದಲ್ಲಿದೆ ; ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ತುಳು ಭಾಷಿಗರು ಇದ್ದಾರೆ ; ದೇಶ ಮತ್ತು ರಾಜ್ಯದಲ್ಲಿರುವ ಅಂಕಿ–ಅಂಶಗಳನ್ನು ಸಂಗ್ರಹಿಸಲಾಗಿದೆಯೇ ; (ವಿವರ ನೀಡುವುದು)

(ಇ) ತುಳು ಅಕಾಡೆಮಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿ ಅರ್ಧದಲ್ಲಿಯೇ ನಿಂತಿದ್ದು ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ತುಳು ಭಾಷಿಗರಿಗೆ ಉನ್ನತ ಶಿಕ್ಷಣದಲ್ಲಿ ಯಾವ ಯಾವ ಹಂತದಲ್ಲಿ ಸಹಾಯ ಒದಗಿಸಲಾಗುವುದು ; (ವಿವರ ನೀಡುವುದು)

(ಉ) ತುಳು ಭಾಷೆಯನ್ನು ಕಲಿತು ತುಳು ಭಾಷೆಯಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗ ಮೀಸಲು ಇಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಊ) ತುಳು ಭಾಷೆ ಕಲಿಸಲು ಕೈಗೊಂಡ ಕ್ರಮವೇನು ; ಪ್ರಸ್ತುತ ತುಳು ಭಾಷೆ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಬೀಡಿ ಕಾರ್ಮಿಕರಿಗೆ ಪಾವತಿಸಲು ಬಾಕಿ ಇರುವ ಡಿ.ಎ ಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೪ (೧೨೭೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರಾವಳಿ ಜಿಲ್ಲೆಗಳಲ್ಲಿ ಬೀಡಿ ಕಾರ್ಮಿಕರಿಗೆ ಪಾವತಿಸಲು ಬಾಕಿ ಇರುವ ಡಿ.ಎ ಯನ್ನು ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಬೀಡಿ ಕಾರ್ಮಿಕರು ತಮ್ಮ ಉದ್ಯೋಗವನ್ನು ಕಳೆದುಕೊಳ್ಳುತ್ತಿದು, ನಿರಾಶ್ರಿತರಾಗುತ್ತಿರುವ ಕಾರ್ಮಿಕರಿಗೆ ಪುನರ್ ಉದ್ಯೋಗ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಬೀಡಿ ಕಾರ್ಮಿಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಬೀಡಿ ಕಾರ್ಮಿಕರಿಗಾಗಿ ಯಾವ ಯಾವ ಸವಲತ್ತು ನೀಡಲಾಗಿದೆ; ಕೇಂದ್ರ ಮತ್ತು ರಾಜ್ಯ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಕೊಂಕಣಿ ಅಕಾಡೆಮಿಯ ಕಟ್ಟಡದ ಅನುದಾನದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೫ (೧೨೭೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಕೊಂಕಣಿ ಅಕಾಡೆಮಿಯ ಕಟ್ಟಡವು ಅನುದಾನದ ಕೊರತೆಯಿಂದ ಪಾಳುಬಿದ್ದಿದ್ದು, ಈ ಬಗ್ಗೆ ಅನೇಕ ಬಾರಿ ದುರಸ್ತಿಗೆ ಬೇಡಿಕೆ ನೀಡಿದ್ದರು, ಯಾವುದೇ ಕ್ರಮಕೈಗೊಳ್ಳದೇ ಇರಲು ಕಾರಣವೇನು ; (ವಿವರ ನೀಡುವುದು)

(ಆ) ಕೊಂಕಣಿ ಅಕಾಡೆಮಿಯು ಕೊಂಕಣಿ ಭಾಷಿಕರನ್ನು ರಾಜ್ಯದ ವಿವಿಧ ಕಡೆಗಳಲ್ಲಿ ಇರುವ ಬಗ್ಗೆ ಅಂಕಿ–ಅಂಶಗಳನ್ನು ಸಂಗ್ರಹಿಸಲಾಗಿದೆಯೇ ; (ವಿವರ ನೀಡುವುದು)

(ಇ) ಕೊಂಕಣಿ ಭಾಷೆ ಪ್ರೋತ್ಸಾಹಿಸಲು ದೇಶ ವಿದೇಶಗಳಲ್ಲಿ ವಾಸಿಸುವ ಕೊಂಕಣಿ ಭಾಷಿಗರನ್ನು ಸಂಘಟಿಸಲು ಸರ್ಕಾರ ಯಾವುದಾದರು ಕಾರ್ಯಕ್ರಮ ಹಮ್ಮಿಕೊಂಡಿದೆಯೇ ; (ವಿವರ ನೀಡುವುದು)

(ಈ) ಕೊಂಕಣಿ ಭಾಷಿಕರು ವಿದೇಶಗಳಲ್ಲಿ ವಾಸವಾಗಿರುವುದರಿಂದ ಅಮೇರಿಕದಲ್ಲಿ 'ಅಕ್ಕ' ಮಾದರಿಯ ಕಾರ್ಯಕ್ರಮಗಳು ಆಯೋಜಿಸಲು ಕೊಂಕಣಿ ಭಾಷಿಗರನ್ನು ಒಟ್ಟುಗೂಡಿಸಲು ಯೋಜನೆ ಹಮ್ಮಿಕೊಳ್ಳಲಾಗಿದೆಯೇ ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಂಚಾಯತ್ ರಾಜ್ ಇಲಾಖೆಯಿಂದ ರಸ್ತೆ ಅಭಿವೃದ್ಧಿ ಪಡಿಸದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೬ (೧೨೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಪಂಚಾಯತ್ ರಾಜ್ ಇಲಾಖೆ ವತಿಯಿಂದ ಎಷ್ಟು ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ರಸ್ತೆಗಳನ್ನು ರಾಜ್ಯ ಹೆದ್ದಾರಿಯನ್ನಾಗಿ ಎಷ್ಟು ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ; ಇದಕ್ಕೆ ಖರ್ಚು ಮಾಡಿದ ಅಂದಾಜು ವೆಚ್ಚ ಎಷ್ಟು ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಯ ರಸ್ತೆ ಅಭಿವೃದ್ಧಿಗಾಗಿ ವಿನಿಯೋಗಿಸಿದ ಮೊತ್ತ ಎಷ್ಟು ; ಯಾವ ಯಾವ ರಸ್ತೆಗಳಿಗಾಗಿ ವಿವರ ನೀಡುವುದು ?

## ರಾಜ್ಯದಲ್ಲಿನ ಕುಬ್ಜ ಮಕ್ಕಳ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೭ (೧೨೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕುಬ್ಜ ಮಕ್ಕಳ ಸಂಖ್ಯೆ ಎಷ್ಟು ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಕುಬ್ಜ ಮಕ್ಕಳ ಸಂಖ್ಯೆಯನ್ನು ಹೇಗೆ ಮತ್ತು ಎಲ್ಲಿ ಗುರುತಿಸಲಾಗಿದೆ ;

(ಇ) ಕುಬ್ಜತೆಗೆ ಪ್ರಮುಖ ಹಾಗೂ ಪರೋಕ್ಷ ಕಾರಣಗಳೇನು ;

(ಈ) ಅವುಗಳ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳಲ್ಲಿ ಇ–ಖಾತಾ ಸ್ಥಗಿತವಾಗಿರುವ ಕುರಿತು

**ಶ್ರೀ ಟಿ.ಎನ್.ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೮ (೧೨೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಇ–ಖಾತಾ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ಹಾಗೂ ಇದಕ್ಕೆ ಕಾರಣಗಳೇನು ; ವಿವರ ನೀಡುವುದು ;

(ಇ) ೨೦೨೫ರ ಡಿಸೆಂಬರ್‌ನಲ್ಲಿ ಆರಂಭಿಸಿರುವ ಈ ಯೋಜನೆಯು ೨–೩ ತಿಂಗಳಲ್ಲಿ ತಂತ್ರಾಂಶದ ಸಮಸ್ಯೆ ಎಂದು ಹೇಳುತ್ತಿರುವುದು ಸರಿಯೇ ; ಹಾಗಿದ್ದಲ್ಲಿ, ಇ–ಖಾತಾ ನಿರ್ವಹಿಸುವ ಸಲುವಾಗಿ ಯಾವ ಸಾಫ್ಟ್‌ವೇರ್ ಕಂಪನಿಗೆ ಈ ಯೋಜನೆಯನ್ನು ವಹಿಸಲಾಗಿದ್ದು, ಆ ಕಂಪನಿಯ ಗುಣಮಟ್ಟವೇನು ; ವಿವರವಾದ ಮಾಹಿತಿ ಒದಗಿಸುವುದು ;

(ಈ) ಗ್ರಾಮೀಣ ಪ್ರದೇಶದಲ್ಲಿ ಬ್ಯಾಂಕ್ ಸಾಲ, ನೋಂದಣಿ, ಮ್ಯುಟೇಶನ್, ನಿರ್ಮಾಣ ಅಭಿವೃದ್ಧಿ ಕೆಲಸಗಳು ಕೈಗೊಳ್ಳದಿರುವುದರಿಂದ ಹಾಗೂ ಸರ್ಕಾರದ ಬೊಕ್ಕಸಕ್ಕೂ ನಷ್ಟವಾಗುತ್ತಿರುವುದರಿಂದ ತಂತ್ರಾಂಶದ ಸಮಸ್ಯೆ ಸರಿಹೋಗುವವರೆಗೂ ಹಳೆಯ ರೀತಿಯ "೯ ಮತ್ತು ೧೧ಎ" ಖಾತೆಯನ್ನು ಮುಂದುವರಿಸಲು ಸರ್ಕಾರಕ್ಕಿರುವ ಸಮಸ್ಯೆ ಏನು ? (ಈ ಬಗ್ಗೆ ಮಾಹಿತಿ ನೀಡುವುದು)

## ಹಿಂದುಳಿದ ವರ್ಗಗಳ ಸಮುದಾಯಗಳಿಗೆ ನೀಡಿರುವ ಅನುದಾನ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೩೯ (೧೨೯೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ವಿವಿಧ ಯೋಜನೆಗಳಡಿಯಲ್ಲಿ ಒದಗಿಸಿರುವ ಅನುದಾನವೆಷ್ಟು ಹಾಗೂ ಈ ಅನುದಾನವನ್ನು ಜಿಲ್ಲಾವಾರು ಹಂಚಿಕೆ ಮಾಡಿರುವ ಮಾಹಿತಿಯನ್ನು ಒದಗಿಸುವುದು ;

(ಆ) ೨೦೨೫–೨೬ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಸಮುದಾಯ ಭವನ ನಿರ್ಮಾಣ ಮತ್ತು ದುರಸ್ತಿಗಾಗಿ ಯಾವ ಯಾವ ಸಮುದಾಯ ಭವನಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಬೆಂಗಳೂರು ನಗರ ಜಿಲ್ಲೆಗೆ ಈ ಇಲಾಖೆಯಿಂದ ಹಂಚಿಕೆ ಮಾಡಿರುವ ಅನುದಾನವೆಷ್ಟು ; ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ಯೋಜನೆಗಳಡಿಯಲ್ಲಿ ಯಾವ ಯಾವ ಕಲ್ಯಾಣ ಕಾರ್ಯಗಳಿಗೆ / ಹಿಂದುಳಿದ ವರ್ಗಗಳ ಸಮುದಾಯ ಭವನಗಳಿಗೆ ಅನುದಾನ ನೀಡಲಾಗಿದೆ ? (ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಕಟ್ಟಡಗಳ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೦ (೧೨೯೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡವಿರುವ ಕೇಂದ್ರಗಳೆಷ್ಟು ; ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ೨೦೨೫–೨೬ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ವಿವಿಧ ಯೋಜನೆಗಳಡಿಯಲ್ಲಿ ಒದಗಿಸಿದ್ದ ಅನುದಾನವೆಷ್ಟು ; ಆ ಯೋಜನೆಗಳು ಯಾವುವು ; (ವಿವರ ನೀಡುವುದು)

(ಈ) ಸ್ವಂತ ಕಟ್ಟಡವಿಲ್ಲದ ಅಂಗನವಾಡಿ ಕೇಂದ್ರಗಳನ್ನು ನಿರ್ಮಾಣ ಮಾಡಲು ೨೦೨೫–೨೬ನೇ ಸಾಲಿನಲ್ಲಿ ಎಷ್ಟು ಅನುದಾನವನ್ನು ಒದಗಿಸಲಾಗಿತ್ತು ; ಈ ಅನುದಾನದಲ್ಲಿ ಬೆಂಗಳೂರು ನಗರ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಿಗೆ ಒದಗಿಸಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಉ) ಬೆಂಗಳೂರು ನಗರ ಯಶವಂತಪುರ ವಿಧಾನಸಭಾ ಕ್ಷೇತ್ರದಲ್ಲಿರುವ ಅಂಗನವಾಡಿ ಕಟ್ಟಡಗಳ ಸಂಖ್ಯೆ ಎಷ್ಟು ; ಎಷ್ಟು ಅಂಗನವಾಡಿ ಕಟ್ಟಡಗಳಿಗೆ ಸ್ವಂತ ಕಟ್ಟಡಗಳಿವೆ ; ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡದಲ್ಲಿ ನಡೆಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳನ್ನು ಯಾವಾಗ ನಿರ್ಮಿಸಿಕೊಡಲಾಗುವುದು ?

## ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೧ (೧೭೯೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದ ಎಲ್ಲಾ ಜಿಲ್ಲೆಗಳ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ಹುದ್ದೆಗಳೆಷ್ಟು ; ತುಮಕೂರು ಜಿಲ್ಲಾ ವ್ಯಾಪ್ತಿ, ಗ್ರಾಮ ಪಂಚಾಯಿತಿವಾರು, ಹುದ್ದೆವಾರು ವಿವರ ನೀಡುವುದು ;

(ಆ) ಕಳೆದ ೩ ವರ್ಷಗಳಿಂದ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಸಿಬ್ಬಂದಿಗಳ ಹುದ್ದೆಗಳನ್ನು ತುಂಬಲು ಯಾವ–ಯಾವ ಜಿಲ್ಲಾ ಪಂಚಾಯಿತಿಗಳು ಮೀಸಲಾತಿ ನಿಗಧಿಪಡಿಸಿ ನೇಮಕಾತಿ ಅಧಿಸೂಚನೆ ಹೊರಡಿಸಲು ಕ್ರಮ ಕೈಗೊಂಡಿವೆ ; ವಿವರ ನೀಡುವುದು ;

(ಇ) ನೇರ ಮೀಸಲಾತಿ ಅನುಷ್ಠಾನದ ಕುರಿತಾಗಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ಬಾಕಿ ಇದ್ದು, ಈ ಹಂತದಲ್ಲಿ ಕೆಲವು ಜಿಲ್ಲಾ ಪಂಚಾಯಿತಿಗಳು ನೇಮಕಾತಿ ಅಧಿಸೂಚನೆ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಬಂದಿದ್ದಲ್ಲಿ, ಯಾವ ಯಾವ ಜಿಲ್ಲಾ ಪಂಚಾಯಿತಿಗಳು ಖಾಲಿ ಇರುವ ಗ್ರಾಮ ಪಂಚಾಯಿತಿ ಸಿಬ್ಬಂದಿಗಳನ್ನು ತುಂಬಲು ಅಧಿಸೂಚನೆ ಹೊರಡಿಸಿವೆ ; ಸಂಬಂಧಪಟ್ಟ ನೇಮಕಾತಿ ಅಧಿಸೂಚನೆ ಪತ್ರ ನೀಡುವುದು ;

(ಈ) ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಸಿಬ್ಬಂದಿಗಳನ್ನು ತುಂಬಲು ಸರ್ಕಾರವು ಇತ್ತೀಚೆಗೆ ಕೈಗೊಂಡ ಕ್ರಮಗಳೇನು; ಪ್ರಸ್ತುತ ಯಾವ ಹಂತದಲ್ಲಿದೆ ; ಈ ಬಗ್ಗೆ ಸರ್ಕಾರ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ತುಂಬಲು ಕ್ರಮ ಕೈಗೊಳ್ಳುವುದು ? (ವಿವರ ನೀಡುವುದು)

## SCSP/TSP ಯೋಜನೆಯ ಹಣವನ್ನು ಗ್ಯಾರಂಟಿಗಳಿಗೆ ಬಳಕೆ ಮಾಡಿರುವ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೨ (೧೨೩೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗಗಳ ಕಲ್ಯಾಣಕ್ಕಾಗಿ ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನದಲ್ಲಿ ಸದರಿ ಸಾಲಿನಲ್ಲಿ (ಫೆಬ್ರವರಿ–೨೦೨೬)ರ ಎಷ್ಟು ಮೊತ್ತವನ್ನು ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಮೀಸಲಿರಿಸಿ ವರ್ಗಾಯಿಸಿದೆ ; ವರ್ಗಾಯಿಸಿದ ಅನುದಾನದಲ್ಲಿ ಎಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಸಾಲಿನ ಫೆಬ್ರವರಿ–೨೦೨೬ ಅಂತ್ಯದ ವರೆಗೆ ಎಷ್ಟು ಮೊತ್ತವನ್ನು ಗ್ಯಾರಂಟಿ ಯೋಜನೆಗಳಲ್ಲಿ ಫಲಾನುಭವಿಗಳಾಗಿರುವ

ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳಿಗೆ ವೆಚ್ಚ ಮಾಡಲಾಗಿದೆ ; ಪ್ರತಿಯೊಂದು ಗ್ಯಾರಂಟಿ ಯೋಜನೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಪ್ರತಿಯೊಂದು ಗ್ಯಾರಂಟಿ ಯೋಜನೆಯ ಅನುಸಾರ ಮಾಹಿತಿ ನೀಡುವುದು)

(ಇ) ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆಗೆ ವರ್ಗಾಯಿಸಿದ್ದಲ್ಲಿ, ಸದರಿ ಯೋಜನೆಯ ಹಣವನ್ನು ದುರ್ಬಳಕೆ ಮಾಡಿಕೊಂಡಂತೆ ಆಗುವುದಿಲ್ಲವೇ ; ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯ ಉಲ್ಲಂಘನೆಯಾಗುವುದಿಲ್ಲವೇ ; ದಲಿತರ ಕಲ್ಯಾಣಕ್ಕೆ ಹಿನ್ನಡೆಯಾಗುವುದಿಲ್ಲವೇ ;

(ಈ) ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೆ ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ?

## ಗ್ರಾಮ ಪಂಚಾಯಿತಿಗಳಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಒದಗಿಸಲಾದ ಅನುದಾನ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೧೦೪೩ (೧೨೯೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದಂತೆ ಗ್ರಾಮ ಪಂಚಾಯಿತಿಗಳಲ್ಲಿ ವರ್ಷಕ್ಕೆ ಎಷ್ಟು ಬಾರಿ ಸಾಮಾನ್ಯ ಗ್ರಾಮ ಸಭೆಗಳನ್ನು ನಡೆಸಲಾಗುತ್ತದೆ ; ಸದರಿ ಸಾಮಾನ್ಯ ಗ್ರಾಮ ಸಭೆಗಳಲ್ಲಿ ಸಾರ್ವಜನಿಕರು ಸಲ್ಲಿಸುವ ಪ್ರಮುಖ ಬೇಡಿಕೆಗಳೇನು ;

(ಆ) ಕಳೆದ ೩ ವರ್ಷದಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್‌ವಾರು ಮೂಲಭೂತ ಸೌಕರ್ಯಗಳಾದ ರಸ್ತೆ, ಕುಡಿಯುವ ನೀರು, ಬೀದಿ ದೀಪ, ಆರೋಗ್ಯ ಶಿಕ್ಷಣಕ್ಕೆ ಸಂಬಂಧಿಸಿದಂತೆ ಪ್ರಮುಖ ಬೇಡಿಕೆಗಳ ವಿವರ ಮತ್ತು ಅವುಗಳ ಅನುಷ್ಠಾನಕ್ಕೆ ಬೇಕಾದ ಅನುದಾನದ ಅಂದಾಜು ಮೊತ್ತವೆಷ್ಟು ;

(ಇ) ಗ್ರಾಮ ಸಭೆಗಳಲ್ಲಿ ಸಾರ್ವಜನಿಕರು ಸಲ್ಲಿಸುವ ಅಭಿವೃದ್ಧಿ ಕಾಮಗಾರಿಗಳ ಬೇಡಿಕೆಯನ್ನು ಈಡೇರಿಸಲು ಗ್ರಾಮ ಪಂಚಾಯಿತಿಗಳಲ್ಲಿ ಅನುದಾನ ಲಭ್ಯತೆ ಇದೆಯೇ ; ಇದ್ದಲ್ಲಿ, ಯಾವ ಅನುದಾನದಿಂದ ಸದರಿ ಬೇಡಿಕೆಗಳನ್ನು ಈಡೇರಿಸಲಾಗುತ್ತದೆ ;

(ಈ) ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಕಾಮಗಾರಿಗಳಿಗೆ ರಾಜ್ಯ ಸರ್ಕಾರದಿಂದ ವಾರ್ಷಿಕವಾಗಿ ಎಷ್ಟು ಅನುದಾನವನ್ನು ನೇರವಾಗಿ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲಾಗುತ್ತದೆ ;

(ಉ) ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರದಿಂದ ಗ್ರಾಮ ಪಂಚಾಯತ್ ಖಾತೆಗೆ ನೇರವಾಗಿ ಬಿಡುಗಡೆ ಮಾಡಿದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಪ್ರಕರಣ ಸಂಖ್ಯೆ ೫೮ ರಂತೆ ಗ್ರಾಮ ಪಂಚಾಯಿತಿಗಳಿಗೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನದ ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಗ್ರಾಮ ಭಾಗಗಳಲ್ಲಿ ಸ್ವಚ್ಛತೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೪ (೧೨೯೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಪ್ರದೇಶಗಳಲ್ಲಿ ಏಕ ಬಳಕೆ ಪ್ಲಾಸ್ಟಿಕ್ ನಿಯಂತ್ರಣ ಹಾಗೂ ನಿಷೇಧವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಆ) ರಾಜ್ಯದ ಗ್ರಾಮೀಣ ಭಾಗಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಮತ್ತು ಬಳಸಿದ ಸ್ಯಾನಿಟರಿ ಪ್ಯಾಡ್‌ಗಳನ್ನು ರಸ್ತೆ ಬದಿಯಲ್ಲಿ ಮತ್ತು ಎಲ್ಲೆಂದರಲ್ಲಿ ಬಿಸಾಡುತ್ತಿರುವುದರಿಂದ ಬಯಲು ಕಸಾಲಯ ನಿರ್ಮಾಣವಾಗಿ ಸಾರ್ವಜನಿಕ ಆರೋಗ್ಯಕ್ಕೆ ಹಾಗೂ ಪರಿಸರಕ್ಕೆ ಗಂಭೀರ ಹಾನಿ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಳಸಿದ ಸ್ಯಾನಿಟರಿ ಪ್ಯಾಡ್‌ಗಳು ವೈಜ್ಞಾನಿಕ ವಿಲೇವಾರಿ ಮಾಡಲು ಗ್ರಾಮ ಪಂಚಾಯತ್ ಮಟ್ಟದಲ್ಲಿ ವಿಶೇಷ ವ್ಯವಸ್ಥೆ ಕಲ್ಪಿಸುವ ಯೋಜನೆ ಇದೆಯೇ ; ರಾಜ್ಯದ ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಸ್ಯಾನಿಟರಿ ಪ್ಯಾಡ್‌ಗಳನ್ನು ಸಂಗ್ರಹಿಸಿ ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡುವ ವ್ಯವಸ್ಥೆ ಇದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪ್ಲಾಸ್ಟಿಕ್ ತ್ಯಾಜ್ಯ ಹಾಗೂ ಸ್ಯಾನಿಟರಿ ತ್ಯಾಜ್ಯ ವಿಲೇವಾರಿಗೆ ವಿಶೇಷ ಅನುದಾನ ಮತ್ತು ಜಾಗೃತಿ ಅಭಿಯಾನ ಹಮ್ಮಿಕೊಳ್ಳುವ ಉದ್ದೇಶ ಸರ್ಕಾರಕ್ಕಿದೆಯೇ ;

(ಉ) ನಿಯಮ ಉಲ್ಲಂಘನೆ ಮಾಡುವವರ ವಿರುದ್ಧ ಕಠಿಣ ದಂಡ ವಿಧಿಸಲು ಸರ್ಕಾರ ಕೈಗೊಂಡ ಕ್ರಮಗಳು ಏನು ;

(ಊ) ಇತ್ತೀಚಿನ ಮೂರು ವರ್ಷಗಳಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಿಯಮ ಉಲ್ಲಂಘಿಸಿದ ಬಗ್ಗೆ ಕಂಡು ಬಂದ ಪ್ರಕರಣ ಮತ್ತು ಸಂಗ್ರಹಿಸಿದ ದಂಡನಾ ಶುಲ್ಕದ ಮೊತ್ತ ಮತ್ತು ಎಷ್ಟು FIR ದಾಖಲಿಸಲಾಗಿದೆ ; ಗ್ರಾಮ ಪಂಚಾಯತ್ ವಾರು ಮಾಹಿತಿ ನೀಡುವುದು ;

(ಖ) ಪ್ಲಾಸ್ಟಿಕ್ ಹಾಗೂ ಸ್ಯಾನಿಟರ್ ಮತ್ತು ಇ–ವೇಸ್ಟ್‌ಗಳನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಿ ಗ್ರಾಮೀಣ ಪರಿಸರ ಹಾಗೂ ಸಾರ್ವಜನಿಕ ಆರೋಗ್ಯವನ್ನು ಕಾಪಾಡಲು ಸರ್ಕಾರವು ಪ್ರಮಾಣಿತ ಕಾರ್ಯನಿರ್ವಾಹಣಾ ವಿಧಾನವನ್ನು (SOP) ರಚಿಸಿದೆಯೇ ; ಈವರೆಗೂ ಸರ್ಕಾರ ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿಲ್ಲದಿರುವುದಕ್ಕೆ ಕಾರಣವೇನು ?

## ಇ–ಸ್ವತ್ತು ೨.೦ ತಂತ್ರಾಂಶ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೫ (೧೨೯೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇ–ಸ್ವತ್ತು ೨.೦ ತಂತ್ರಾಂಶವನ್ನು ಸರ್ಕಾರವು ಡಿಸೆಂಬರ್–೦೧.೨೦೨೫ರಂದು ಅನುಷ್ಠಾನಕ್ಕೆ ತಂದ ನಂತರ, ಇಲ್ಲಿಯವರೆಗೆ ರಾಜ್ಯಾದ್ಯಂತ ಎಷ್ಟು ಹೊಸ ೧೧ಎ ಮತ್ತು ೧೧ಬಿ ಖಾತೆಗಳು ಸೃಜನೆಯನ್ನು, ಅಂಕಿ–ಅಂಶವನ್ನು ಅರ್ಜಿ ಸಂಖ್ಯೆ ಮತ್ತು ಖಾತೆ ಸಂಖ್ಯೆಯ ವಿವರದೊಂದಿಗೆ ಜಿಲ್ಲಾವಾರು ಮಾಹಿತಿ ಒದಗಿಸುವುದು ;

(ಆ) ಡಿಸೆಂಬರ್ ೦೧ ರಿಂದ ಇಲ್ಲಿಯವರೆಗೆ ಸ್ಥಳೀಯ ಯೋಜನಾ ಪ್ರಾಧಿಕಾರದಿಂದ ವಿನ್ಯಾಸ ನಕ್ಷೆ ಅನುಮೋದನೆಗೊಂಡು ಖಾತೆ ೧೧ ಎ ಸೃಜಿಸಲು ಗ್ರಾಮ ಪಂಚಾಯಿತಿಗೆ ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು ; (ಜಿಲ್ಲಾವಾರು ಅಂಕಿ–ಅಂಶ ನೀಡುವುದು)

(ಇ) ಡಿಸೆಂಬರ್ ೦೧, ೨೦೨೫ನಂತರ ಇಲ್ಲಿಯವರೆಗೆ ೧೧ ಬಿ ಸೃಜಿಸಲು ಗ್ರಾಮ ಪಂಚಾಯಿತಿಗೆ ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು ; ಸರ್ಕಾರದ ಆದೇಶ ಸಂಖ್ಯೆ: RDPR೩೧೮ GPA.೨೦೨೫ (ಭಾಗ–೨)E, ದಿನಾಂಕ: ೨೪.೦೪.೨೦೨೫ರಂತೆ

ಕಂದಾಯ ಇಲಾಖೆಯ ಭೂಮಿ ತಂತ್ರಾಂಶದಿಂದ ಗ್ರಾಮ ಪಂಚಾಯಿತಿ ಇ–ಸ್ವತ್ತು ತಂತ್ರಾಂಶಕ್ಕೆ ರವಾನಿಸಿರುವ ೯೪ಸಿ ಮತ್ತು ೯೪ಸಿಸಿ ಡಿಜಿಟಲ್ ಹಕ್ಕುಪತ್ರಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಹಕ್ಕುಪತ್ರಗಳನ್ನು ಗ್ರಾಮ ಪಂಚಾಯಿತಿಯು ಇ–ಸ್ವತ್ತು ತಂತ್ರಾಂಶದ ಮೂಲಕ ಸಂಬಂಧಿಸಿದ ತಹಶೀಲ್ದಾರ್ ಹೆಸರಿಗೆ ಖಾತೆ ಮಾಡಿದೆ ; ಎಷ್ಟು ೯೪ ಸಿ ಮತ್ತು ೯೪ ಸಿಸಿ ಹಕ್ಕುಪತ್ರಗಳು ಫಲಾನುಭವಿಯ ಹೆಸರಿಗೆ ಕಾವೇರಿ ತಂತ್ರಾಂಶದ ಮೂಲಕ ಸಂಬಂಧಿಸಿದ ತಹಶೀಲ್ದಾರರು ನೋಂದಣಿ ಮಾಡಿದ್ದಾರೆ ; ಇವುಗಳಲ್ಲಿ ಎಷ್ಟು ೯೪ ಸಿ ಮತ್ತು ೯೪ ಸಿಸಿ ಹಕ್ಕುಪತ್ರದ ಖಾತೆಗಳು ಕಾವೇರಿಯಿಂದ ಇ–ಸ್ವತ್ತಿಗೆ ಮ್ಯುಟೇಶನ್ ಆಗಿ ಫಲಾನುಭವಿಯ ಕೈ ಸೇರಿವೆ ;

(ಈ) ರಾಜ್ಯಾದ್ಯಂತ ಈ ಮೇಲಿನಂತೆ ವಿವಿಧ ಸೇವೆಗಳನ್ನು ನೀಡುವಲ್ಲಿ ಸಫಲತೆ ಇಲ್ಲದಿರುವುದು ಕಂಡು ಬಂದಿದೆಯಲ್ಲವೇ ; ಈ ಬಗ್ಗೆ ಸರ್ಕಾರದ ಉತ್ತರವೇನು ?

## ಗ್ರಾಮ ಪಂಚಾಯಿತಿ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೬ (೧೨೯೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ನೇ ಸಾಲಿನ ನಂತರ ಇಲ್ಲಿಯವರೆಗೆ ಗ್ರಾಮ ಪಂಚಾಯಿತಿಗಳಿಗೆ ರಸ್ತೆ ಮತ್ತು ಚರಂಡಿ ಅಭಿವೃದ್ಧಿಗಾಗಿ ಗ್ರಾಮ ಪಂಚಾಯಿತಿಗಳಿಗೆ ನೇರವಾಗಿ ರಾಜ್ಯ ಸರ್ಕಾರ ಬಿಡುಗಡೆ ಮಾಡಿದ ಅನುದಾನದ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಾರ್ವಜನಿಕ ಗ್ರಾಮ ಪಂಚಾಯತ್ ರಸ್ತೆ ಎಂಬುದಾಗಿ ದೃಢೀಕರಣ ಪತ್ರ ವಿತರಿಸುವಂತೆ ಕೋರಿ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಿದಾಗ ಯಾವ ದಾಖಲೆಗಳು ಮತ್ತು ನಿಯಮದ ಆಧಾರದ ಮೇಲೆ ಸದರಿ ದೃಢೀಕರಣ ಪತ್ರವನ್ನು ನೀಡಲು ಅವಕಾಶವಿದೆ ;

(ಇ) ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯತ್ ರಸ್ತೆ ಎಂಬುದನ್ನು ದೃಢೀಕರಿಸುವ ದಾಖಲೆಗಳು ಯಾವುದು; ಸದರಿ ದಾಖಲೆ ಅಧಿಕೃತವೇ ;

(ಈ) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಆವರಣ ಗೋಡೆ, ಕಟ್ಟಡ ಶೆಡ್ ಇತ್ಯಾದಿಗಳನ್ನು ನಿರ್ಮಿಸುವಾಗ ಗ್ರಾಮ ಪಂಚಾಯತ್ ರಸ್ತೆಯಿಂದ ಎಷ್ಟು ಮೀಟರ್ ದೂರದ ಮಾರ್ಜಿನ್ ಕಾಯ್ದುಕೊಳ್ಳಬೇಕು ; ಇದಕ್ಕೆ ಅನ್ವಯಿಸುವ ನಿಯಮ ಅಥವಾ ಆದೇಶದ ಪ್ರತಿ ನೀಡುವುದು ;

(ಉ) ಗ್ರಾಮ ಪಂಚಾಯಿತಿಗಳ ರಸ್ತೆ ಬದಿಯಲ್ಲಿ ಮೆಸ್ಕಾಂನವರು ವಿದ್ಯುತ್ ಕಂಬ ಅಳವಡಿಸಲು ಮೊದಲು ಗ್ರಾಮ ಪಂಚಾಯಿತಿಯಿಂದ ಅನುಮತಿ ಪಡೆಯುವ ಅಗತ್ಯವಿದೆಯೇ ; ಇದ್ದಲ್ಲಿ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಮೆಸ್ಕಾಂನವರು ಗ್ರಾಮ ಪಂಚಾಯತ್ ನಿಂದ ಅನುಮತಿ ಪಡೆದ ವಿವರಗಳನ್ನು ನೀಡುವುದು ;

(ಊ) ೨೦೨೩-೨೦೨೪ನೇ ಸಾಲಿನ ನಂತರ ಇಲ್ಲಿಯವರೆಗೆ ದಾರಿದೀಪ ಮತ್ತು ಸಿಂಗಲ್ ಲೈನ್ ಹಾಗೂ ವಿದ್ಯುತ್ ಮೀಟರ್ ಅಳವಡಿಸಲು ಗ್ರಾಮ ಪಂಚಾಯತ್ ಖಾತೆಗೆ ನೇರವಾಗಿ ರಾಜ್ಯ ಸರ್ಕಾರ ಬಿಡುಗಡೆ ಮಾಡಿದ ಅನುದಾನದ ಮೊತ್ತವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಾರ್ಮಿಕ ಕಲ್ಯಾಣ ಯೋಜನೆಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೭ (೧೨೯೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಕಲ್ಯಾಣ ಮಂಡಳಿಗಳಲ್ಲಿ ನೋಂದಾಯಿತ ಕಾರ್ಮಿಕರ ಸಂಖ್ಯೆ ಹಾಗೂ ನಿಜವಾಗಿ ಸೌಲಭ್ಯ ಪಡೆಯುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ; ಪುರುಷರ ಮತ್ತು ಮಹಿಳೆಯರ ಜಿಲ್ಲಾವಾರು ಸಂಖ್ಯೆ ನೀಡುವುದು ;

(ಆ) ೨೦೨೩–೨೪ರ ನಂತರ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ನಿಧಿಗೆ ವಿವಿಧ ಮೂಲಗಳಿಂದ ಜಮೆಯಾದ ಮೊತ್ತವೆಷ್ಟು ; ಸದರಿ ನಿಧಿ ಸರಿಯಾದ ರೀತಿಯಲ್ಲಿ ಬಳಕೆಯಾಗುತ್ತಿದೆಯೇ ; ಇತ್ತೀಚಿನ ಮೂರು ವರ್ಷಗಳ ಬಳಕೆಯ ವಿವರಗಳನ್ನು ನೀಡುವುದು ;

(ಇ) ಕಾರ್ಮಿಕ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳ ಸಂಖ್ಯೆ ಎಷ್ಟು ; ಅವುಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಅಸಂಘಟಿತ ವಲಯದ ಕಾರ್ಮಿಕರ ನೋಂದಣಿ ಪ್ರಕ್ರಿಯೆಯಲ್ಲಿ ಎದುರಾಗುತ್ತಿರುವ ತಾಂತ್ರಿಕ ಹಾಗೂ ಆಡಳಿತಾತ್ಮಕ ಸಮಸ್ಯೆಗಳು ಯಾವುದು ;

(ಉ) ಕಾರ್ಮಿಕರ ದೂರುಗಳ ನಿವಾರಣೆಗೆ ಸ್ಥಾಪಿತವಾದ ವ್ಯವಸ್ಥೆ ಪರಿಣಾಮಕಾರಿಯಾಗಿದೆಯೇ ;

(ಊ) ಕಳೆದ ೩ ವರ್ಷಗಳಲ್ಲಿ ಬಂದ ದೂರುಗಳು ಹಾಗೂ ಅವುಗಳ ಪರಿಹಾರದ ವಿವರ ಏನು ;

(ಋ) ಕಾರ್ಮಿಕ ಕಾನೂನುಗಳ ಉಲ್ಲಂಘನೆಗೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ಪ್ರಕರಣಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ ;

(ಎ) ಗಿಗ್ ವರ್ಕರ್ಸ್ ಮತ್ತು ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; ಕಾರ್ಮಿಕರ ಸಾಮಾಜಿಕ ಭದ್ರತೆ, ಕನಿಷ್ಠ ವೇತನ ಮತ್ತು ಸುರಕ್ಷತಾ ಮಾನದಂಡಗಳ ಅನುಷ್ಠಾನದಲ್ಲಿ ಕಂಡುಬಂದಿರುವ ಕೊರತೆಗಳನ್ನು ಸರಿಪಡಿಸಲು ಸರ್ಕಾರದ ಸಮಗ್ರ ಸುಧಾರಣಾ ಯೋಜನೆಗಳು ಯಾವುವು ?

## ನಾಮಫಲಕಗಳಲ್ಲಿ 'ಕನ್ನಡ ಭಾಷೆ' ಯನ್ನು ಪ್ರಧಾನವಾಗಿ ಬಳಸದಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೦೪೮ (೧೧೪೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಯ್ದೆಯಲ್ಲಿ ನಾಮಫಲಕಗಳ ಒಟ್ಟಾರೆ ವಿಸ್ತೀರ್ಣದಲ್ಲಿ ಕನ್ನಡ ಭಾಷೆಯನ್ನು ಮೇಲ್ಭಾಗದಲ್ಲಿ ಶೇ ೬೦ ರಷ್ಟು ಪ್ರದರ್ಶಿಸಲು ಹಾಗೂ ಕೆಳಭಾಗದಲ್ಲಿ ಶೇ ೪೦ ರಷ್ಟು ಇತರೆ ಭಾಷೆಗಳನ್ನು ಬಳಸಲು ಅವಕಾಶ ಕಲ್ಪಿಸಲಾಗಿದೆ ; ಹಾಗಿದ್ದರೆ, ಇತರೆ ಭಾಷೆ ಎಂದರೆ ಯಾವ ಭಾಷೆಗಳು ; (ವಿವರ ನೀಡುವುದು)

(ಆ) ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು ಪ್ರಧಾನವಾಗಿ ಬಳಸದ ಎಷ್ಟು ವಾಣಿಜ್ಯ ಮಳಿಗೆಗಳು, ಉದ್ದಿಮೆಗಳ ಮತ್ತು ಸಂಸ್ಥೆಗಳಿಗೆ ಈವರೆವಿಗೂ ದಂಡ ವಿಧಿಸಲಾಗಿದೆ ಮತ್ತು ಪರವಾನಗಿ ರದ್ದುಪಡಿಸಲಾಗಿದೆ ; (ವಿವರ ನೀಡುವುದು)

(ಇ) ಕನ್ನಡ ನಾಮಫಲಕ ಅಳವಡಿಸಿರುವುದನ್ನು ಖಾತರಿ ಪಡಿಸಿಕೊಳ್ಳುವಲ್ಲಿ ಜಾರಿ ದಳಗಳು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯ ; ಇದ್ದಲ್ಲಿ, ಪರಿಣಾಮಕಾರಿಯಾಗಿ ಅನುಷ್ಠಾನಿಸಲು ಸರ್ಕಾರದ ಕ್ರಮಗಳೇನು ;

(ಈ) ನಾಮಫಲಕದಲ್ಲಿ ಕನ್ನಡ ಬಳಸಲು ತೊಂದರೆ ಇದೆ ಎಂದು 'ಸಹಾಯವಾಣಿ' ಮೂಲಕ ನೆರವು ಪಡೆದವರ ಸಂಖ್ಯೆ, ಸ್ವೀಕೃತ ಕರೆಗಳ ಸಂಖ್ಯೆ ಎಷ್ಟು ?

## ಕೂಸಿನ ಮನೆ–ಆರೈಕೆದಾರರಿಗೆ ವೇತನ ಪಾವತಿಸದಿರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೦೪೯ (೧೧೪೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ 'ಕೂಸಿನ ಮನೆ' ಶೀರ್ಷಿಕೆಯಡಿ ಸ್ಥಾಪಿಸಿರುವ ಶಿಶುಪಾಲನಾ ಕೇಂದ್ರಗಳ ಸಂಖ್ಯೆ ಹಾಗೂ ಈ ಕೇಂದ್ರಗಳಿಗೆ ನೇಮಕ ಮಾಡಿಕೊಂಡಿರುವ ಆರೈಕೆದಾರರ (ಕೇರ್ ಟೇಕರ್ಸ್) ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಶಿಶುಪಾಲನಾ ಕೇಂದ್ರದ ಆರೈಕೆದಾರರಿಗೆ ಪ್ರತಿ ದಿನ ಅಥವಾ ಮಾಸಿಕ ಆಧಾರದ ಮೇಲೆ ವೇತನ ಪಾವತಿಸಲಾಗುವುದೇ ; ಮಾಸಿಕ ದೊರಯುವ ವೇತನ ಎಷ್ಟು ;

(ಇ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಆರೈಕೆದಾರರಿಗೆ ಕೆಲವು ತಿಂಗಳುಗಳಿಂದ ವೇತನ ಪಾವತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪಾವತಿಸಬೇಕಿರುವ ಒಟ್ಟು ವೇತನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಬಾಕಿ ಉಳಿದಿರುವ ವೇತನವನ್ನು ಪಾವತಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ವೇತನ ಪಾವತಿಸಲಾಗುವುದು ಮಾಹಿತಿ ನೀಡುವುದು ?

## ಕರ್ತವ್ಯದ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಆಗುತ್ತಿರುವ ಕಿರುಕುಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೦೫೦ (೧೧೪೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮಹಿಳಾ ಆಯೋಗಕ್ಕೆ ರಾಜ್ಯ ಸರ್ಕಾರ, ಸರ್ಕಾರದ ಅಧೀನ ಸಂಸ್ಥೆಗಳಲ್ಲಿ ಹಾಗೂ ಇತರೆ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಷ್ಟು ಮಂದಿ ಮಹಿಳಾ ನೌಕರರು ಕೆಲಸದ ಸ್ಥಳದಲ್ಲಿ ತಮ್ಮ ಮೇಲೆ ಆಗುತ್ತಿರುವ ಅನುಚಿತ ವರ್ತನೆ, ಲೈಂಗಿಕ ಮತ್ತು ಮಾನಸಿಕ ಕಿರುಕುಳ ಕುರಿತು ದೂರು ಸಲ್ಲಿಸಿದ್ದಾರೆ ; (ಕಳೆದ ೩ ವರ್ಷಗಳಲ್ಲಿ ಇಲಾಖಾವಾರು/ಇತರೆ ಸಂಸ್ಥೆಗಳಲ್ಲಿ ದಾಖಲಿಸ್ಪಟ್ಟ ದೂರುಗಳ ಸಂಖ್ಯೆಯನ್ನು ವರ್ಷವಾರು ನೀಡುವುದು)

(ಆ) ಒಟ್ಟು ದೂರುಗಳ ಪೈಕಿ ಎಷ್ಟು ಪ್ರಕರಣಗಳನ್ನು ಮುಕ್ತಾಯಗೊಳಿಸಲಾಗಿದೆ ; ಈ ಪೈಕಿ ಸಾಬೀತಾದ ಅಥವಾ ಸಾಬೀತಾಗದ ಪ್ರಕರಣಗಳ ಸಂಖ್ಯೆ ಹಾಗೂ ವಿಚಾರಣೆ ಹಂತರದಲ್ಲಿರುವ ಪ್ರಕರಣಗಳು ಎಷ್ಟು ; (ಇಲಾಖೆ, ದೂರು ದಾಖಲಾದ ದಿನಾಂಕ, ಮುಕ್ತಾಯಗೊಳಿಸಿದ ದಿನಾಂಕದೊಂದಿಗೆ ವರ್ಷವಾರು ವಿವರ ನೀಡುವುದು)

(ಇ) ಕೆಲವು ಕಛೇರಿ/ಇಲಾಖೆ/ಸಂಸ್ಥೆಗಳಲ್ಲಿ 'ಆಂತರಿಕ ದೂರು ನಿರ್ವಹಣಾ ಸಮಿತಿ' ರಚಿಸದಿರುವುದು ಹಾಗೂ ವರ್ಗಾವಣೆ, ನಿವೃತ್ತಿ ಮತ್ತಿತರೆ ಕಾರಣಕ್ಕೆ ಸದಸ್ಯರು ಹೊರಗಿದ್ದರೂ ಸಮಿತಿಯನ್ನು

ಪುನರ್ ರಚಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು ;

(ಈ) ಈ ರೀತಿಯ ದೂರುಗಳನ್ನು ಎಷ್ಟು ದಿನದೊಳಗೆ ವಿಚಾರಣೆ ಮತ್ತು ತೀರ್ಮಾನ ಮಾಡಲು ಕ್ರಮ ಕೈಗೊಳ್ಳಲಾಗುವುದು ;

(ಉ) ದೂರು ದಾಖಲಾಗಿ ಒಂದು ವರ್ಷ ಮೇಲ್ಪಟ್ಟಿದ್ದರೂ ವಿಚಾರಣೆ ಪೂರ್ಣಗೊಳ್ಳದ ಅಥವಾ ಮುಕ್ತಾಯಗೊಳಿಸದ ಪ್ರಕರಣಗಳೆಷ್ಟು ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿ ಸದಸ್ಯರ ಅನರ್ಹತೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೦೫೧ (೧೧೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳ ಅವಧಿಯಲ್ಲಿ ನಾನಾ ಕಾರಣಗಳಿಗಾಗಿ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲಾದ ಚುನಾಯಿತ ಗ್ರಾಮಪಂಚಾಯತ್ ಸದಸ್ಯರ ಸಂಖ್ಯೆ ಎಷ್ಟು ಹಾಗೂ ೦೬ ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ಮತ್ತು ಪುರುಷ/ಮಹಿಳಾ ಸದಸ್ಯರ ಸಂಖ್ಯೆ ನೀಡುವುದು)

(ಇ) ಚುನಾಯಿತ ಸದಸ್ಯರನ್ನು ಸದಸ್ಯತ್ವದಿಂದ ತೆಗೆದು ಹಾಕಲು ಅಥವಾ ಅನರ್ಹಗೊಳಿಸಲು ಇವರ ವಿರುದ್ಧ ಇರುವ ದೂರುಗಳ ಸ್ವರೂಪಗಳಾದರೂ ಎನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರಕ್ಕೆ ಉಂಟಾದ ಆರ್ಥಿಕ ನಷ್ಟ ಪ್ರಕರಣಗಳಲ್ಲಿ ಗ್ರಾಮ ಪಂಚಾಯಿತಿ ಆಧ್ಯಕ್ಷರು/ಉಪಾಧ್ಯಕ್ಷರು/ಸದಸ್ಯರನ್ನೂ ಹೊಣೆಗಾರರನ್ನಾಗಿಸಿ ಹಣ ವಸೂಲು ಮಾಡಲು ಆದೇಶಿಸಲಾಗಿರುವ ಪ್ರಕರಣಗಳು ಇವೆಯೇ ;

(ಉ) ಇದ್ದಲ್ಲಿ, ಪ್ರಕರಣಗಳ ಒಟ್ಟು ಸಂಖ್ಯೆ ವಸೂಲಾತಿಗೆ ಆದೇಶಿಸಿದ, ವಸೂಲಿಸಿದ ಹಾಗೂ ವಸೂಲಾತಿಗೆ ಬಾಕಿ ಇರುವ ಮೊತ್ತ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಈ ರೀತಿಯ ಪ್ರಕರಣಗಳಲ್ಲಿ ಸರ್ಕಾರಿ ಅಧಿಕಾರಿ/ಸಿಬ್ಬಂದಿಗಳನ್ನು ನೇರ ಹೊಣೆಗಾರರನ್ನಾಗಿಸಿ ಹಣ ವಸೂಲಿಸಿ ಶಿಸ್ತು ಕ್ರಮ ಜರುಗಿಸದೇ ಚುನಾಯಿತ ಪ್ರತಿನಿಧಿಗಳ ವಿರುದ್ಧ ಕ್ರಮ ಕೈಗೊಳ್ಳುತ್ತಿರುವುದಕ್ಕೆ ಕಾರಣವೇನು ?

## ಇ–ಜನ್ಮ ಪೋರ್ಟಲ್‌ನಲ್ಲಿ ಗ್ರಾಮಗಳ ಮ್ಯಾಪಿಂಗ್‌ನಲ್ಲಿ ನ್ಯೂನ್ಯತೆ ಇರುವುದನ್ನು ಸರಿಪಡಿಸುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೦೫೨ (೧೧೫೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇ–ಜನ್ಮ ಪೋರ್ಟಲ್ ಮೂಲಕ ಜನನ–ಮರಣ ನೋಂದಣಿಯನ್ನು ಕಡ್ಡಾಯಗೊಳಿಸಿದ್ದು ಪ್ರತಿ ನೋಂದಣಿಗೆ ಪಾವತಿಸಬೇಕಿರುವ ಶುಲ್ಕ ಮತ್ತು ವಿಳಂಬಿತ ನೋಂದಣಿಗೆ ಪಾವತಿಸಬೇಕಿರುವ ದಂಡ ಶುಲ್ಕ ಎಷ್ಟು ;

(ಆ) ಗ್ರಾಮ ಪಂಚಾಯಿತಿಗಳಿಗೆ ಸಂಬಂಧಿಸಿದಂತೆ ಗ್ರಾಮಗಳ ಮ್ಯಾಪಿಂಗ್ (ಗ್ರಾಮ ಪಂಚಾಯಿತಿ ಗ್ರಾಮಗಳ ಹೆಸರು ಬದಲಾವಣೆ ಆಗಿರುವುದು ಗ್ರಾಮಗಳ ಹೆಸರು ಬಿಟ್ಟು ಹೋಗಿರುವುದು ಇತ್ಯಾದಿ)

ನ್ಯೂನ್ಯತೆಯಿದ್ದು, ತಹಶೀಲ್ದಾರ್ ಕಛೇರಿಗೆ ತಡ ನೋಂದಣಿಗಾಗಿ ವರ್ಗಾವಣೆ ಆಗುತ್ತಿರುವ ಪ್ರಕರಣಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದೆ ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಇಂತಹ ಪ್ರಕರಣಗಳಲ್ಲಿ 'ವಿಳಂಬಿತ ನೋಂದಣಿಗೆ ದಂಡ ಶುಲ್ಕದಿಂದ ಸಾರ್ವಜನಿಕರಿಗೆ ವಿನಾಯಿತಿ ಇದೆಯೇ ; (ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯ ನಾಗಮಂಗಲ, ಕೆ.ಆರ್. ಪೇಟೆ, ಪಾಂಡವಪುರ ತಾಲ್ಲೂಕುಗಳಲ್ಲಿ ಈ ರೀತಿಯ ಪ್ರಕರಣಗಳು ಹೆಚ್ಚಾಗಿದ್ದು, ಇದೇ ರೀತಿ ಇತರೆ ಜಿಲ್ಲೆಗಳಲ್ಲೂ ಸಮಸ್ಯೆಯಿರುವುದನ್ನು ಸರಿಪಡಿಸುವ ನಿಟ್ಟಿನಲ್ಲಿ ಈವರೆವಿಗೂ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಈ ಸಮಸ್ಯೆಗೆ ಯಾವ ಕಾಲಮಿತಿಯಲ್ಲಿ ಪರಿಹಾರ ದೊರಕಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಿತಿಗತಿ ಹಾಗೂ ನಿರ್ವಹಣಾ ವೈಫಲ್ಯದ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೩ (೧೧೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ಯೋಜನೆಗಳಡಿ (ಕೆಆರ್‌ಐಡಿಎಲ್ ಪಂಚಾಯತ್ ರಾಜ್ ಇಂಜಿನಿಯರಿಂಗ್

ಸಿಎಸ್‌ಆರ್) ಸ್ಥಾಪಿಸಲಾದ ಒಟ್ಟು ಶುದ್ಧ ಕುಡಿಯುವ ನೀರಿನ ಘಟಕಗಳ (RO Plants) ಸಂಖ್ಯೆ ಎಷ್ಟು ; ಇವುಗಳ ಸ್ಥಾಪನೆಗಾಗಿ ವ್ಯಯಿಸಲಾದ ಒಟ್ಟು ವೆಚ್ಚವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮತ್ತು ವರ್ಷವಾರು ಪೂರ್ಣ ಮಾಹಿತಿ ನೀಡುವುದು)

(ಆ) ಮೈಸೂರು ಜಿಲ್ಲೆಯ ಟಿ. ನರಸೀಪುರ, ಎಚ್.ಡಿ. ಕೋಟೆ ಹಾಗೂ ಚಾಮರಾಜನಗರ ಜಿಲ್ಲೆಯ ಹನೂರು, ಕೊಳ್ಳೇಗಾಲ ತಾಲ್ಲೂಕುಗಳಲ್ಲಿ ಹೆಚ್ಚಿನ ಸಂಖ್ಯೆಯ ಘಟಕಗಳು ತಾಂತ್ರಿಕ ದೋಷ ಅಥವಾ ವಿದ್ಯುತ್ ಬಿಲ್ ಪಾವತಿಸದ ಕಾರಣ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರಸ್ತುತ ಎರಡೂ ಜಿಲ್ಲೆಗಳಲ್ಲಿ ಕಾರ್ಯಚರಿಸದ ಘಟಕಗಳ ಸಂಖ್ಯೆ ಎಷ್ಟು ; (ಘಟಕವಾರು ಮಾಹಿತಿ ನೀಡುವುದು)

(ಇ) ಈ ಘಟಕಗಳನ್ನು ಪುನರ್ ಆರಂಭಿಸಲು ಮತ್ತು ಇವುಗಳ ದೀರ್ಘಕಾಲೀನ ನಿರ್ವಹಣೆಗಾಗಿ (AMC Annual Maintenance Contract) ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಗ್ರಾಮ ಪಂಚಾಯತ್‌ಗಳ ೧೫ ನೇ ಹಣಕಾಸು ಯೋಜನೆಯ ಅನುದಾನವನ್ನು ಈ ಘಟಕಗಳ ದುರಸ್ತಿಗೆ ಬಳಸಲು ಸ್ಪಷ್ಟ ಮಾರ್ಗಸೂಚಿ ನೀಡಲಾಗಿದೆಯೇ ;

(ಈ) ಫ್ಲೋರೈಡ್ ಪೀಡಿತ ಗ್ರಾಮಗಳಲ್ಲಿನ ಘಟಕಗಳಲ್ಲಿ ನೀರಿನ ಗುಣಮಟ್ಟವನ್ನು ನಿಯತಕಾಲಿಕವಾಗಿ ಪರೀಕ್ಷಿಸಲು ಸರ್ಕಾರ ಹೊಂದಿರುವ ವ್ಯವಸ್ಥೆ ಯಾವುದು ; ಈ ಘಟಕಗಳಿಂದ ಹೊರಬರುವ ತ್ಯಾಜ್ಯ ನೀರನ್ನು (Reject Water) ಮರುಬಳಕೆ ಮಾಡಲು ಅಥವಾ ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಸರ್ಕಾರ ಯಾವ ಯೋಜನೆ ರೂಪಿಸಿದೆಯೇ ;

(ಉ) ಅನೇಕ ಕಡೆ ಘಟಕಗಳು ಸುಸ್ಥಿತಿಯಲ್ಲಿದ್ದರೂ ನೀರಿನ ಮೂಲ (Borewell) ಬತ್ತಿ ಹೋಗಿರುವುದು ಅಥವಾ ಪೈಪ್‌ಲೈನ್ ಸಂಪರ್ಕ ಕಡಿತಗೊಂಡಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಇಂತಹ ಘಟಕಗಳಿಗೆ ಜಲಜೀವನ್ ಮಿಷನ್ (JJM) ಅಡಿಯಲ್ಲಿ ಪರ್ಯಾಯ ನೀರಿನ ಮೂಲ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಜಲಜೀವನ್ ಮಿಷನ್ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಪ್ರಗತಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೪ (೧೯೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ 'ಜಲಜೀವನ್ ಮಿಷನ್' ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ಮಂಜೂರಾಗಿರುವ ಒಟ್ಟು ಕಾಮಗಾರಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಪೂರ್ಣಗೊಂಡಿರುವ ಮತ್ತು ಇನ್ನೂ ಪ್ರಾರಂಭವಾಗಲು ಬಾಕಿ ಇರುವ ಕಾಮಗಾರಿಗಳೆಷ್ಟು ;

(ಆ) ಈ ಕಾಮಗಾರಿಗಳ ಅನುಷ್ಠಾನದಲ್ಲಿ ವಿಳಂಬ ಮಾಡುತ್ತಿರುವ ಗುತ್ತಿಗೆದಾರರ ವಿರುದ್ದ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕಪ್ಪುಪಟ್ಟಿಗೆ (Black List) ಸೇರಿಸಲಾದ ಅಥವಾ ದಂಡ ವಿಧಿಸಲಾದ ಗುತ್ತಿಗೆದಾರರ ವಿವರಗಳನ್ನು ಒದಗಿಸುವುದು ;

(ಇ) ಈ ಎರಡು ಜಿಲ್ಲೆಗಳಲ್ಲಿ ಯೋಜನೆಗಳಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾಗಳಿಂದ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು ಮತ್ತು ಈವರೆಗೆ ಬಳಕೆಯಾಗಿರುವ ಮೊತ್ತವೆಷ್ಟು ;

(ಈ) ಪೂರ್ಣಗೊಂಡಿರುವ ಕಾಮಗಾರಿಗಳಲ್ಲಿ ಈಗಾಗಲೇ ಗುತ್ತಿಗದಾರರಿಗೆ ಪಾವತಿಸಬೇಕಾದ ಬಾಕಿ ಹಣ (Pending Bills) ಎಷ್ಟು ; ಬಾಕಿ ಹಣ ಪಾವತಿಸದ ಕಾರಣ ಹಲವು ಕಡೆ ನೀರು ಸರಬರಾಜು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಗ್ರಾಮೀಣ ರಸ್ತೆಗಳ ಅಭಿವೃದ್ಧಿ (ನಮ್ಮ ಗ್ರಾಮ ನಮ್ಮ ರಸ್ತೆ)

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೫ (೧೮೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ರೈತರ ಜಮೀನುಗಳಿಗೆ ಹಾಗೂ ಹಳ್ಳಿಗಳಿಂದ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ 'ನಮ್ಮ ಹೊಲ ನಮ್ಮ ರಸ್ತೆ' ಅಥವಾ 'ನಮ್ಮ ಗ್ರಾಮ ನಮ್ಮ ರಸ್ತೆ' ಯೋಜನೆಯಡಿ ಅಭಿವೃದ್ಧಿಪಡಿಸಲಾದ ರಸ್ತೆಗಳ ಉದ್ದ (ಕಿ.ಮೀ) ಮತ್ತು ಇದಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು ;

(ಆ) ಈ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ **'ಪ್ರಗತಿಪಥ'** ಯೋಜನೆಯಡಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ೨೫ ಕಿ.ಮೀ ಉದ್ದದ ಗ್ರಾಮೀಣ ರಸ್ತೆ ಅಭಿವೃದ್ಧಿ ಮಾಡುವ ಕಾಮಗಾರಿಗಳು ಈ ಎರಡು ಜಿಲ್ಲೆಗಳಲ್ಲಿ ಯಾವ ಹಂತದಲ್ಲಿವೆ ; ವಿಳಂಬಕ್ಕೆ ಕಾರಣಗಳನ್ನು ನೀಡುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರದ ಪಿ.ಎಂ.ಜಿ.ಎಸ್.ವೈ (PMGSY) ಯೋಜನೆಯಡಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಪ್ರತಿ ಕ್ಷೇತ್ರಕ್ಕೆ ಬಿಡುಗಡೆಯಾದ ಅನುದಾನ ಮತ್ತು ಪೂರ್ಣಗೊಂಡ ರಸ್ತೆಗಳ ವಿವರವನ್ನು ಒದಗಿಸುವುದು ?

## ಅಪ್ರಾಪ್ತ ಮಕ್ಕಳ ಸಾಮಾಜಿಕ ಜಾಲತಾಣಗಳ ಬಳಕೆ (Social Media) ನಿಯಂತ್ರಣ ಮತ್ತು ಹೊಸ ಕಾನೂನು ಜಾರಿ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೬ (೧೮೯೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೬ ವರ್ಷದೊಳಗಿನ ಅಪ್ರಾಪ್ತ ಮಕ್ಕಳು ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದಾಗಿ 'ಡಿಜಿಟಲ್ ವ್ಯಸನ'ಕ್ಕೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆಸ್ಟ್ರೇಲಿಯಾ ಮತ್ತು ಆಂಧ್ರಪ್ರದೇಶ ರಾಜ್ಯಗಳ ಮಾದರಿಯಲ್ಲಿ ರಾಜ್ಯದ ಮಕ್ಕಳ ಶೈಕ್ಷಣಿಕ ಮತ್ತು ಮಾನಸಿಕ ಹಿತದೃಷ್ಟಿಯಿಂದ ೧೬ ವರ್ಷದೊಳಗಿನವರಿಗೆ ಸಾಮಾಜಿಕ ಜಾಲತಾಣಗಳ ಬಳಕೆಯನ್ನು ನಿರ್ಬಂಧಿಸಲು ಸರ್ಕಾರ ಅಧ್ಯಯನ ಸಮಿತಿಯನ್ನು ರಚಿಸಿದೆಯೇ ;

(ಇ) ಇತ್ತೀಚಿನ ವರದಿಗಳ ಪ್ರಕಾರ ಶೇ.೭೬ ರಷ್ಟು ಮಕ್ಕಳು ಸಾಮಾಜಿಕ ಜಾಲತಾಣಗಳಲ್ಲಿ ಸಕ್ರಿಯರಾಗಿದ್ದು ಇದರಿಂದ ಅವರಲ್ಲಿ ಸಿಟ್ಟು, ಖಿನ್ನತೆ ಮತ್ತು ದೈಹಿಕ ಆಯಾಸ ಹೆಚ್ಚುತ್ತಿರುವುದನ್ನು ತಡೆಗಟ್ಟಲು ಶಿಕ್ಷಣ ಇಲಾಖೆಯ ವತಿಯಿಂದ ಕೈಗೊಂಡಿರುವ ಕ್ರಮಗಳೇನು ;

(ಈ) ಮದ್ರಾಸ್ ಹೈಕೋರ್ಟ್ ಸೂಚಿಸಿರುವಂತೆ ಮಕ್ಕಳ ಸುರಕ್ಷತೆಗಾಗಿ 'ಪ್ರತ್ಯೇಕ ಕಾನೂನು' ಅಥವಾ 'ನಿಯಂತ್ರಣಾ ನಿಯಮಾವಳಿ'ಯನ್ನು ಜಾರಿಗೆ ತರುವ ಬಗ್ಗೆ ಸರ್ಕಾರದ ನಿಲುವೇನು ? (ಸಂಪೂರ್ಣ ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ ವಸೂಲಾತಿ ಮತ್ತು ಆರ್ಥಿಕ ಸಬಲೀಕರಣದ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೭ (೧೧೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ತೆರಿಗೆ ವಸೂಲಾತಿಗಾಗಿ ನಿಗದಿಪಡಿಸಿದ ಒಟ್ಟು ಗುರಿ ಎಷ್ಟು ;

ಈ ಪೈಕಿ ಫೆಬ್ರವರಿ ೧೮ರವರೆಗೆ ಸಂಗ್ರಹವಾಗಿರುವ ಮೊತ್ತ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ವರದಿಯ ಪ್ರಕಾರ ಶೇ.೭೧.೩೯ ರಷ್ಟು ತೆರಿಗೆ ಸಂಗ್ರಹವಾಗಿದ್ದು, ಉಳಿದ ಬಾಕಿ ಮೊತ್ತವನ್ನು ಮಾರ್ಚ್ ಅಂತ್ಯದೊಳಗೆ ವಸೂಲಿ ಮಾಡಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಇ) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ೧೯೯೩ರ ಪ್ರಕರಣ ೧೯೯ಕ್ಕೆ ತಂದಿರುವ ತಿದ್ದುಪಡಿಗಳ ಸ್ವರೂಪವೇನು ; ಹೊಸದಾಗಿ ಸೇರಿಸಲಾದ ಪ್ರಕರಣ ೧೯೯ಬಿ ಮತ್ತು ೧೯೯ ಸಿ ನಿಬಂಧನೆಗಳು ಗ್ರಾಮ ಪಂಚಾಯಿತಿಗಳ ಆರ್ಥಿಕ ಸ್ವಾವಲಂಬನೆಗೆ ಹೇಗೆ ಪೂರಕವಾಗಿವೆ ;

(ಈ) ಡಿಜಿಟಲ್ ಪಾವತಿ ಸೌಲಭ್ಯ ಆಸ್ತಿ ಮಾಲೀಕರಿಗೆ ಪೋನ್ ಪೇ, ಗೂಗಲ್ ಪೇ ಮತ್ತು ಬಾಪೂಜಿ ಸೇವಾ ಕೇಂದ್ರಗಳ ಮೂಲಕ ತೆರಿಗೆ ಪಾವತಿಸಲು ಅವಕಾಶ ನೀಡಲಾಗಿದೆಯೇ ; ಈ ತಂತ್ರಜ್ಞಾನ ಬಳಕೆಯಿಂದ ತೆರಿಗೆ ವಸೂಲಾತಿಯಲ್ಲಿ ಆಗಿರುವ ಪ್ರಗತಿಯೇನು ;

(ಉ) ಸಂಪನ್ಮೂಲ ಕ್ರೋಢೀಕರಣ ಗ್ರಾಮೀಣ ಪ್ರದೇಶದ ಹೊರವಲಯದಲ್ಲಿ ನಿರ್ಮಾಣವಾಗಿರುವ ಲೇ ಔಟ್‌ಗಳು ಮತ್ತು ಮನೆಗಳಿಂದ ತೆರಿಗೆ ವಸೂಲಿ ಮಾಡಲು ಸರ್ಕಾರ ಜಾರಿಗೆ ತಂದಿರುವ ಹೊಸ ನಿಯಮಗಳು ಯಾವುವು ?

## ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮೂಲ ಸೌಕರ್ಯಗಳಿಗೆ ಸ್ವಂತ ಜಾಗಗಳನ್ನು ಹೊಂದುವ ಬಗ್ಗೆ

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೮ (೧೧೬೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮಗಳಿಗೆ ಅಧಿಕಾರ ನೀಡುವ ಆಶಯದಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳೂ ಸೇರಿದಂತೆ ಅಗತ್ಯವಾಗಿ ಇರಬೇಕಾದ ಮೂಲಸೌಕರ್ಯಗಳು ಯಾವುವು ; ಇದರ ಕುರಿತು ಸರ್ಕಾರದ ಮಾರ್ಗಸೂಚಿಗಳು ಯಾವುವು ;

(ಆ) ರಾಜ್ಯದ ಗ್ರಾಮ ಪಂಚಾಯಿತಿಗಳ ಪ್ರಸ್ತುತ ಕಛೇರಿ ಕಟ್ಟಡಗಳು ಹಾಗೂ ಪಂಚಾಯತ್ ವ್ಯಾಪ್ತಿಯಲ್ಲಿರುವ ಇತರ ಸರ್ಕಾರಿ ಇಲಾಖೆಗಳ ಕಛೇರಿಗಳು ಮತ್ತು ಇತರ ಸೌಲಭ್ಯಗಳು ಇರುವ ಜಾಗಗಳು ಯಾರ ಹೆಸರಿನಲ್ಲಿ ನೋಂದಾಯಿತವಾಗಿವೆ ;

(ಇ) ಗ್ರಾಮ ಪಂಚಾಯಿತಿಗಳ ಕಛೇರಿ ಕಟ್ಟಡಗಳು ಹಾಗೂ ಇತರ ಇಲಾಖೆಗಳ ಕಛೇರಿಗಳು ಇರುವ ಜಾಗಗಳು ಗ್ರಾಮ ಪಂಚಾಯಿತಿಯ/ಇಲಾಖೆಯ ಹೆಸರಿಗೆ ದಾಖಲಾಗದಿರಲು ಕಾರಣಗಳೇನು ; ಈ ಜಾಗಗಳನ್ನು ಗ್ರಾಮ ಪಂಚಾಯಿತಿಯ/ ಇಲಾಖೆಯ ಹೆಸರಿಗೆ ವರ್ಗಾವಣೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; ಇದುವರೆಗೆ ಎಷ್ಟು ಜಾಗಗಳನ್ನು ಪಂಚಾಯಿತಿಗಳ ಹೆಸರಿಗೆ ಪಹಣಿ ದಾಖಲಿಸಿದೆಯೇ ; ಆಯಾಯ ಮಟ್ಟದಲ್ಲಿ ಸಂಬಂಧಪಟ್ಟ ಇಲಾಖೆಗಳೊಂದಿಗೆ ಈ ಕುರಿತು ಸಮನ್ವಯ ಸಭೆ ಜರುಗಿಸಿ ಯಾವಾಗ ಅಗತ್ಯ ಕ್ರಮವಹಿಸಲಾಗುವುದು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯಿತಿಗಳಿಗೆ ಆದಾಯವನ್ನು ತರುವ ಆಸ್ತಿಗಳು ಯಾವುವು ; ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಇಂತಹ ಆಸ್ತಿಗಳಿವೆ ಮತ್ತು ವ್ಯವಹಾರಗಳಿವೆ ; ಸದರಿ ಜಾಗಗಳನ್ನು ಗ್ರಾಮ ಪಂಚಾಯಿತಿಯ ಹೆಸರಿಗೆ ನೋಂದಾಯಿಸಲು ಹಾಗೂ ಪಂಚಾಯಿತಿಗಳ ಆದಾಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಇಲಾಖೆಯಿಂದ ಯಾವ ಯೋಜನೆಗಳನ್ನು ರೂಪಿಸಲಾಗುತ್ತಿದೆ ; (ವಿವರ ಒದಗಿಸುವುದು)

(ಉ) ಗ್ರಾಮ ಪಂಚಾಯಿತಿಗಳ ಆಸ್ತಿಗಳ ಸಮಗ್ರ ದಾಖಲೆ ಸಂಗ್ರಹ, ಡಿಜಿಟಲೀಕರಣ ಹಾಗೂ ಕಾನೂನುಬದ್ದ ಮಾಲೀಕತ್ವ ಸ್ಥಾಪನೆಗಾಗಿ ವಿಶೇಷ ಅಭಿಯಾನ ಅಥವಾ ಕಾಲಮಿತಿ ನಿಗದಿಪಡಿಸಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

## ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೯ (೧೧೬೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವುದೇ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರ್ಪಡೆ ಮಾಡುವ ಕುರಿತು ಸರ್ಕಾರದ ಮುಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; ಈ ಸಂಬಂಧ ವಿವಿಧ ಇಲಾಖೆಗಳಲ್ಲಿನ ಇ–ಕಡತಗಳು ಸೇರಿದಂತೆ ಪ್ರಸ್ತುತ ಚಾಲ್ತಿಯಲ್ಲಿರುವ ಕಡತಗಳ ಸಂಖ್ಯೆ ಎಷ್ಟು ; ಅವು ಯಾವುವು ; ಇದುವರೆಗೆ ಎಷ್ಟು ಕಡತಗಳನ್ನು ಯಾವ ಆಧಾರದಲ್ಲಿ ಮುಕ್ತಾಯಗೊಳಿಸಲಾಗಿದೆ ಅಥವಾ ವಿಲೀನಗೊಳಿಸಲಾಗಿದೆ ;

(ಆ) ಪರಿಶಿಷ್ಟ ಜಾತಿ ಪಟ್ಟಿಗೆ ಸೇರ್ಪಡೆ ಮಾಡುವ ಸಂಬಂಧ ವಿವಿಧ ಇಲಾಖೆಗಳು ಹಾಗೂ ಇಲಾಖೆಯೊಳಗಿನ ಕಛೇರಿಗಳಲ್ಲಿ ಪ್ರಗತಿಯಿಲ್ಲದೆ ಬಾಕಿ ಉಳಿದಿರುವ ಕಡತಗಳ ಸಂಖ್ಯೆ ಎಷ್ಟು; ಅವುಗಳು ಎಷ್ಟು ಅವಧಿಯಿಂದ ಬಾಕಿಯಲ್ಲಿವೆ ಹಾಗೂ ಪ್ರಗತಿ ಆಗದಿರಲು ಕಾರಣಗಳೇನು ;

(ಇ) ಪರಿಶಿಷ್ಟ ಜಾತಿ ಸಮುದಾಯದವರ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸುವ ಸಂದರ್ಭದಲ್ಲಿ ಎಲ್ಲಾ ಇಲಾಖೆಗಳು, ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಮತ್ತು ಅಭಿವೃದ್ಧಿ ನಿಗಮಗಳು

ಅನುಸರಿಸಬೇಕಾದ ಮಾರ್ಗಸೂಚಿಗಳು ಯಾವುವು ; ಅವುಗಳನ್ನು ಯಾವಾಗ ರೂಪಿಸಲಾಗಿತ್ತು ಹಾಗೂ ಇವುಗಳನ್ನು ಪರಿಷ್ಕರಣೆ ಮಾಡುವ ಕುರಿತು ಸರ್ಕಾರದ ಯೋಜಿತ ಕ್ರಮಗಳೇನು ;

(ಈ) ಪರಿಶಿಷ್ಟ ಜಾತಿ ಸಮುದಾಯದವರಿಗೆ ವಿವಿಧ ಕಲ್ಯಾಣ ಕಾರ್ಯಕ್ರಮಗಳ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು ನಿಗದಿಪಡಿಸುವಾಗ ಸರ್ಕಾರ ಅನುಸರಿಸುವ ಮಾನದಂಡಗಳು ಯಾವುವು ; "ಪರಿಶಿಷ್ಟ ಜಾತಿ ಕಾಲೊನಿ" ಯ ವ್ಯಾಖ್ಯಾನ ಏನು ; ಸರ್ಕಾರದ ಚಾಲ್ತಿ ನಿಯಮಗಳಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಪರಿಶಿಷ್ಟ ಜಾತಿ ಕಾಲೊನಿಗಳೆಷ್ಟು ; ಅವು ಯಾವುವು ;

(ಉ) ಪರಿಶಿಷ್ಟ ಜಾತಿ ಕಾಲೊನಿಯಲ್ಲಿ ಇರಬೇಕಾದ ಮನೆಗಳ ಕನಿಷ್ಠ ಸಂಖ್ಯೆ, ಹರಡಿಕೊಂಡಿರುವ ಮನೆಗಳು, ಜಾತಿ/ಪಂಗಡ ಪ್ರಮಾಣಪತ್ರಗಳ ಲಭ್ಯತೆ ಮುಂತಾದವು ಸೇರಿದಂತೆ ಚಾಲ್ತಿಯಲ್ಲಿರುವ ನಿಯಮಗಳು, ಕಾರ್ಯಕ್ರಮ ಅನುಷ್ಠಾನಕ್ಕೆ ಅಡಚಣೆ ಉಂಟುಮಾಡುತ್ತಿರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಇಂತಹ ನಿಯಮಗಳನ್ನು ಪರಿಷ್ಕರಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಕಟ್ಟಡ ಕಾರ್ಮಿಕರ ಕಾರ್ಡ್ ನೋಂದಣಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬೦ (೧೧೬೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೋಂದಾಯಿತ ಹಾಗೂ ಸಕ್ರಿಯ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು ; ರಾಜ್ಯದಲ್ಲಿ ಕಟ್ಟಡ ಕಾರ್ಮಿಕರ ಕಾರ್ಡ್ ನೋಂದಣಿಯನ್ನು ಪರಿಶೀಲಿಸುವ ಸಂದರ್ಭದಲ್ಲಿ 'ನಕಲಿ' ಅಥವಾ ಅನರ್ಹರು ಕಾರ್ಡ್ ಹೊಂದಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಅನರ್ಹರೆಂದು ಗುರುತಿಸಲು ಸರ್ಕಾರ ಅನುಸರಿಸಿದ ಮಾನದಂಡಗಳು ಯಾವುವು ; ಕಟ್ಟಡ ಕಾರ್ಮಿಕರಾಗಿ ನೋಂದಣಿ ಪಡೆಯಲು ಅಗತ್ಯವಾದ ಅರ್ಹತೆಗಳೇನು ;

(ಆ) ರದ್ದುಪಡಿಸಿದ ಅನರ್ಹ ಕಟ್ಟಡ ಕಾರ್ಮಿಕರ ಕಾರ್ಡ್ ಹೊಂದಿದ್ದವರು ಈಗಾಗಲೇ ಪಡೆದಿರುವ ಸೌಲಭ್ಯಗಳನ್ನು ಹಿಂಪಡೆಯಲಾಗಿದೆಯೇ ; ಅನರ್ಹ ಕಾರ್ಡ್‌ಗಳನ್ನು ರದ್ದುಪಡಿಸುವ ವೇಳೆ ನೈಜ ಅರ್ಹ ಕಾರ್ಮಿಕರಿಗೆ ಅನ್ಯಾಯವಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮರು ನೋಂದಣಿಗೆ ಅವಕಾಶ ಕಲ್ಪಿಸಿರುವುದೇ ; (ನಿಯಮಗಳ ಮಾಹಿತಿಯನ್ನು ಒದಗಿಸುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಕಾರ್ಮಿಕರನ್ನು ಅನರ್ಹರೆಂದು ಗುರುತಿಸಿ, ಗುರುತಿನ ಚೀಟಿಗಳನ್ನು ರದ್ದುಪಡಿಸಲಾಗಿದೆ ; ಕಟ್ಟಡ ಕಾರ್ಮಿಕರಿಗೆ ನೀಡಲಾಗುತ್ತಿರುವ ವಿವಿಧ ಕಲ್ಯಾಣ ಸೌಲಭ್ಯಗಳ (ಪಿಂಚಣಿ, ಟೂಲ್‌ಕಿಟ್, ಹೆರಿಗೆ, ಶಿಕ್ಷಣ, ವೈದ್ಯಕೀಯ, ಅಪಘಾತ ಪರಿಹಾರ, ಮದುವೆ ಸಹಾಯಧನ ಇತ್ಯಾದಿ) ವಿವರ ಹಾಗೂ ಕಳೆದ ಮೂರು ವರ್ಷಗಳಲ್ಲಿ ಖರ್ಚಾದ ಮೊತ್ತ ಎಷ್ಟು ;

(ಈ) ರಾಜ್ಯದಲ್ಲಿ ನೋಂದಾಯಿತ ಹಾಗೂ ಸಕ್ರಿಯ ಕಟ್ಟಡ ಕಾರ್ಮಿಕರ ವಿವರಗಳನ್ನು ಕಾರ್ಮಿಕ ಇಲಾಖಾ ವೆಬ್‌ಸೈಟ್‌ನಲ್ಲಿ ಹಾಗೂ ಸ್ಥಳೀಯ ಮಟ್ಟದಲ್ಲಿ ಅಂದರೆ ಜಿಲ್ಲೆ, ಕಾರ್ಮಿಕ ವೃತ್ತ, ತಾಲ್ಲೂಕು, ಹೋಬಳಿ, ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಮಟ್ಟದಲ್ಲಿ ಪಾರದರ್ಶಕವಾಗಿ ಪ್ರಕಟಿಸಲು ಸರ್ಕಾರ ಕ್ರಮ ವಹಿಸುವುದೇ ; ಯಾವ ಕಾಲಮಿತಿಯೊಳಗೆ ಪ್ರಕಟಿಸಲಾಗುವುದು ?

# ರಾಜ್ಯದಲ್ಲಿ ಜಾರಿಯಲ್ಲಿರುವ ಯೋಜನೆಗಳ ಪರಿಷ್ಕರಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬೧ (೧೧೯೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೮೭೪ ಘೋಷಣೆ ಆದ ಸರ್ಕಾರ ಯೋಜನೆಗಳಿಗೆ ವಾರ್ಷಿಕವಾಗಿ ನೀಡಲಾಗುತ್ತಿರುವ ಅನುದಾನವೆಷ್ಟು ; ಕಳೆದ ಮೂರು ವರ್ಷಗಳ ಅವಧಿಯಲ್ಲಿ ಜನಪ್ರತಿನಿಧಿಗಳ ವಾರ್ಷಿಕ ಅನುದಾನ ಸಹಿತ ವಿವಿದ ಅನುದಾನಗಳ ಪೈಕಿ ವೆಚ್ಚವಾದ ಮತ್ತು ಸರ್ಕಾರಕ್ಕೆ ಹಿಂತಿರುಗಿಸಿದ ಅನುದಾನವೆಷ್ಟು ; ಅದಕ್ಕೆ ಕಾರಣವೇನು ; (ಯೋಜನಾವಾರು ವಿವರ ಒದಗಿಸುವುದು)

(ಆ) ರಾಜ್ಯ ಆಡಳಿತ ಸುಧಾರಣಾ ಆಯೋಗವು ಸರ್ಕಾರಕ್ಕೆ ಸಲ್ಲಿಸಿದ ವರದಿಯಲ್ಲಿ ಶೂನ್ಯ ಅಥವಾ ಅತಿ ಕಡಿಮೆ ಅನುದಾನ ಹಂಚಿಕೆ ಮಾಡುತ್ತಿರುವ ಸುಮಾರು ಒಂದು ಸಾವಿರ ಯೋಜನೆಗಳನ್ನು ರದ್ದುಪಡಿಸುವುದು ಸೇರಿದಂತೆ ಕಾರ್ಯಸಾಧ್ಯವಲ್ಲದ ಯೋಜನೆಗಳ ಅನುದಾನವನ್ನು ಪರಿಣಾಮಕಾರಿ ಯೋಜನೆಗಳಿಗೆ ಮರುಹಂಚಿಕೆ ಮಾಡುವಂತೆ ನೀಡಿದ ಶಿಫಾರಸ್ಸಿನ ಆಧಾರದಲ್ಲಿ ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳಾವುವು ;

(ಇ) ಶೂನ್ಯ ಅನುದಾನ ಅಥವಾ ಅತಿ ಕಡಿಮೆ ಅನುದಾನ ಹೊಂದಿರುವ ಮತ್ತು ಕಾರ್ಯಸಾಧ್ಯವಲ್ಲವೆಂದು ಗುರುತಿಸಲಾದ ಯೋಜನೆಗಳ ಒಟ್ಟು ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಯೋಜನೆಗಳನ್ನು ರದ್ದುಪಡಿಸಲಾಗಿದೆ ಅಥವಾ ವಿಲೀನಗೊಳಿಸಲು ತೀರ್ಮಾನಿಸಲಾಗಿದೆ ;

(ಈ) ಇಂತಹ ಯೋಜನೆಗಳನ್ನು ರದ್ದುಪಡಿಸುವ ಮೂಲಕ ಉಳಿಯುವ ಅನುದಾನವನ್ನು ಯಾವ ಕ್ಷೇತ್ರಗಳಿಗೆ ಅಥವಾ ಯೋಜನೆಗಳಿಗೆ ಮರುಹಂಚಿಕೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆ ;

ಬಳಕೆಯಾಗದ ಲೆಕ್ಕ ಶೀರ್ಷಿಕೆಗಳಲ್ಲಿ ಮೊತ್ತ ಜಮಾವಣೆಯನ್ನು ತಡೆಯಲು ಹಾಗೂ ಸರಳೀಕೃತ ಮತ್ತು ಪ್ರಮಾಣೀಕೃತ ಕಾರ್ಯವಿಧಾನ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಆಯೋಗದ ಶಿಫಾರಸ್ಸುಗಳ ಅನುಷ್ಠಾನಕ್ಕಾಗಿ ಇಲಾಖಾವಾರು ಮೇಲ್ವಿಚಾರಣೆ/ಪರಿಶೀಲನೆ ವ್ಯವಸ್ಥೆ ಮಾಡಲಾಗಿದೆಯೇ ; ಆಯೋಗದ ಅವಧಿ ಮುಗಿದ ನಂತರ ಶಿಫಾರಸ್ಸುಗಳ ಅನುಷ್ಠಾನಕ್ಕಾಗಿ ಪ್ರತ್ಯೇಕ ಘಟಕವನ್ನು ಸ್ಥಾಪಿಸುವ ಕುರಿತು ಸರ್ಕಾರದ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳ ಇ–ಸ್ವತ್ತು ೨.೦ ಮತ್ತು ಪಂಚತಂತ್ರ ತಂತ್ರಾಂಶಗಳ ಸುಧಾರಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬೨ (೧೧೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇ–ಸ್ವತ್ತು ೨.೦ ತಂತ್ರಾಂಶ ಜಾರಿ ನಂತರ ತಾಂತ್ರಿಕ ದೋಷಗಳಿಂದಾಗಿ ಆಸ್ತಿ ಪ್ರಮಾಣಪತ್ರ ಸೃಜಿಸುವಲ್ಲಿ ತೊಂದರೆಯುಂಟಾಗಿ ಮುದ್ರಾಂಕ ಮತ್ತು ನೋಂದಣಿ ಇಲಾಖೆಗೆ ಆದಾಯ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆರ್ಥಿಕ ವರ್ಷದ ಕೊನೆಯಲ್ಲಾಗಿರುವ ರೂ. ೩,೫೦೦ ಕೋಟಿ ಆದಾಯ ನಷ್ಟವನ್ನು ಸರಿದೂಗಿಸಲು ಸರ್ಕಾರದ ಕ್ರಮಗಳೇನು ;

(ಆ) ಇ–ಸ್ವತ್ತು ೨.೦ ಹಾಗೂ ಪಂಚತಂತ್ರ ತಂತ್ರಾಂಶ ನಿರ್ವಹಣೆ ದೋಷಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ

ಕ್ರಮಗಳೇನು ; ಗ್ರಾಮ ಪಂಚಾಯಿತಿಗಳಲ್ಲಿ ಆಸ್ತಿ ತೆರಿಗೆ, ನೀರಿನ ಶುಲ್ಕ ಸೇರಿದಂತೆ ವಿವಿಧ ತೆರಿಗೆಗಳ ಸುಮಾರು ೩,೩೭೮ ಕೋಟಿ ರೂ. ತೆರಿಗೆ ಬಾಕಿಯನ್ನು ಸಂಗ್ರಹಿಸುವಲ್ಲಿ ಇರುವ ಅಡೆತಡೆಗಳನ್ನು ಹೇಗೆ ನಿವಾರಿಸಲಾಗುವುದು ;

(ಇ) ಪ್ರಸ್ತುತ ಹಣಕಾಸು ವರ್ಷದಲ್ಲಿ ಎಲ್ಲಾ ರೀತಿಯ ಒಟ್ಟು ತೆರಿಗೆ ಬೇಡಿಕೆ ಎಷ್ಟು ; ಇದುವರೆಗಿನ ಪ್ರಗತಿಯೆಷ್ಟು ; ರಾಜ್ಯದ ಹಲವು ಜಿಲ್ಲೆಗಳಲ್ಲಿ ತೆರಿಗೆ ಬಾಕಿ ಹೆಚ್ಚಾಗಿರಲು ಕಾರಣಗಳೇನು ;

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಮೊಬೈಲ್ ಟವರ್‌ಗಳಿಂದ ಬರಬೇಕಾದ ತೆರಿಗೆ ಬಾಕಿ ಎಷ್ಟು ; ಮೊಬೈಲ್ ಟವರ್‌ಗಳು, ಕೃಷಿ ಜಾಗದಲ್ಲಿರುವ ಮನೆಗಳ/ಕಟ್ಟಡಗಳು, ಇನ್ನಿತರ ಸಂಸ್ಥೆ ಮತ್ತು ವಾಣಿಜ್ಯ ವ್ಯವಹಾರಗಳನ್ನು ನಿಯಮಾನುಸಾರ ತೆರಿಗೆ ವ್ಯಾಪ್ತಿಗೆ ಒಳಪಡಿಸುವ ಬಗ್ಗೆ ಸರ್ಕಾರದ ನೀತಿ ಏನು ; ಇವುಗಳಿಂದ ಪ್ರಸ್ತುತ ಬಾಕಿ ಉಳಿದಿರುವ ತೆರಿಗೆ ಸಂಗ್ರಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಪ್ರತಿ ಗ್ರಾಮ ಪಂಚಾಯಿತಿಗೆ ಕನಿಷ್ಠ ೧ ಕೋಟಿ ರೂ. ವಾರ್ಷಿಕ ಅನುದಾನ ನೀಡುವ ಹಾಗೂ ಆರ್ಥಿಕ ಸ್ವಾವಲಂಬನೆಯನ್ನು ಹೆಚ್ಚಿಸಲು ಮತ್ತು ತೆರಿಗೆ ಸಂಗ್ರಹವನ್ನು ಸುಧಾರಿಸಲು ವಿಶೇಷ ಅಭಿಯಾನ ರೂಪಿಸುವ ಬಗ್ಗೆ ಸರ್ಕಾರದ ನಿರ್ಧಾರಗಳೇನು ?

## ಬೀದರ್ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ತೀವ್ರ ಬಿಕ್ಕಟ್ಟು ಮತ್ತು ಜಲ ಜೀವನ್ ಮಿಷನ್ ಯೋಜನೆಯ ಅನುಷ್ಠಾನದ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೩ (೧೧೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಪ್ರಸಕ್ತ ಬೇಸಿಗೆಯಲ್ಲಿ ಕುಡಿಯುವ ನೀರಿನ ತೀವ್ರ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಸ್ತುತ ಟ್ಯಾಂಕರ್ ಮೂಲಕ ನೀರು ಪೂರೈಸುತ್ತಿರುವ ಗ್ರಾಮಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ (೨೦೨೨-೨೩ ರಿಂದ ೨೦೨೪-೨೫ ರವರೆಗೆ 'ಜಲ ಜೀವನ್ ಮಿಷನ್' (ಜೆಜೆಎಂ) ಮತ್ತು 'ಬಹುಗ್ರಾಮ ಕುಡಿಯುವ ನೀರಿನ ಯೋಜನೆ'ಗಳ (ಎಂವಿಎಸ್) ಅಡಿಯಲ್ಲಿ ಜಿಲ್ಲೆಗೆ ಬಿಡುಗಡೆಯಾದ ಒಟ್ಟು ಅನುದಾನ ಎಷ್ಟು ಮತ್ತು ಅದರಲ್ಲಿ ವೆಚ್ಚವಾದ ಮೊತ್ತವೆಷ್ಟು ;

(ಇ) ಜಿಲ್ಲೆಯಲ್ಲಿ ಅನುಷ್ಠಾನಗೊಂಡಿರುವ ನಳಜಲ ಯೋಜನೆಗಳ ಪೈಕಿ ನೀರಿನ ಮೂಲದ ಕೊರತೆ ಅಥವಾ ತಾಂತ್ರಿಕ ದೋಷದಿಂದಾಗಿ ಸಂಪೂರ್ಣವಾಗಿ ಸ್ಥಗಿತಗೊಂಡಿರುವ ಮತ್ತು ಕಾರ್ಯನಿರ್ವಹಿಸದ ಯೋಜನೆಗಳ ಸಂಖ್ಯೆ ಎಷ್ಟು ; ಇವುಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಈ) ಹಳೆಯ ಮತ್ತು ದುರಸ್ತಿಯಲ್ಲಿರುವ ಪೈಪ್‌ಲೈನ್‌ಗಳ ಬದಲಾವಣೆ ಹಾಗೂ ಪಂಪ್‌ಸೆಟ್‌ಗಳ ದುರಸ್ತಿಗಾಗಿ ಜಿಲ್ಲೆಗೆ ವಿಶೇಷ ಪ್ಯಾಕೇಜ್ ಅಥವಾ ಹೆಚ್ಚುವರಿ ಅನುದಾನ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಉ) ಜಿಲ್ಲೆಯ ಅಂತರ್ಜಲ ಮಟ್ಟ ತೀವ್ರವಾಗಿ ಕುಸಿಯುತ್ತಿರುವುದನ್ನು ಗಮನಿಸಿ ನಾರಾಯಣಪುರ ಅಣೆಕಟ್ಟಿನಿಂದ ನೀರು ತರುವ ಯೋಜನೆಯು ಯಾವ ಹಂತದಲ್ಲಿದೆ ಮತ್ತು ಶಾಶ್ವತ ನೀರಿನ ಮೂಲಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ರೂಪಿಸಿರುವ 'ದೀರ್ಘಕಾಲಿಕ ಕ್ರಿಯಾ ಯೋಜನೆ' ಯಾವುದು ?

# ಬೀದರ್ ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಠಿಕ ಆಹಾರ ವಿತರಣೆಯಲ್ಲಿನ ವ್ಯತ್ಯಯ ಮತ್ತು ಮಕ್ಕಳ ಅಪೌಷ್ಠಿಕತೆ ಪ್ರಮಾಣದ ಕುರಿತು

**ಡಾ|| ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೪ (೧೧೪೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಒಟ್ಟು ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಕಳೆದ ಎರಡು ವರ್ಷಗಳಲ್ಲಿ ಪೂರಕ ಪೌಷ್ಠಿಕ ಆಹಾರ ಯೋಜನೆ (ಎಸ್‌ಎನ್‌ಪಿ) ಅಡಿಯಲ್ಲಿ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ಮತ್ತು ಅದರಲ್ಲಿ ವೆಚ್ಚವಾದ ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ತೀವ್ರ ಅಪೌಷ್ಠಿಕತೆ (ಎಸ್‌ಎಎಂ) ಮತ್ತು ಸಾಧಾರಣ ಅಪೌಷ್ಠಿಕತೆ (ಎಂಎಎಂ) ಹೊಂದಿರುವ ಮಕ್ಕಳನ್ನು ಗುರುತಿಸಲಾಗಿದೆಯೇ ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಗೆ ಹೋಲಿಸಿದರೆ ಜಿಲ್ಲೆಯಲ್ಲಿ ಅಪೌಷ್ಠಿಕತೆ ಪ್ರಮಾಣ ಇಳಿಕೆಯಾಗಿದೆಯೇ ಅಥವಾ ಹೆಚ್ಚಾಗಿದೆಯೇ ; (ವರ್ಷವಾರು ಅಂಕಿ–ಅಂಶಗಳನ್ನು ಒದಗಿಸುವುದು)

(ಈ) ಅಂಗನವಾಡಿ ಕೇಂದ್ರಗಳಿಗೆ ಪೂರೈಕೆಯಾಗುತ್ತಿರುವ ಮೊಟ್ಟೆ, ಹಾಲಿನ ಪುಡಿ ಮತ್ತು ಬಾಲಸುಧೆ ಆಹಾರ ಪದಾರ್ಥಗಳು ಸಕಾಲಕ್ಕೆ ತಲುಪುತ್ತಿಲ್ಲ ಎಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಳೆದ ಒಂದು ವರ್ಷದಲ್ಲಿ ಎಷ್ಟು ಬಾರಿ ಪೂರೈಕೆಯಲ್ಲಿ ವಿಳಂಬ ಉಂಟಾಗಿದೆ ಮತ್ತು ಇದಕ್ಕೆ ಕಾರಣರಾದವರ ಮೇಲೆ ಕೈಗೊಂಡ ಕ್ರಮವೇನು ;

(ಉ) ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ನೀಡಲಾಗುವ ಪೌಷ್ಠಿಕ ಆಹಾರದ ಗುಣಮಟ್ಟವನ್ನು ಪರಿಶೀಲಿಸಲು ಇರುವ ವ್ಯವಸ್ಥೆ ಯಾವುದು ; ಜಿಲ್ಲೆಯಲ್ಲಿ ಆಹಾರ ಸುರಕ್ಷತಾ ಅಧಿಕಾರಿಗಳು ಕಳೆದ ಒಂದು ವರ್ಷದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಆಹಾರದ ಮಾದರಿಗಳನ್ನು ಪರೀಕ್ಷಿಸಿದ್ದಾರೆ ; (ಪರೀಕ್ಷಾ ವರದಿಯ ವಿವರ ನೀಡುವುದು)

(ಊ) ಜಿಲ್ಲೆಯ ಅನೇಕ ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳಿಲ್ಲದೆ ಬಾಡಿಗೆ ಕಟ್ಟಡ ಅಥವಾ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳಲ್ಲಿ ನಡೆಯುತ್ತಿರುವುದು ಪೌಷ್ಠಿಕ ಆಹಾರದ ದಾಸ್ತಾನು ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೊಸ ಕಟ್ಟಡಗಳ ನಿರ್ಮಾಣಕ್ಕೆ ಸರ್ಕಾರ ರೂಪಿಸಿರುವ ಯೋಜನೆಯೇನು ?

## ಬೀದರ್ ಜಿಲ್ಲೆಯ ವಸತಿ ನಿಲಯಗಳಲ್ಲಿನ ಮೂಲಸೌಕರ್ಯದ ಕೊರತೆ, ಅಶುಚಿತ್ವ ಮತ್ತು ಕಳಪೆ ಗುಣಮಟ್ಟದ ಆಹಾರ ಪೂರೈಕೆಯ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೫ (೧೧೪೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ಒಟ್ಟು ವಸತಿ ನಿಲಯಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ ; (ತಾಲ್ಲೂಕುವಾರು ಮತ್ತು ಕಟ್ಟಡದ ಬಾಡಿಗೆ ಮೊತ್ತದ ವಿವರ ನೀಡುವುದು)

(ಆ) ಅನೇಕ ವಸತಿ ನಿಲಯಗಳಲ್ಲಿ ಮಂಜೂರಾದ ಸಂಖ್ಯಾ ಬಲಕ್ಕಿಂತ ಶೇ. ೨೦ ರಿಂದ ೩೦ ರಷ್ಟು ಹೆಚ್ಚು ವಿದ್ಯಾರ್ಥಿಗಳಿಗೆ ಪ್ರವೇಶ

ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಆ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸಿಗೆ, ಕೊಠಡಿ ಮತ್ತು ಶೌಚಾಲಯ ವ್ಯವಸ್ಥೆಯನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಇ) ಕಳೆದ ಎರಡು ವರ್ಷಗಳಲ್ಲಿ ವಸತಿ ನಿಲಯಗಳ ದುರಸ್ತಿ, ನವೀಕರಣ ಮತ್ತು ಪೀಠೋಪಕರಣ ಖರೀದಿಗಾಗಿ ಬಿಡುಗಡೆಯಾದ ಅನುದಾನವೆಷ್ಟು ; ಇದರಲ್ಲಿ ಎಷ್ಟು ಹಣ ಬಳಕೆಯಾಗಿದೆ ಮತ್ತು ಬಾಕಿ ಉಳಿದಿರುವ ಅನುದಾನಕ್ಕೆ ಕಾರಣಗಳೇನು ; ಕಾಮಗಾರಿಗಳವಾರು ವಿವರ ಒದಗಿಸುವುದು)

(ಈ) ವಸತಿ ನಿಲಯಗಳಲ್ಲಿ ಇತ್ತೀಚೆಗೆ ಕಳಪೆ ಗುಣಮಟ್ಟದ ಆಹಾರ ಸರಬರಾಜು ಮತ್ತು ಅಶುಚಿತ್ವದ ಕುರಿತು ಸಲ್ಲಿಕೆಯಾದ ದೂರುಗಳ ಸಂಖ್ಯೆ ಎಷ್ಟು ; ನಿಯಮ ಉಲ್ಲಂಘಿಸಿದ ಎಷ್ಟು ಮಂದಿ ಗುತ್ತಿಗೆದಾರರು ಹಾಗೂ ವಾರ್ಡನ್‌ಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆ ;

(ಉ) ಜಿಲ್ಲೆಯ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನ ಮೀಸಲಿಟ್ಟಿದೆ ಮತ್ತು "ಮಾದರಿ ವಸತಿ ನಿಲಯಗಳ" (Model Hostels) ನಿರ್ಮಾಣ ಪ್ರಸ್ತಾವನೆ ಯಾವ ಹಂತದಲ್ಲಿದೆ ?

## ಬೀದರ್ ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ (ಪಿಎಂಎಫ್‌ಬಿವೈ) ಅನುಷ್ಠಾನ ಮತ್ತು ರೈತರಿಗೆ ವಿಮಾ ಪರಿಹಾರ ವಿತರಣೆಯಲ್ಲಿನ ವಿಳಂಬದ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೬ (೧೧೪೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನಲ್ಲಿ ಸಂರಕ್ಷಣೆ ಪೋರ್ಟಲ್ ಅಡಿಯಲ್ಲಿ ಬೆಳೆ ವಿಮೆಗೆ ನೋಂದಾಯಿಸಿಕೊಂಡ ರೈತರ ಸಂಖ್ಯೆ ಎಷ್ಟು ಮತ್ತು ರೈತರಿಂದ ಹಾಗೂ ಸರ್ಕಾರದಿಂದ ಪಾವತಿಯಾದ ಒಟ್ಟು ಪ್ರೀಮಿಯಂ ಮೊತ್ತವೆಷ್ಟು ; (ಹಂಗಾಮುವಾರು ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಅತಿವೃಷ್ಠಿ ಹಾಗೂ ಬರಗಾಲದಿಂದಾಗಿ ಬೆಳೆ ಹಾನಿಗೊಳಗಾಗಿ ಪರಿಹಾರಕ್ಕಾಗಿ ಸಲ್ಲಿಕೆಯಾದ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಅರ್ಜಿಗಳನ್ನು ವಿಮಾ ಕಂಪನಿಗಳು ಪುರಸ್ಕರಿಸಿವೆ ಮತ್ತು ಎಷ್ಟು ಅರ್ಜಿಗಳನ್ನು ತಿರಸ್ಕರಿಸಿವೆ ; (ತಿರಸ್ಕರಿಸಲು ನೀಡಲಾದ ತಾಂತ್ರಿಕ ಕಾರಣಗಳ ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಸಾವಿರಾರು ರೈತರ ಬೆಳೆ ವಿಮೆ ಹಣ ಇನ್ನೂ ವಿಮಾ ಕಂಪನಿಗಳಲ್ಲೇ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ವಿಮಾ ಪರಿಹಾರ ಪಾವತಿಸಲು ವಿಮಾ ಕಂಪನಿಗಳು ವಿಧಿಸಿರುವ ಕಾಲಮಿತಿ ಎಷ್ಟು ಮತ್ತು ವಿಳಂಬ ಮಾಡುತ್ತಿರುವ ಕಂಪನಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಬೆಳೆ ಕಟಾವು ಪ್ರಯೋಗಗಳ ವರದಿ ವಿಳಂಬದಿಂದಾಗಿ ರೈತರಿಗೆ ಪರಿಹಾರ ಸಿಗುತ್ತಿಲ್ಲ ಎಂಬ ದೂರುಗಳಿವೆಯೇ ; ಹಾಗಿದ್ದಲ್ಲಿ, ಈ ಪ್ರಕ್ರಿಯೆಯನ್ನು ಪಾರದರ್ಶಕಗೊಳಿಸಲು ಮತ್ತು ಶೀಘ್ರವಾಗಿ ವರದಿ ಸಲ್ಲಿಸಲು ಸರ್ಕಾರ ಕೈಗೊಂಡಿರುವ ಸುಧಾರಣೆಗಳೇನು ;

(ಉ) ಬೆಳೆ ಹಾನಿಯಾದ ೭೨ ಗಂಟೆಗಳ ಒಳಗೆ ಮಾಹಿತಿ ನೀಡಲು ಗ್ರಾಮೀಣ ಭಾಗದ ರೈತರಿಗೆ ತಾಂತ್ರಿಕ ಅಡಚಣೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ನಿಯಮವನ್ನು ಸರಳಗೊಳಿಸುವ ಅಥವಾ ರೈತ ಸಂಪರ್ಕ ಕೇಂದ್ರಗಳ ಮೂಲಕವೇ ನೇರ ನೋಂದಣಿಗೆ ಅವಕಾಶ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೭ (೧೧೫೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಹಿಳೆಯರ ಮೇಲಿನ ಹಿಂಸಾಚಾರ ಪ್ರಕರಣಗಳ ಸಂಖ್ಯೆ ಎಷ್ಟು ; ದೋಷಾರೋಪಣ ಪ್ರಮಾಣ (Conviction Rate) ಎಷ್ಟು ; One Stop Centers ಪ್ರತಿ ಜಿಲ್ಲೆಯಲ್ಲಿ ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿವೆಯೇ ; ಈ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ ಇದೆಯೇ ; ಇದ್ದಲ್ಲಿ, ಎಷ್ಟು ಕೊರತೆ ಇದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮಹಿಳಾ ಆಶ್ರಯ ಗೃಹಗಳ ಮೇಲ್ವಿಚಾರಣೆ ಎಷ್ಟು ಬಾರಿ ನಡೆಸಲಾಗಿದೆ ; ಹಾಗೂ ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ Working Women's Hostel ಗಳಿವೆ ಎಲ್ಲಾ ಹಾಸ್ಟೆಲ್‌ಗಳು ಕಾರ್ಯನಿರ್ವಹಣೆಯಲ್ಲಿವೆಯೇ ;

(ಇ) POCSO ಪ್ರಕರಣಗಳಲ್ಲಿ ತನಿಖೆ ಪೂರ್ಣಗೊಳ್ಳಲು ಸರಾಸರಿ ಎಷ್ಟು ಸಮಯ ತೆಗೆದುಕೊಳ್ಳುತ್ತಿದೆ ; Child Care Institutions (CCI) ಮತ್ತು Juvenile Justice Boards (JJB)ಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ?

## ಗೊಲ್ಲ ಸಮುದಾಯದ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೮ (೧೧೫೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅತೀ ಹಿಂದುಳಿದ ಗೊಲ್ಲ ಸಮುದಾಯದ ಪ್ರವರ್ಗ–೧ ವಿದ್ಯಾರ್ಥಿಗಳಿಗೆ ೨೦೨೫–೨೬ನೇ ಸಾಲಿನಲ್ಲಿ ಕಲ್ಪಿಸಲಾದ ಮೀಸಲಾತಿ ಸ್ಥಾನಗಳ ಸಂಖ್ಯೆ ಎಷ್ಟು ; ೨೦೨೫–೨೬ನೇ ಸಾಲಿನಲ್ಲಿ ಪ್ರವರ್ಗ–೧ ವಿದ್ಯಾರ್ಥಿವೇತನ ಅಥವಾ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) Reserved Seat ಪಡೆದುಕೊಂಡನಂತರ, ವಿದ್ಯಾರ್ಥಿಗಳಿಗೆ Tuition Fee Reimbursement ಅನ್ನು ತಡವಾಗಿ ನೀಡಲಾಗಿದೆಯೇ ; ನೀಡಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ; ಹಾಗೂ Grievance Redressal ವ್ಯವಸ್ಥೆ ಕಲ್ಪಿಸಿರುವುದರ ಮಾಹಿತಿ ಒದಗಿಸುವುದು ;

(ಇ) ರಾಜ್ಯದಲ್ಲಿ ವೃತ್ತಿಪರ ಕೋರ್ಸ್‌ಗಳಲ್ಲಿ ಪ್ರವರ್ಗ–೧/ಗೊಲ್ಲ ಸಮುದಾಯದ ವಿದ್ಯಾರ್ಥಿಗಳಿಗೆ ಇರುವ ಮೀಸಲಾತಿ ಮತ್ತು ವಿದ್ಯಾರ್ಥಿ ವೇತನಗಳ ಮಾಹಿತಿ ಒದಗಿಸುವುದು ?

## ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಹಾಸ್ಟೆಲ್‌ಗಳಿಗೆ ಉಪಕರಣಗಳನ್ನು ಖರೀದಿಸಿರುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೯ (೧೨೮೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆವತಿಯಿಂದ ಇಲಾಖಾ ವ್ಯಾಪ್ತಿಯ ಹಾಸ್ಟೆಲ್‌ಗಳಿಗೆ Semi-Automatic chapathi making machine ಗಳನ್ನು ಕಿಯೋನಿಕ್ಸ್ ಸಂಸ್ಥೆಯಿಂದ ಖರೀದಿಸಲು ಕಾರ್ಯದೇಶ ನೀಡಿದ್ದು,

ಕಿಯೋನಿಕ್ಸ್ ಸಂಸ್ಥೆ ಮಾರುಕಟ್ಟೆ ಬೆಲೆಗಿಂತ ಮೂರು ಪಟ್ಟು ಹೆಚ್ಚು ಮೊತ್ತದಲ್ಲಿ ಸರಬರಾಜು ಮಾಡಿರುತ್ತದೆ ಎಂದು ಸಿ.ಎ.ಜಿ ವರದಿ ಬಹಿರಂಗ ಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ವರದಿಯ ಆಧಾರದ ಮೇರೆಗೆ ಮಂಡ್ಯ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ೩೭ ಹಾಸ್ಟೆಲ್‌ಗಳಲ್ಲಿ ವಿತರಿಸಲಾದ Semi-Automatic chapathi making machine ಗಳನ್ನು ಪರಿಶೀಲಿಸಿದಾಗ ಸುಮಾರು ೩೦ ಹಾಸ್ಟೆಲ್‌ಗಳು ಈ ಉಪಕರಣಗಳನ್ನು ಬಳಸದೇ ಹಾಗೆಯೇ ಸ್ಟೋರ್ ರೂಂನಲ್ಲಿ ಇರಿಸಿದ್ದು, ಇದರಿಂದಾಗಿ ಸರ್ಕಾರಕ್ಕೆ ನಷ್ಟ ಉಂಟಾಗಿರುತ್ತದೆ ಎಂದು ವರದಿಯಲ್ಲಿ ತಿಳಿಸಿರುವುದು ನಿಜವೇ ;

(ಇ) ಮಾರುಕಟ್ಟೆ ಬೆಲೆಗಿಂತ ಹೆಚ್ಚಿನ ಮೊತ್ತಕ್ಕೆ ಮೇಲ್ಕಂಡ ಉಪಕರಣಗಳನ್ನು ಕಿಯೋನಿಕ್ಸ್ ಸಂಸ್ಥೆಯಿಂದ ಖರೀದಿಸುವ ಅವಶ್ಯಕತೆ ಉಂಟಾಗಿತ್ತಾ ; ಈ ಉಪಕರಣಗಳನ್ನು ನಿಯಮಬಾಹಿರವಾಗಿ ಅಧಿಕಾರಿಗಳಿಂದ ಖರೀದಿಲಾಗಿದೆಯೇ ; ಮತ್ತು ಸರ್ಕಾರ ಈ ಕುರಿತು ಕೈಗೊಂಡಿರುವ ಕ್ರಮವೇನು ?

## ಕೃಷಿ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭೦ (೧೨೮೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ರೈತರ ಸರಾಸರಿ ಆದಾಯದಲ್ಲಿ ಏನು ಬದಲಾವಣೆ ಕಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು) MSP ಘೋಷಣೆ ಮತ್ತು ನೈಜ ಖರೀದಿ ನಡುವಿನ ವ್ಯತ್ಯಾಸ ಎಷ್ಟು ; ರಾಜ್ಯ ಖರೀದಿ ಕೇಂದ್ರಗಳ ಸಂಖ್ಯೆಯನ್ನು ಹೆಚ್ಚಿಸಲು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ರಾಜ್ಯದಲ್ಲಿ ಬೀಜ, ರಾಸಾಯನಿಕ ಗೊಬ್ಬರ, ಕೀಟನಾಶಕಗಳ ಬೆಲೆ ಏರಿಕೆ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಮಳೆ ಕೊರತೆ/ಅತಿ ಮಳೆ ಕಾರಣದಿಂದ ಹಾನಿಗೊಳಗಾದ ಬೆಳೆಗಳಿಗೆ ಪರಿಹಾರ ವಿತರಣೆಯ ಕಾಲಬದ್ಧತೆ ಏನು ;

(ಈ) ರಾಜ್ಯದ ಎಷ್ಟು ಗ್ರಾಮಗಳು Climate-resilient Agriculture ಯೋಜನೆಗಳಡಿಯಲ್ಲಿ ಒಳಗೊಂಡಿರುತ್ತವೆ ? (ಮಾಹಿತಿ ನೀಡುವುದು)

## ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಕಾರ್ಮಿಕ ಉಪಕರ ಪಾವತಿಸದೇ ಇರುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭೧ (೧೨೮೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ರಿಂದ ೨೦೨೨–೨೩ರವರೆಗೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ವಿವಿಧ ವಿಭಾಗಗಳಿಂದ ಡಿ.ಡಿ/ಚೆಕ್‌ಗಳ ಮೂಲಕ ೧೧.೯೧ ಕೋಟಿ ರೂ.ಗಳ ಕಾರ್ಮಿಕ ಉಪಕರವನ್ನು ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಪಾವತಿಸಲಾಗಿರುತ್ತದೆ ಎಂದು ತಿಳಿಸಿರುವ ಮೇರೆಗೆ ಪರಿಶೀಲಿಸಿದಾಗ, ಸದರಿ ಮೊತ್ತ ಬ್ಯಾಂಕ್ ಖಾತೆ ಪತ್ತೆಯಾಗಿರುವುದಿಲ್ಲ ಎಂದು ಸಿ.ಎ.ಜಿ ವರದಿ ಬಹಿರಂಗ ಪಡಿಸಿದ್ದು, ಈ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೨೧–೨೨ ರಿಂದ ೨೦೨೨–೨೩ನೇ ಸಾಲಿನಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆವತಿಯಿಂದ ಏಪ್ರಿಲ್ ೨೦೨೧ಕ್ಕಿಂತ ಮೊದಲು ಸಂಗ್ರಹಿಸಲಾದ ಕಾರ್ಮಿಕ ಉಪಕರ ೬.೦೬ ಕೋಟಿ

ರೂ.ಗಳನ್ನು ಮಂಡಳಿಗೆ ಪಾವತಿಸಿದೇ ಉಳಿಸಿಕೊಂಡಿದ್ದು ಗಮನಾರ್ಹ ವಿಷಯವಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿರುವುದು ನಿಜವೇ ;

(ಇ) ಇದ್ದಲ್ಲಿ, ಇಷ್ಟೊಂದು ಇಲಾಖೆ/ಸಂಸ್ಥೆಗಳಿಂದ ಕಾರ್ಮಿಕ ಉಪಕರಗಳು ಬಾಕಿ ಉಳಿದಿದ್ದು, ಅಧಿಕಾರಿಗಳು ಈ ಕುರಿತು ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೇ ; ಈಗ ಸರ್ಕಾರ ಈ ವಿಷಯದಲ್ಲಿ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಬಾಗಲಕೋಟೆ ಜಿಲ್ಲೆಯಲ್ಲಿನ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಮನೆಗಳ ಯೋಜನೆಗಳು ಹಾಗೂ ಪ್ರಗತಿಯ ವಿವರದ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೨ (೧೨೫೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯಲ್ಲಿನ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ನೆಲೆಸಿರುವ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಪಂಗಡಗಳ ಹೆಸರು ಮತ್ತು ಜನಸಂಖ್ಯೆ ವಿವರ ನೀಡುವುದು ;

(ಆ) ಜಿಲ್ಲೆಯಲ್ಲಿ ಸದರಿ ಜನಾಂಗದ ಜನರಿಗೆ ೨೦೦೭–೨೦೦೮ ರಿಂದ ೨೦೨೨–೨೦೨೩ ರವರೆಗೆ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; ವಿವಿಧ ಹಂತದವರೆಗೆ ನಿರ್ಮಿಸಿಕೊಂಡಿರುವ ಮನೆಗಳ ಪ್ರಗತಿಯ ವಿವರದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ಜಿಲ್ಲೆಯಲ್ಲಿ ಸದರಿ ಜನಾಂಗದವರಿಗೆ ಸಂಬಂಧಿಸಿದಂತೆ ನಿವೇಶನ ರಹಿತ ಮತ್ತು ವಸತಿ ರಹಿತ ಸರ್ವೆ ನಡೆಸಲಾಗಿದೆಯೇ ; ನಡೆಸಿದ್ದಲ್ಲಿ, ನಿವೇಶನ ಮತ್ತು ವಸತಿರಹಿತರ ವಿವರಗಳನ್ನು ನೀಡುವುದು ; ಯಾವ ಕಾಲಮಿತಿಯಲ್ಲಿ ಸರ್ವೆ ನಡೆಸಲಾಗುವುದು ;

(ಈ) ಬಾಗಲಕೋಟೆ ಜಿಲ್ಲೆಯಲ್ಲಿನ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಜನರಿಗೆ ಅಧಿಕಾರಿಗಳು ಸಮರ್ಪಕವಾಗಿ ಯೋಜನೆಯ ಮಾಹಿತಿ ತಿಳಿಸದೇ ಇರುವುದರಿಂದ ಜಿಲ್ಲೆಯಲ್ಲಿ ದೊಡ್ಡ ಸಂಖ್ಯೆಯಲ್ಲಿ ಈ ಜನಾಂಗದವರಿದ್ದರೂ ಯೋಜನೆಗಳ ಸದುಪಯೋಗವಾಗದೇ ಇರುವುದರಿಂದ ಯೋಜನೆಗಳಿಂದ ವಂಚಿತರಾಗುತ್ತಿದ್ದು, ಸದರಿ ಯೋಜನೆ ಸದುಪಯೋಗವಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೩ (೧೨೩೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ರೈತರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳಾವುವು ; (ಪ್ರತ್ಯೇಕವಾಗಿ ವರ್ಷವಾರು ಮಾಹಿತಿ ನೀಡುವುದು)

(ಆ) ೨೦೨೨–೨೩ನೇ ಸಾಲಿನಲ್ಲಿ ಸರ್ಕಾರದಲ್ಲಿ ರೂಪಿಸಲಾದ ರೈತ ಕಲ್ಯಾಣ ಯೋಜನೆಗಳನ್ನು ಯಥಾವತ್ತಾಗಿ ಮುಂದುವರೆಸಲಾಗಿದೆಯೇ, ಅಥವಾ ಯಾವುದಾದರೂ ಯೋಜನೆಗಳನ್ನು ಕೈಬಿಡಲಾಗಿದೆಯೇ ; (ಯೋಜನೆಗಳನ್ನು ನಿಲ್ಲಿಸಿದ್ದರೆ ವಿವರಣೆಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೨೩-೨೪ನೇ ಸಾಲಿನಿಂದ ಡಿಸೆಂಬರ್ ೨೦೨೫ ರವರೆಗೆ ರೈತರು ಆತ್ಮಹತ್ಯೆ ಮಾಡಿಕೊಂಡ ಪ್ರಕರಣಗಳು ವರದಿಯಾಗಿದೆಯೇ ; ಒಟ್ಟು ಎಷ್ಟು ಅನ್ನದಾತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ; ಆತ್ಮಹತ್ಯೆಗೆ ಕಾರಣಗಳೇನು ; ಪ್ರಾಣ ಕಳೆದುಕೊಂಡ ಅನ್ನದಾತರಿಗೆ ಸಕಾಲದಲ್ಲಿ ಪರಿಹಾರ ಪಾವತಿಸಲಾಗಿದೆಯೇ ; (ವರ್ಷವಾರು ಮತ್ತು ಜಿಲ್ಲಾವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) ಪ್ರಸ್ತುತ ಹಣಕಾಸು ವರ್ಷದಲ್ಲಿ ರೈತರ ಕಲ್ಯಾಣಕ್ಕಾಗಿ ಮೀಸಲಿಟ್ಟ, ಮಂಜೂರು ಮಾಡಿದ ಹಾಗೂ ಬಳಕೆಯಾದ ಅನುದಾನ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) ಮಂಜೂರಾದ ಅನುದಾನವನ್ನು ಬಳಕೆ ಮಾಡದಿದ್ದಲ್ಲಿ ಕಾರಣಗಳೇನು ; ಈ ದಿಶೆಯಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಉ) ೨೦೨೩-೨೪ನೇ ಸಾಲಿನಲ್ಲಿ ಉಂಟಾದ ಬರಗಾಲದ ಸಮಯದಲ್ಲಿ ರೈತರ ಬೆಳೆಗಳು ಹಾನಿಯಾಗಿದ್ದು, ಬರಗಾಲದಿಂದಾದ ನಷ್ಟವನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಮುಖ್ಯವಾಗಿ ವಿಜಯಪುರ ಮತ್ತು ಬಾಗಲಕೋಟೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು ?

## ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುವ ವಿದ್ಯಾರ್ಥಿ ನಿಲಯಗಳಲ್ಲಿ ನೀಡಲಾಗುತ್ತಿರುವ ಆಹಾರ ವ್ಯವಸ್ಥೆಯನ್ನು ಜಾರಿಗೆ ತರುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೭೪ (೧೨೩೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ೨೦೨೫-೨೬ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುವ ವಿದ್ಯಾರ್ಥಿ ನಿಲಯಗಳಲ್ಲಿ ನೀಡಲಾಗುತ್ತಿರುವ ಆಹಾರ ವ್ಯವಸ್ಥೆಯ

ಬಗ್ಗೆ ಪಾರದರ್ಶಕತೆಯನ್ನು ತರಲು ಸಾಮಾಜಿಕ ಪರಿಶೋಧನೆ ವ್ಯವಸ್ಥೆಯನ್ನು ಜಾರಿಗೊಳಿಸಲಾಗುವುದೆಂದು ಘೋಷಿಸಿದೆಯೇ ;

(ಆ) ಅದರಂತೆ, ಸಾಮಾಜಿಕ ಪರಿಶೋಧನೆ ವ್ಯವಸ್ಥೆಯನ್ನು ಎಷ್ಟು ಜಿಲ್ಲೆಗಳಲ್ಲಿ ಜಾರಿಗೊಳಿಸಲಾಗಿದೆ ; ಜಾರಿಗೊಳಿಸದೇ ಇರುವ ಜಿಲ್ಲೆಗಳು ಎಷ್ಟು ; ಜಾರಿಗೊಳಿಸದೇ ಇರಲು ಕಾರಣಗಳು ಏನು ?

## MGNREGA ಯೋಜನೆಯಡಿ ಹಣ ದುರುಪಯೋಗವಾದ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೫ (೧೨೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧ ರಿಂದ ೨೦೨೫–೨೬ನೇ ಸಾಲಿನವರೆಗೆ MGNREGA ಯೋಜನೆಯಡಿ ಸಾಮಾಜಿಕ ಲೆಕ್ಕ ಪರಿಶೋಧನಾ ವರದಿಯಲ್ಲಿ ದಾಖಲಾದ ಆಕ್ಷೇಪಣೆ ಮತ್ತು ವಸೂಲಾತಿಗೆ ಆದೇಶದ ಪ್ರಕರಣಗಳ ಸಂಖ್ಯೆ ಎಷ್ಟು ; ಆಕ್ಷೇಪಣೆ ಮತ್ತು ವಸೂಲಾತಿಗೆ ಶಿಫಾರಸ್ಸು ಮಾಡಿದ ಮೊತ್ತ ಎಷ್ಟು; ; ವಸೂಲಾತಿಗೆ ಕೈಗೊಂಡ ಕ್ರಮಗಳೇನು ; (ಪ್ರತ್ಯೇಕವಾಗಿ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೨೦೨೦–೨೧ ರಿಂದ ೨೦೨೫–೨೬ ನೇ ಸಾಲಿನವರೆಗೆ ಸದರಿ ಯೋಜನೆಗಳ ಅಡಿ ಹಣ ದುರುಪಯೋಗವಾದ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಲೋಕಾಯುಕ್ತದಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; ಸದರಿ ಕಾಮಗಾರಿಗಳಲ್ಲಿ ಹಣ ದುರುಪಯೋಗವಾದ ಮೊತ್ತವೆಷ್ಟು ; ಲೋಕಾಯುಕ್ತರ

ಆದೇಶದಂತೆ ವಸೂಲಾತಿಗೆ ಶಿಫಾರಸ್ಸು ಮಾಡಿದ ಮೊತ್ತವೆಷ್ಟು; ಶಿಫಾರಸ್ಸಿನಂತೆ ವಸೂಲಾದ ಮೊತ್ತವೆಷ್ಟು ; ವಸೂಲಾತಿಗೆ ಬಾಕಿ ಇರುವ ಮೊತ್ತ ಎಷ್ಟು ; (ಪ್ರತ್ಯೇಕವಾಗಿ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಾಗಲಕೋಟೆ–ವಿಜಯಪುರ ಜಿಲ್ಲೆಯಲ್ಲಿ ಸದರಿ ಅವಧಿಯಲ್ಲಿನ ಅಕ್ರಮಕ್ಕೆ ಕಾರಣರಾದ ವಿವಿಧ ಹಂತದ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಎಷ್ಟು ; ಅಮಾನತ್ತು ಆದ ಅಧಿಕಾರಿ ಮತ್ತು ಸಿಬ್ಬಂದಿಗಳು ಎಷ್ಟು ; ಸದರಿ ಅಧಿಕಾರಿ ಹಾಗೂ ಸಿಬ್ಬಂದಿಗಳಿಂದ ವಸೂಲಾತಿಗೆ ಶಿಫಾರಸ್ಸು ಮಾಡಿದ ಮೊತ್ತವೆಷ್ಟು; ಅಂತಹ ಅಧಿಕಾರಿಗಳಿಂದ ವಸೂಲಾತಿಯಾದ ಮೊತ್ತವೆಷ್ಟು; ಬಾಕಿಯಿರುವ ವಸೂಲಾತಿ ಮೊತ್ತವೆಷ್ಟು ?

## ರಾಜ್ಯದಲ್ಲಿ ಹಾಗೂ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಜೆಜೆಎಂ ಯೋಜನೆಯಡಿ ಹಳ್ಳಿಗಳಿಗೆ ನೀರು ಪೂರೈಕೆಯಾಗುತ್ತಿರುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೬ (೧೧೮೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಲ ಜೀವನ್ ಮಿಷನ್ (JJM) ಯೋಜನೆ ಯಾವ ಹಂತದಲ್ಲಿದೆ ;

(ಆ) ಈ ಯೋಜನೆಯಡಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಎಷ್ಟು ಹಳ್ಳಿಗಳಿಗೆ ನೀರು ಪೂರೈಸಲಾಗುತ್ತಿದೆ ;

(ಇ) ಸದರಿ ಜಿಲ್ಲೆಗಳಲ್ಲಿ ಜಲ ಜೀವನ್ ಮಿಷನ್ (JJM) ಯೋಜನೆಯ ವಂತಿಗೆ ಹಣವನ್ನು ಗ್ರಾಮ ಪಂಚಾಯಿತಿಗಳಿಗೆ ಹಿಂತಿರುಗಿಸಿರುವ ಬಗ್ಗೆ ಮಾಹಿತಿ ನೀಡುವುದು ?

## ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಯಲ್ಲಿನ ಪವನ ವಿದ್ಯುತ್ ಫ್ಯಾನ್‌ಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೭೭ (೧೧೮೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಪವನ ವಿದ್ಯುತ್ ಫ್ಯಾನ್‌ಗಳನ್ನು ಅಳವಡಿಸಲಾಗಿದೆ ;

(ಆ) ಸದರಿ ಪವನ ವಿದ್ಯುತ್ ಫ್ಯಾನ್‌ಗಳ ಕಂಪನಿಗಳ ಮಾಲೀಕರಿಂದ ಕರ ವಸೂಲಿ ಮಾಡಲಾಗುತ್ತಿದೆಯೇ ;

(ಇ) ಕರ ವಸೂಲಿಯಿಂದ ಸಂದಾಯವಾದ ಹಣವನ್ನು ಯಾವ ಅಭಿವೃದ್ಧಿ ಕಾರ್ಯಕ್ಕಾಗಿ ವಿನಿಯೋಗಿಸಲಾಗುತ್ತಿದೆ ಎಂಬುದರ ಬಗ್ಗೆ ಮಾಹಿತಿ ನೀಡುವುದು ?

## ಆನ್‌ಲೈನ್ ಗೇಮ್ ಚಟಕ್ಕೆ ಮಕ್ಕಳು ಬಲಿಯಾಗುತ್ತಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭೮ (೧೨೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆನ್‌ಲೈನ್ ಗೇಮ್‌ಗೆ ಮಕ್ಕಳು ಬಲಿಯಾಗುತ್ತಿರುವ ಹಲವಾರು ಪ್ರಕರಣಗಳು ಸಂಭವಿಸಿದ್ದು, ಇದರಿಂದ ಪೋಷಕರು ಆತಂಕ ಮತ್ತು ಕಳವಳಕ್ಕೆ ಈಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಕ್ಕಳಿಗೆ ಸಾಮಾಜಿಕ ಜಾಲತಾಣ ನಿಷೇಧ ಮಾಡಬೇಕೆಂಬ ಬೇಡಿಕೆ ಬಹುಸಂಖ್ಯಾತ ಪೋಷಕರಿಂದ ಸತತವಾಗಿ ಕೇಳಿ ಬರುತ್ತಿದ್ದು ಈ ಕುರಿತು ಸರ್ಕಾರದ ನಿಲುವೇನು ;

(ಇ) ಆನ್‌ಲೈನ್ ಗೇಮ್‌ನ ಗೀಳು ಬಹುತೇಕ ಮಕ್ಕಳಲ್ಲಿ ದೊಡ್ಡ ಪ್ರಮಾಣದಲ್ಲಿ ಕಂಡುಬರುತ್ತಿದ್ದು, ಅದು ಮಕ್ಕಳನ್ನು ಅತ್ಯಂತ ಆಘಾತಕಾರಿ ಅಪಾಯಗಳಿಗೆ ಒಡ್ಡುತ್ತಿರುವುದರ ಜೊತೆಗೆ ಅವರ ಸುಂದರ ಬಾಲ್ಯದ ಆಟೋಟ ಮತ್ತು ಇತರೆ ರಚನಾತ್ಮಕ ಚಟುವಟಿಕೆಗಳಿಂದ ಮಕ್ಕಳನ್ನು ಶಾಶ್ವತವಾಗಿ ದೂರ ಮಾಡಿ ಅವರನ್ನು ಮಾನಸಿಕ ಶೋಭೆಗೆ ದೂಡುತ್ತಿದ್ದು ಇದನ್ನು ತಪ್ಪಿಸಲು ಸರ್ಕಾರ ಇದುವರೆಗೆ ಯಾವುದೇ ಸೂಕ್ತ ಹಾಗೂ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಮುಂದಾಗದೇ ಇರಲು ಕಾರಣಗಳೇನು ;

(ಈ) ಆನ್‌ಲೈನ್ ಗೇಮ್‌ನ ಗೀಳು ವಿಶ್ವದಾದ್ಯಂತ ಲಕ್ಷಾಂತರ ಮಕ್ಕಳ ಮೇಲೆ ಪರಿಣಾಮ ಬೀರುತ್ತಿರುವ ಸಂಕೀರ್ಣ ಸಮಸ್ಯೆಯಾಗಿದ್ದು, ಮಕ್ಕಳ ದೈಹಿಕ, ಭಾವನಾತ್ಮಕ ಮತ್ತು ಮಾನಸಿಕ ಯೋಗಕ್ಷೇಮದ ಮೇಲೆ ದೂರುಗಾಮಿ ಪರಿಣಾಮ ಬೀರುತ್ತಿದ್ದು, ಮಕ್ಕಳು ಬಳಸುವ ಮೊಬೈಲ್ ಗಳಲ್ಲಿ ಆನ್‌ಲೈನ್ ಗೇಮ್ APP ಗಳಿಗೆ ಸಂಪೂರ್ಣವಾಗಿ ಕಡಿವಾಣ ಹಾಕಲೇಬೇಕಾದ ತುರ್ತು ಅನಿವಾರ್ಯತೆ ಸೃಷ್ಟಿಯಾಗಿದ್ದು, ಈ ಕುರಿತು ಸರ್ಕಾರ ಈಗಲಾದರೂ ಅಗತ್ಯ ಕ್ರಮ ತೆಗೆದುಕೊಳ್ಳುವುದೇ ;

(ಉ) ಮಕ್ಕಳು ಆನ್‌ಲೈನ್ ಗೇಮ್‌ನ ಗೀಳಿಗೆ ಒಳಗಾಗುವುದನ್ನು ಕಡ್ಡಾಯವಾಗಿ ತಡೆಯುವ ಸಲುವಾಗಿ ಮಕ್ಕಳ ಸುರಕ್ಷತೆಯನ್ನು ಆನ್ ಲೈನ್ ಖಚಿತಪಡಿಸಿಕೊಳ್ಳಲು ಜಾಗೃತಿ ಮೂಡಿಸುವುದು ಹಾಗೂ ಮಕ್ಕಳಿಗೆ ಅತ್ಯಂತ ಸುರಕ್ಷಿತ ಡಿಜಿಟಲ್ ಪರಿಸರವನ್ನು ಸೃಷ್ಟಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಅಗತ್ಯ ಹಾಗೂ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವುದು ?

## "ಪ್ರಾಯೋಜಕತ್ವ" ಯೋಜನೆಯಡಿ ಮಾಸಾಶನ ಬಾಕಿ ಇರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭೯ (೧೨೬೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಪ್ರಾಯೋಜಕತ್ವ" ಯೋಜನೆಯಡಿ ಪಾಲನೆ–ಪೋಷಣೆ ಕಾಣುತ್ತಿರುವ ರಾಜ್ಯದ ಸುಮಾರು ೨೬,೩೩೪ ಮಕ್ಕಳಿಗೆ ಕಳೆದ ೭ ತಿಂಗಳಿನಿಂದ ಮಾಸಾಶನ ಬಾರದೆ ಇರುವುದರಿಂದ, ದಿಕ್ಕಿಲ್ಲದ ಮಕ್ಕಳು ಅನ್ನ–ಆಸರೆ ಇಲ್ಲದೆ ಅತ್ಯಂತ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸ್ತುತ ಆರ್ಥಿಕ ವರ್ಷದಲ್ಲಿ "ಪ್ರಾಯೋಜಕತ್ವ" ಯೋಜನೆಯಡಿ ನೋಂದಣಿಯಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತ್ಯೇಕ ವಿವರ ನೀಡುವುದು)

(ಇ) ನೋಂದಣಿಯಾಗಿರುವ ಪ್ರತೀ ಫಲಾನುಭವಿಗೆ ನೀಡುತ್ತಿರುವ ಮಾಸಾಶನ ಎಷ್ಟು; ಫಲಾನುಭವಿಗಳಿಗೆ ಇದುವರೆಗೆ ಯಾವ ತಿಂಗಳಿನವರೆಗೆ ಮಾಸಾಶನವನ್ನು ನೀಡಲಾಗಿದೆ ;

(ಈ) ಪ್ರಸ್ತುತ ಮಾಸಾಶನ ನೀಡಲು ಬಾಕಿ ಉಳಿದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ವಿತರಣೆ ಮಾಡಲು ಬಾಕಿ ಉಳಿದಿರುವ ಮಾಸಾಶನದ ಒಟ್ಟು ಮೊತ್ತವೆಷ್ಟು ; (ಜಿಲ್ಲಾವಾರು ಪ್ರತ್ಯೇಕ ವಿವರ ನೀಡುವುದು)

(ಉ) ಕುಷ್ಠ ಪೀಡಿತ ಮಕ್ಕಳು, ಅನಾಥರು, ಜೈಲು ಶಿಕ್ಷೆಗೆ ಗುರಿಯಾದವರ ಕಂದಮ್ಮಗಳ, ಕೋವಿಡ್‌ನಿಂದ ತಂದೆ ಅಥವಾ ತಾಯಿ ಕಳೆದಕೊಂಡು ಏಕಪಾಲಕರಾದ ಮಕ್ಕಳ ಶಿಕ್ಷಣ, ಪೌಷ್ಠಿಕ ಆಹಾರ, ಟ್ಯೂಷನ್ ಭತ್ಯೆ, ಮತ್ತಿತರ ಖರ್ಚಿಗೆ ಈ ಮಾಸಾಶನವನ್ನೇ ನಂಬಿದ್ದು, ಆ ಮಕ್ಕಳಿಗೆ ಮಾಸಾಶನ ನೀಡದೆ ಇರುವುದಕ್ಕೆ ಕಾರಣಗಳೇನು ;

(ಊ) "ಪ್ರಾಯೋಜಕತ್ವ" ಯೋಜನೆಯಡಿ ನೋಂದಣಿಯಾಗಿರುವ ಎಲ್ಲಾ ಫಲಾನುಭವಿಗಳಿಗೆ ಯಾವ ಕಾಲಮಿತಿಯೊಳಗೆ ಬಾಕಿ ಇರುವ ಸಂಪೂರ್ಣ ಮಾಸಾಶನ ಮೊತ್ತವನ್ನು ಪಾವತಿ ಮಾಡಲಾಗುವುದು ?

## ಕಾರ್ಮಿಕರಿಂದ ಟೆಂಡರ್‌ಗಳ ಕುರಿತು ದೂರುಗಳು ಕೇಳಿ ಬಂದಿರುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮೦ (೧೨೬೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಆರ್ ಪಿ ಎಲ್ ತರಬೇತಿಯನ್ನು ನಡೆಸುತ್ತಿದ್ದು, ಸದರಿ ತರಬೇತಿಯನ್ನು ಮಾನದಂಡಗಳಿಗೆ ಅನುಗುಣವಾಗಿ ಸರಿಯಾಗಿ ನಿರ್ವಹಿಸದೆ, ಕಾರ್ಮಿಕರಿಗೆ ನೈಜವಾಗಿ ಸಿಗಬೇಕಾದ ತರಬೇತಿಯನ್ನು ಸಹ ನೀಡದೆ ಮಂಡಳಿಗೆ ಹಾಗೂ ಕಾರ್ಮಿಕರಿಗೆ ವಂಚಿಸುತ್ತಿರುವುದಾಗಿ ದೊಡ್ಡ ಮಟ್ಟದಲ್ಲಿ ದೂರುಗಳು ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಈ ಕುರಿತು ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕಟ್ಟಡ ನಿರ್ಮಾಣ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಒದಗಿಸುವ ಪ್ರಿವೆಂಟಿವ್ ಹೆಲ್ತ್ ಕೇರ್ ಚೆಕ್‌ಅಪ್ ಯೋಜನೆಯಲ್ಲಿಯೂ ಕೂಡ ಕಾರ್ಮಿಕರಿಗೆ ಸರಿಯಾದ ತಪಾಸಣೆ ನಡೆಸದಿರುವುದು ಹಾಗೂ ತಪಾಸಣೆ ಮಾಡಿದ ನಂತರ ತಪಾಸಣೆಯ ವರದಿಯನ್ನು ಕಾರ್ಮಿಕರಿಗೆ ನೀಡದಿರುವುದು ಹಾಗೂ

ಕಾರ್ಮಿಕರು ಕೆಲವೊಂದು ಕಾಯಿಲೆಗಳಿಂದ ಬಳಲುತ್ತಿದ್ದರೂ ಸದರಿ ತಪಾಸಣೆಯ ವರದಿಗಳಲ್ಲಿ ಆ ರೋಗದ ಬಗ್ಗೆ ಯಾವುದೇ ಉಲ್ಲೇಖ ಮಾಡದಿರುವುದರ ಬಗ್ಗೆ ಹಲವಾರು ಕಾರ್ಮಿಕರಿಂದ ಸತತವಾಗಿ ದೂರುಗಳು ಕೇಳಿ ಬಂದಿದ್ದು, ಈ ಕುರಿತು ಸರ್ಕಾರ ಇದುವರೆಗೆ ಕೈಗೊಂಡ ಕ್ರಮವೇನು ;

(ಈ) ಆರ್.ಪಿ.ಎಲ್ ತರಬೇತಿ ಟೆಂಡರ್ ಹಾಗೂ ಪ್ರಿವೆಂಟಿವ್ ಹೆಲ್ತ್ ಕೇರ್ ಚೆಕ್‌ಅಪ್ ಯೋಜನೆಯ ಟೆಂಡರ್ ಬಗ್ಗೆ ಹಲವಾರು ದೂರುಗಳು ನಿರಂತರವಾಗಿ ಕೇಳಿ ಬಂದಿರುವ ಹಿನ್ನಲೆಯಲ್ಲಿ, ಕಟ್ಟಡ ಕಾರ್ಮಿಕರ ಹಿತದೃಷ್ಟಿಯಿಂದ ಈ ಕುರಿತು ಸರ್ಕಾರ ಸೂಕ್ತ ತನಿಖೆ ನಡೆಸಿ, ಟೆಂಡರ್‌ದಾರರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಲು ಈ ಕೂಡಲೇ ಮುಂದಾಗುವುದೇ ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಉತ್ತೇಜನ ನೀಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮೧ (೧೨೬೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ 'ಸಾವಯವ ಮತ್ತು ನೈಸರ್ಗಿಕ ಕೃಷಿ' ಗೆ ಒಳಪಟ್ಟಿರುವ ಕೃಷಿ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ;

(ಆ) ಜಿಲ್ಲೆಯಲ್ಲಿ ಪ್ರಸ್ತುತ 'ಸಾವಯವ ಮತ್ತು ನೈಸರ್ಗಿಕ ಕೃಷಿ' ಕೈಗೊಳ್ಳುತ್ತಿರುವ ರೈತರ ಸಂಖ್ಯೆ ಎಷ್ಟು ಮತ್ತು ಸರ್ಕಾರದಿಂದ ಅವರಿಗೆ ಕಳೆದ ೩ ವರ್ಷಗಳಲ್ಲಿ ದೊರೆತಿರುವ ನೆರವು, ಸಹಾಯಧನ ಮತ್ತು ಸೌಲಭ್ಯಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ರೈತರು ಬೆಳೆಯುವ 'ಸಾವಯವ ಮತ್ತು ನೈಸರ್ಗಿಕ ಕೃಷಿ' ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಮತ್ತು ಒಳ್ಳೆಯ ಬೆಲೆ ದೊರೆಯುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಜಿಲ್ಲೆಯಲ್ಲಿ 'ಸಾವಯವ ಮತ್ತು ನೈಸರ್ಗಿಕ ಕೃಷಿ'ಗೆ ಸೂಕ್ತ ಉತ್ತೇಜನ ಮತ್ತು ಪ್ರೋತ್ಸಾಹ ನೀಡಲು ಸರ್ಕಾರ ರೂಪಿಸಿರುವ ಯೋಜನೆ ಮತ್ತು ಕಾರ್ಯಕ್ರಮಗಳೇನು ?

## ದಕ್ಷಿಣ ಕನ್ನಡ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮೨ (೧೨೬೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಎಷ್ಟು ಹಾಸ್ಟೆಲ್‌ಗಳು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿವೆ ;

(ಆ) ಸದರಿ ಹಾಸ್ಟೆಲ್‌ಗಳಿಗೆ ಪ್ರಸ್ತುತ ವರ್ಷದಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲಾಗಿದೆ ;

(ಇ) ಜಿಲ್ಲೆಯಲ್ಲಿನ ಸದರಿ ಎಲ್ಲಾ ಹಾಸ್ಟೆಲ್‌ಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಪೂರ್ಣ ಪ್ರಮಾಣದಲ್ಲಿ ಕಲ್ಪಿಸಲಾಗಿದೆಯೇ ;

(ಈ) ಸದರಿ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳ ವಿವರ ಒದಗಿಸುವುದು ;

(ಉ) ಸದರಿ ಹಾಸ್ಟೆಲ್‌ಗಳಿಗೆ ಮಂಜೂರಾಗಿರುವ, ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳ ವಿವರ ಒದಗಿಸುವುದು ;

(ಊ) ಯಾವ ಕಾಲಮಿತಿಯೊಳಗೆ, ಸದರಿ ಎಲ್ಲಾ ಹಾಸ್ಟೆಲ್‌ಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸಲಾಗುವುದು ?

# ಕೃತಕ ಬುದ್ಧಿಮತ್ತೆಯ (AI) ಕಾರ್ಯಕ್ರಮಗಳ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೦೮೩ (೧೧೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ಐಟಿ–ಬಿಟಿ ಇಲಾಖೆಯು ಕೃತಕ ಬುದ್ಧಿಮತ್ತೆಯ (AI) ಅಳವಡಿಕೆ ಮತ್ತು ಜಾರಿಗೆ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ ; ಕೃತಕ ಬುದ್ಧಿ ಮತ್ತೆಯ (AI) ಜಾರಿಗೆ ಹಮ್ಮಿಕೊಂಡಿರುವ ಯೋಜನೆಗಳೇನು ;

(ಆ) ರಾಜ್ಯ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ಐಟಿ–ಬಿಟಿ ಇಲಾಖೆಯು ಕೃತಕ ಬುದ್ಧಿಮತ್ತೆಯ (AI) ಅಭಿವೃದ್ಧಿಗೆ ಮತ್ತು ಇದರ ಮೂಲಸೌಕರ್ಯಗಳ ಅಭಿವೃದ್ಧಿಗೆ ಎಷ್ಟು ಮೊತ್ತವನ್ನು ಹಂಚಿಕೆ ಮಾಡಿರುತ್ತದೆ ; ಸರ್ಕಾರದ ವತಿಯಿಂದ ಹಂಚಿಕೆ ಆಗಿರುವ ಅನುದಾನವೆಷ್ಟು ಮತ್ತು ವಿನಿಯೋಗಿಸಿರುವ ಹಣವೆಷ್ಟು ;

(ಇ) ಕೃತಕ ಬುದ್ಧಿಮತ್ತೆಯ ಅಭಿವೃದ್ಧಿಗೆ ರಾಜ್ಯ ಸರ್ಕಾರ ಸೆಂಟರ್ ಫಾರ್ ಅಪ್ಲೈಡ್ AI ಫಾರ್ ಟೆಕ್ ಸಲ್ಯೂಷನ್ಸ್ (ಸಿಎಟಿಎಸ್) ಸಂಸ್ಥೆಯನ್ನು ರಚನೆ ಮಾಡಿರುತ್ತದೆಯೇ ; ಈ ಸಂಸ್ಥೆಯು ಯಾವ ಸಂಸ್ಥೆಯೊಂದಿಗೆ ಸಂಯೋಜನೆ ಹೊಂದಿರುತ್ತದೆ ; ಇದಕ್ಕೆ ಎಷ್ಟು ಹಣ ತೊಡಗಿಸಲಾಗಿದೆ ಮತ್ತು ಇದರ ಪ್ರಯೋಜನೆಗಳೇನು ;

(ಈ) ಕರ್ನಾಟಕವು ಕೃತಕ ಬುದ್ದಿಮತ್ತೆಯ ಅಭಿವೃದ್ಧಿಯಲ್ಲಿ ದೇಶದಲ್ಲಿ ಯಾವ ಸ್ಥಾನದಲ್ಲಿರುತ್ತದೆ ; ರಾಜ್ಯದ ಐಟಿ–ಬಿಟಿ ಬೆಳವಣಿಗೆಗೆ AI ಅಭಿವೃದ್ಧಿ ಸಹಕಾರಿಯಾಗುತ್ತದೆಯೇ ;

(ಉ) ಕೃತಕ ಬುದ್ಧಿಮತ್ತೆಯನ್ನು ಪಿಪಿಪಿ ಯೋಜನೆಯ ಅಡಿಯಲ್ಲಿ ಅಭಿವೃದ್ಧಿ ಪಡಿಸುವ ಯೋಜನೆ ಸರ್ಕಾರಕ್ಕೆ ಇರುತ್ತದೆಯೇ ? (ವಿವರಗಳನ್ನು ಒದಗಿಸುವುದು)

# ರಾಜ್ಯದಲ್ಲಿ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ ರಚನೆ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೦೮೪ (೧೧೬೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ ಯಾವಾಗ ರಚನೆ ಆಗಿರುತ್ತದೆ ; ಇದರ ಕೆಲಸ ಕಾರ್ಯಗಳು ಏನು ;

(ಆ) ಈ ಪ್ರಾಧಿಕಾರದ ಅಡಿಯಲ್ಲಿ ಸರ್ಕಾರದ ಯೋಜನೆಗಳು ಮತ್ತು ಕಾರ್ಯಕ್ರಮಗಳ ಮೇಲ್ವಿಚಾರಣೆ ಹಾಗೂ ಮೌಲ್ಯಮಾಪನ ಮಾಡಲು ಯಾವ ಯಾವ ಸಂಸ್ಥೆಗಳನ್ನು ಮತ್ತು ವ್ಯಕ್ತಿಗಳನ್ನು ಮೌಲ್ಯಮಾಪಕರಾಗಿ ನೇಮಕ ಮಾಡಿಕೊಳ್ಳಲಾಗಿದೆ ; ಇಂತಹ ಸಂಸ್ಥೆ ಮತ್ತು ವ್ಯಕ್ತಿಗಳಿಗೆ ನೀಡುತ್ತಿರುವ ಸೇವಾ ಶುಲ್ಕ ಎಷ್ಟು ; (ಅವರಿಗೆ ಪಾವತಿಯಾಗಿರುವ ಸೇವಾ ಶುಲ್ಕದ ಜೊತೆಗೆ ಅವರ ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಪ್ರಾಧಿಕಾರದ ಅಡಿಯಲ್ಲಿ ಮೌಲ್ಯಮಾಪನ ಮಾಡಲು ಸಂಸ್ಥೆಗಳು ಮತ್ತು ಮೌಲ್ಯಮಾಪಕರ ನೇಮಕಕ್ಕೆ ಯಾವಾಗ ಅರ್ಜಿಗಳನ್ನು ಕರೆಯಲಾಗಿತ್ತು ; ಬಂದ ಅರ್ಜಿಗಳಲ್ಲಿ ಯಾವ ಮಾನದಂಡದ ಆಧಾರದ ಮೇಲೆ ಆಯ್ಕೆಯನ್ನು ಮಾಡಲಾಗಿರುತ್ತದೆ ; ಎಷ್ಟು ವರ್ಷಗಳ ಅವಧಿಗೆ ಇವರನ್ನು ಆಯ್ಕೆ ಮಾಡಲಾಗಿರುತ್ತದೆ ;

(ಈ) ಮೌಲ್ಯಮಾಪನ ಮಾಡಲು ಇರುವ ಮಾರ್ಗಸೂಚಿಗಳೇನು ಮತ್ತು 2025–26ನೇ ಸಾಲಿನಲ್ಲಿ ಎಷ್ಟು ಮೌಲ್ಯಮಾಪನಗಳು ನಡೆದಿರುತ್ತದೆ ; ಯಾವ ಯಾವ ಸಂಸ್ಥೆಗಳ ಮೌಲ್ಯಮಾಪಕರು ವರದಿಯನ್ನು ನೀಡಿರುತ್ತಾರೆ ; (ವರದಿಯ ಪ್ರತಿಗಳನ್ನು ಒದಗಿಸುವುದು)

(ಉ) ಪ್ರಾಧಿಕಾರದ ಲೆಕ್ಕಪರಿಶೋಧನೆ ನಡೆದಿರುತ್ತದೆಯೇ ; ಯಾವ ಆರ್ಥಿಕ ವರ್ಷದವರೆಗೆ ಲೆಕ್ಕಪರಿಶೋಧನೆ ಮಾಡಲಾಗಿರುತ್ತದೆ ? (ಮಾಡಿದ್ದಲ್ಲಿ, ಲೆಕ್ಕಪರಿಶೋಧನಾ ವರದಿಯ ಪ್ರತಿಯನ್ನು ಒದಗಿಸುವುದು)

## ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೦೮೫ (೧೧೬೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೊದಲು ಯಾವಾಗ ವಸತಿ ಶಾಲೆಗಳನ್ನು ಪ್ರಾರಂಭಿಸಲಾಯಿತು ; ಪ್ರಸ್ತುತ ರಾಜ್ಯದಲ್ಲಿ ಯಾವ ಯಾವ ವಸತಿ ಶಾಲೆಗಳು ಇರುತ್ತವೆ ; ರಾಜ್ಯದಲ್ಲಿ ಇರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಒಟ್ಟು ವಸತಿ ಶಾಲೆಗಳು ಎಷ್ಟು ; ಇವುಗಳಲ್ಲಿ ಇರುವ ಮಕ್ಕಳ ದಾಖಲಾತಿ ಎಷ್ಟು ;

(ಆ) ರಾಜ್ಯದಲ್ಲಿ ಬೇಡಿಕೆಗೆ ಅನುಗುಣವಾಗಿ ವಸತಿ ಶಾಲೆಗಳು ಇರುತ್ತದೆಯೇ ; ಇಲ್ಲದೆ ಇದ್ದಲ್ಲಿ, ವಸತಿ ಶಾಲೆಗಳ ನಿರ್ಮಾಣಕ್ಕೆ ಸರ್ಕಾರ ಹಾಕಿಕೊಂಡಿರುವ ಯೋಜನೆ ಏನು ; ವಸತಿ ಶಾಲೆಗಳಲ್ಲಿ ನಿರ್ಮಾಣಕ್ಕೆ ಸರ್ಕಾರ ಪ್ರಸ್ತುತ ವರ್ಷ ಹಂಚಿಕೆ ಮಾಡಿರುವ ಅನುದಾನವೆಷ್ಟು ಮತ್ತು ವೆಚ್ಚವಾಗಿರುವ ಅನುದಾನವೆಷ್ಟು ;

(ಇ) ರಾಜ್ಯದಲ್ಲಿ ಇರುವ ಹೆಣ್ಣು ಮಕ್ಕಳ ವಸತಿ ಶಾಲೆಗಳು ಎಷ್ಟು ; ಹೆಣ್ಣು ಮಕ್ಕಳ ವಸತಿ ಶಾಲೆಗಳಲ್ಲಿ ದಾಖಲಾಗಿರುವ ಸಂಖ್ಯೆ ಎಷ್ಟು ;

(ಈ) ಪ್ರತಿ ಹೋಬಳಿಗೆ ಒಂದರಂತೆ ವಸತಿ ಶಾಲೆಗಳನ್ನು ತೆರೆಯುವ ಉದ್ದೇಶ ರಾಜ್ಯ ಸರ್ಕಾರಕ್ಕೆ ಇರುತ್ತದೆಯೇ ; ಇದ್ದಲ್ಲಿ, ಅದನ್ನು ಜಾರಿಗೊಳಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ;

(ಉ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಲ್ಲಿ (ಕ್ರೈಸ್) ಇರುವ ಒಟ್ಟು ಸರ್ಕಾರಿ ನೌಕರರು ಎಷ್ಟು; ಇವುಗಳಲ್ಲಿ ಖಾಯಂ ಸಿಬ್ಬಂದಿ ಹಾಗೂ ನಿಯೋಜನೆಯ ಮೇಲೆ ಕೆಲಸ ಮಾಡುತ್ತಿರುವ ನೌಕರರು ಎಷ್ಟು ಮತ್ತು ಖಾಲಿ ಇರುವ ಹುದ್ದೆಗಳು ಎಷ್ಟು; ಖಾಯಂ ನೌಕರರನ್ನು ತುಂಬಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ?

## ರೈತರು ಬೆಳೆದ ಬೇಳೆ ಕಾಳುಗಳ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೦೮೬ (೧೧೬೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಪ್ರತಿ ವರ್ಷ ರಾಜ್ಯದ ರೈತರು ಬೆಳೆದ ಎಷ್ಟು ಬೇಳೆ ಕಾಳುಗಳನ್ನು ರಫ್ತು ಮಾಡುತ್ತಿದೆ ; (ಕಳೆದ ೩ ವರ್ಷದಲ್ಲಿ ರಾಜ್ಯದಿಂದ ರಫ್ತು ಮಾಡಿರುವ ಬೇಳೆ ಕಾಳುಗಳ ವಿವರಗಳನ್ನು ಒದಗಿಸುವುದು)

(ಆ) ರಾಜ್ಯಕ್ಕೆ ಪ್ರತಿ ವರ್ಷ ಆಮದು ಮಾಡಿಕೊಳ್ಳುತ್ತಿರುವ ಬೇಳೆ ಕಾಳುಗಳು ಎಷ್ಟು ; ಇದರಿಂದ ನಮ್ಮ ರಾಜ್ಯದ ರೈತರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕೇಂದ್ರ ಸರ್ಕಾರ ಬೇಳೆ ಕಾಳುಗಳನ್ನು ಆಮದು ಮಾಡಿಕೊಳ್ಳುವ ಕುರಿತು ಅಮೇರಿಕ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಪ್ಪಂದದಿಂದ ರಾಜ್ಯದ ರೈತರಿಗೆ ಆಗಬಹುದಾದ ತೊಂದರೆಗಳನ್ನು ರಾಜ್ಯ ಸರ್ಕಾರ ಅಂದಾಜು ಮಾಡಿರುತ್ತದೆಯೇ ; (ವಿವರಗಳನ್ನು ಒದಗಿಸುವುದು)

(ಈ) ಕೇಂದ್ರ ಸರ್ಕಾರ ಪ್ರತಿ ವರ್ಷ ಬೇಳೆ ಕಾಳುಗಳನ್ನು ಬೆಳೆಯಲು ರಾಜ್ಯದ ತೋಟಗಾರಿಕೆ ಇಲಾಖೆಗೆ ನೀಡುತ್ತಿರುವ ಅನುದಾನಗಳು ಎಷ್ಟು; ಕೇಂದ್ರ ಸರ್ಕಾರದಿಂದ ಬರಬೇಕಾದ ಬಾಕಿ ಅನುದಾನಗಳು ಎಷ್ಟು; (ವಿವರಗಳನ್ನು ಒದಗಿಸುವುದು)

(ಉ) ರಾಜ್ಯದ ಎಣ್ಣೆಕಾಳು ಬೆಳೆಯುವ ರೈತರಿಗೆ ಕೇಂದ್ರ್ರದಿಂದ ಯಾವ ಯಾವ ಯೋಜನೆಗಳನ್ನು ನೀಡಲಾಗಿದೆ; ಈ ಯೋಜನೆಗಳಲ್ಲಿ ರಾಜ್ಯದ ರೈತರಿಗೆ ದೊರೆಯುತ್ತಿರುವ ಅನುದಾನ ಮತ್ತು ಸಹಾಯಧನಗಳು ಎಷ್ಟು? (ವಿವರ ಒದಗಿಸುವುದು)

## ಕಾರ್ಮಿಕ ಇಲಾಖೆಯ ಅಡಿಯಲ್ಲಿ ಬರುವ ನ್ಯಾಯಾಲಯಗಳು ಮತ್ತು ವಕೀಲರ/ಕಾನೂನು ಸಲಹೆಗಾರರ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೧೦೮೭ (೧೧೬೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಇಲಾಖೆಯ ಅಡಿಯಲ್ಲಿ ಬರುವ ಕಾರ್ಮಿಕ ವಿವಾದದ ನ್ಯಾಯಾಲಯಗಳು ಎಷ್ಟು; ಇವುಗಳಲ್ಲಿ ಎಷ್ಟು ನ್ಯಾಯಾಲಯಗಳಲ್ಲಿ ನ್ಯಾಯಾಧೀಶರ ಹುದ್ದೆ ಖಾಲಿ ಇರುತ್ತದೆ; (ರಾಜ್ಯದಲ್ಲಿರುವ ಕಾರ್ಮಿಕ ವಿವಾದದ ನ್ಯಾಯಲಯಗಳ ವಿವರಗಳನ್ನು ಒದಗಿಸುವುದು)

(ಆ) ಕಾರ್ಮಿಕ ಇಲಾಖೆಯಲ್ಲಿ ಪೂರ್ಣ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಮತ್ತು ತಾತ್ಕಾಲಿಕ ಅವಧಿಗೆ ಅಥವಾ ಎಂಪ್ಯಾನಲ್ ಮೆಂಟ್ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ವಕೀಲರುಗಳು ಎಷ್ಟು; (ಇವರ ವಿವರಗಳನ್ನು ಒದಗಿಸುವುದು)

(ಇ) ಕಾರ್ಮಿಕ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಕೀಲರಿಗೆ ನೀಡುತ್ತಿರುವ ಭತ್ಯೆ ಅಥವಾ ವೇತನ ಅಥವಾ ಶುಲ್ಕ ಎಷ್ಟು; (ವಿವರಗಳನ್ನು ಒದಗಿಸುವುದು)

(ಈ) ಕಾರ್ಮಿಕ ಇಲಾಖೆಯ ಅಡಿಯಲ್ಲಿ ಇರುವ ಮಂಡಳಿ ಅಥವಾ ಇತರೆ ಇಲಾಖೆಗಳ ಸಂಸ್ಥೆಗಳಲ್ಲಿ ಏಕ ರೀತಿಯ ಶುಲ್ಕವನ್ನು ವಕೀಲರಿಗೆ ನೀಡಲಾಗುತ್ತಿದೆಯೇ ; (ಇಲ್ಲದೆ ಇದ್ದಲ್ಲಿ ಕಾರಣಗಳನ್ನು ತಿಳಿಸುವುದು)

(ಉ) ಕಾರ್ಮಿಕ ಇಲಾಖೆಯಲ್ಲಿ ಇರುವ ಖಾಯಂ ಕಾನೂನು ಸಲಹೆಗಾರರು ಎಷ್ಟು ? (ಇದ್ದಲ್ಲಿ ಅವರ ವಿವರಗಳನ್ನು ಒದಗಿಸುವುದು)

## ಆನೇಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಾಮೀಣ ರಸ್ತೆಗಳು ಹಾಳಾಗಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪಧವೀದರರ ಕ್ಷೇತ್ರ) :–**

೧೦೮೮ (೧೨೧೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆನೇಕಲ್ ಮತಕ್ಷೇತ್ರ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತ್ ಗ್ರಾಮೀಣ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಎಷ್ಟು ಪ್ರಸ್ತಾವನೆಗಳು ಬಂದಿರುತ್ತದೆ ;

(ಇ) ಕಳೆದ ೩ ವರ್ಷಗಳಿಂದ ಗ್ರಾಮೀಣ ರಸ್ತೆ ಅಭಿವೃದ್ಧಿಗೆ ನೀಡಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಈ) ಆನೇಕಲ್ ತಾಲ್ಲೂಕಿನ ಗ್ರಾಮಗಳಿಗೆ ಇನ್ನೂ ಕುಡಿಯುವ ನೀರಿನ ಸಂಪರ್ಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಜ್ಯ ಯೋಜನಾ ಇಲಾಖೆಯಲ್ಲಿ ವಿವಿಧ ಹುದ್ದೆಗಳ ಮತ್ತು ನೇಮಕಾತಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪಧವೀದರರ ಕ್ಷೇತ್ರ) :–**

೧೦೮೯ (೧೨೧೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಯೋಜನಾ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳು ಎಷ್ಟು ; ಅವುಗಳನ್ನು ಭರ್ತಿ ಮಾಡಲು ಸರ್ಕಾರ ವೇಳಾಪಟ್ಟಿಯನ್ನು ನಿಗದಿಪಡಿಸಿರುವುದು ಯಾವಾಗ ;

(ಆ) ಯೋಜನಾ ಇಲಾಖೆಯಲ್ಲಿನ ನೇಮಕಾತಿ ಪ್ರಕ್ರಿಯೆಗಳು ವಿಳಂಬವಾಗುತ್ತಿರುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬಕ್ಕೆ ಕಾರಣವೇನು ಮತ್ತು ಶೀಘ್ರ ನೇಮಕಾತಿಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ಹುದ್ದೆಗಳ ಮಂಜೂರಾತಿ, ಭರ್ತಿ ಹಾಗೂ ಖಾಲಿ ಹುದ್ದೆಗಳ ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಯೋಜನಾ ಇಲಾಖೆಯಲ್ಲಿ ಒಪ್ಪಂದದ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಸಂಖ್ಯೆ ಎಷ್ಟು; ಅವರನ್ನು ನಿಯಮಿತಗೊಳಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ? (ವಿವರ ನೀಡುವುದು)

## ರಾಜ್ಯ ವಾರ್ಷಿಕ ಯೋಜನೆಯಡಿ ಅನುಮೋದಿತವಾಗಿರುವ ಯೋಜನೆಗಳ ವಿಳಂಬದ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೮೯೦ (೧೨೧೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ವಾರ್ಷಿಕ ಯೋಜನೆಯಡಿ ಅನುಮೋದಿತವಾಗಿರುವ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬಕ್ಕೆ ಕಾರಣಗಳೇನು ಮತ್ತು ಇದನ್ನು ಸರಿಪಡಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಆ) ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಯೋಜನೆಗಳ ಪ್ರಗತಿಯ ಕುರಿತು ಸಮಗ್ರ ವರದಿ ಸರ್ಕಾರದ ಬಳಿ ಇದೆಯೇ, ಹಿಂದುಳಿದ ಜಿಲ್ಲೆಗಳ ಅಭಿವೃದ್ಧಿಗೆ ವಿಶೇಷ ಯೋಜನೆಗಳನ್ನು ರೂಪಿಸಲಾಗಿದೆಯೇ, (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಯೋಜನಾ ಇಲಾಖೆಯಿಂದ ಬಿಡುಗಡೆ ಮಾಡಲಾದ ಅನುದಾನ ಮತ್ತು ಬಳಸಲಾದ ಅನುದಾನ ಎಷ್ಟು ; (ಇಲಾಖೆವಾರು ವಿವರಗಳನ್ನು ನೀಡುವುದು)

(ಈ) ರಾಜ್ಯದಲ್ಲಿ ಡೇಟಾ ಆಧಾರಿತ ಯೋಜನೆ ರೂಪಣೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಈ ಸಂಬಂಧ ಯಾವ ಡಿಜಿಟಲ್ ವೇದಿಕೆಗಳನ್ನು ಅಳವಡಿಸಲಾಗಿದೆ ?

## ಕಾರ್ಮಿಕರ ಕೆಲಸದ ಸ್ಥಳದಲ್ಲಿ ಅಪಘಾತಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೯೯೧ (೧೨೧೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ಅವಧಿಯಲ್ಲಿ ಕಾರ್ಮಿಕ ಕೆಲಸದ ಸ್ಥಳದಲ್ಲಿ ಎಷ್ಟು ಅಪಘಾತಗಳು ಮತ್ತು ಸಾವು–ನೋವುಗಳು ವರದಿಯಾಗಿವೆ ;

(ಆ) ನಿರ್ಮಾಣ ಸ್ಥಳಗಳು ಮತ್ತು ಕಾರ್ಖಾನೆಗಳಲ್ಲಿ ಸುರಕ್ಷತಾ ನಿಯಮಗಳನ್ನು ಪದೇ ಪದೇ ಉಲ್ಲಂಘಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಗಾಯಗೊಂಡ ಕಾರ್ಮಿಕರು ಅಥವಾ ಮೃತ ಕಾರ್ಮಿಕರ ಕುಟುಂಬಗಳಿಗೆ ಯಾವ ಪರಿಹಾರವನ್ನು ನೀಡಲಾಗಿದೆ ; (ಮಾಹಿತಿ ನೀಡುವುದು)

(ಈ) ಕೆಲಸದ ಸ್ಥಳಗಳಲ್ಲಿ ಮಹಿಳಾ ಕಾರ್ಮಿಕರ ಸುರಕ್ಷತೆಯ ಪ್ರಸ್ತುತ ಸ್ಥಿತಿ ಏನು ;

(ಉ) ಇತ್ತೀಚೆಗೆ ಎಷ್ಟು ಬಾಲ ಕಾರ್ಮಿಕರ ಪ್ರಕರಣಗಳನ್ನು ಪತ್ತೆಹಚ್ಚಿ ರಕ್ಷಿಸಲಾಗಿದೆ ಹಾಗೂ ರಕ್ಷಿಸಲ್ಪಟ್ಟ ಮಕ್ಕಳು ಮತ್ತು ಪೀಡಿತ ಕುಟುಂಬಗಳಿಗೆ ಪುನರ್ವಸತಿ ಕ್ರಮಗಳನ್ನು ಜಾರಿ ಮಾಡಲಾಗುತ್ತಿದೆಯೇ ? (ಮಾಹಿತಿ ನೀಡುವುದು)

## ಕಾರ್ಮಿಕರು ಉದ್ಯೋಗ ಕಳೆದುಕೊಂಡಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೮೬೨ (೧೨೧೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಎಷ್ಟು ಕಾರ್ಮಿಕರು ಉದ್ಯೋಗ ಕಳೆದುಕೊಂಡಿದ್ದಾರೆ ಅಥವಾ ವೇತನ ಕಡಿತವನ್ನು ಎದುರಿಸಿದ್ದಾರೆ ;

(ಆ) ವಜಾ ಮತ್ತು ಮುಚ್ಚುವಿಕೆಯ ಸಮಯದಲ್ಲಿ ಕಾರ್ಮಿಕರನ್ನು ರಕ್ಷಿಸಲು ಸರ್ಕಾರ ಯಾವ ತಕ್ಷಣದ ಕ್ರಮಗಳನ್ನು ಕೈಗೊಂಡಿದೆ ;

(ಇ) ಅನೇಕ ವಲಯಗಳಲ್ಲಿ ಕನಿಷ್ಠ ವೇತನವನ್ನು ಏಕೆ ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗಿಲ್ಲ ಹಾಗೂ ವೇತನ ಪಾವತಿ ಮಾಡದಿರುವಿಕೆ ಅಥವಾ ವಿಳಂಬ ಪಾವತಿಯ ಬಗ್ಗೆ ಎಷ್ಟು ದೂರುಗಳು ಪ್ರಸ್ತುತ ಬಾಕಿ ಉಳಿದಿವೆ ; (ಮಾಹಿತಿ ನೀಡುವುದು)

(ಈ) ಕನಿಷ್ಠ ವೇತನ ಮತ್ತು PF/ESI ಮಾನದಂಡಗಳನ್ನು ಉಲ್ಲಂಘಿಸುವ ಉದ್ಯೋಗದಾತರ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಪ್ರಧಾನಮಂತ್ರಿ ಆದರ್ಶ ಗ್ರಾಮ ಯೋಜನೆಗೆ ರಾಜ್ಯದ ಪಾಲಿನ ಹಣ ಬಿಡುಗಡೆ ಆಗದಿರುವ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೬೩ (೧೨೧೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನಮಂತ್ರಿ ಆದರ್ಶ ಗ್ರಾಮ ಯೋಜನೆ ಆರಂಭವಾದಾಗಿನಿಂದ ರಾಜ್ಯದಲ್ಲಿ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ ; ಎಷ್ಟು ಗ್ರಾಮಗಳನ್ನು ಆದರ್ಶ ಗ್ರಾಮಗಳನ್ನಾಗಿ ಘೋಷಿಸಲಾಗಿದೆ ;

ಆಯ್ಕೆಯಾಗಿರುವ ಎಷ್ಟು ಗ್ರಾಮಗಳಲ್ಲಿ ಇನ್ನೂ ಕಾಮಗಾರಿಗಳು ಪ್ರಾರಂಭವಾಗಿಲ್ಲ ; (ಜಿಲ್ಲಾವಾರು, ವರ್ಷವಾರು ಮಾಹಿತಿ ಒದಗಿಸುವುದು)

(ಆ) ಈ ಯೋಜನೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಆಯ್ಕೆಯಾಗಿರುವ ಗ್ರಾಮಗಳು ಯಾವುವು ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ಒದಗಿಸುವುದು)

(ಇ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಆಯ್ಕೆಯಾದ ಪ್ರತಿ ಗ್ರಾಮದ ಅಭಿವೃದ್ಧಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಎಷ್ಟು ಅನುದಾನ ನೀಡಲಾಗುತ್ತಿದೆ ;

(ಈ) ೨೦೧೯-೨೦, ೨೦೨೦-೨೧ ಮತ್ತು ೨೦೨೧-೨೨ರಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿರುವ ಗ್ರಾಮಗಳಿಗೆ ರಾಜ್ಯದ ಪಾಲಿನ ಅನುದಾನ ಬಿಡುಗಡೆ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಎಷ್ಟು ಅನುದಾನ ಬಿಡುಗಡೆ ಮಾಡಲು ಬಾಕಿ ಇದೆ ; ಬಾಕಿ ಇರಲು ಕಾರಣಗಳೇನು ; ಬಾಕಿ ಇರುವ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ? (ವಿವರ ಒದಗಿಸುವುದು)

## ಅನುದಾನದ ಕೊರತೆಯಿಂದ ನಿಗಮ/ಮಂಡಳಿಗಳ ಉದ್ದೇಶ ಈಡೇರದ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೪ (೧೨೧೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ನಿಗಮ/ಮಂಡಳಿಗಳು ಯಾವುವು ; ೨೦೨೩-೨೪,

೨೦೨೪-೨೫ ಮತ್ತು ೨೦೨೫-೨೬ ನೇ ಸಾಲಿನಲ್ಲಿ ಈ ನಿಗಮ/ಮಂಡಳಿಗಳಿಗೆ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ವರ್ಷವಾರು ವಿವರವನ್ನು ನಿಗಮ/ಮಂಡಳಿವಾರು ಒದಗಿಸುವುದು)

(ಆ) ಸದರಿ ಅನುದಾನದಲ್ಲಿ ಯಾವ ಯಾವ ಕಾರ್ಯಕ್ರಮ/ಯೋಜನೆಗಳಿಗೆ ಎಷ್ಟು ಹಣ ವೆಚ್ಚ ಆಗಿದೆ; ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; (ನಿಗಮ/ಮಂಡಳಿವಾರು ವಿವರವನ್ನು ವರ್ಷವಾರು ನೀಡುವುದು)

(ಇ) ಅನುದಾನದ ಕೊರತೆಯಿಂದಾಗಿ ಸ್ಥಗಿತಗೊಂಡಿರುವ ಮತ್ತು ಪೂರ್ಣಗೊಳ್ಳದ ಕಾರ್ಯಕ್ರಮ/ಯೋಜನೆಗಳು ಯಾವುವು; ಸದರಿ ಕಾರ್ಯಕ್ರಮ/ಯೋಜನೆಗಳಿಗೆ ಎಷ್ಟು ಅನುದಾನದ ಕೊರತೆ ಉಂಟಾಗಿದೆ; (ನಿಗಮ/ಮಂಡಳಿವಾರು ವಿವರ ನೀಡುವುದು)

(ಈ) ಅನುದಾನದ ಕೊರತೆಯಿಂದಾಗಿ ನಿಗಮ/ಮಂಡಳಿಗಳ ಉದ್ದೇಶ ಈಡೇರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಅನುದಾನ ಹೆಚ್ಚಳಕ್ಕೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಆಯವ್ಯಯದಲ್ಲಿ ಘೋಷಣೆ ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಅನುದಾನದ ಮಾಹಿತಿ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೯೫ (೧೨೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪, ೨೦೨೪-೨೫ ಮತ್ತು ೨೦೨೫-೨೬ರ ಆಯವ್ಯಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಮೀಸಲಿಟ್ಟಿರುವ ಮತ್ತು ಮಂಜೂರು ಮಾಡಿರುವ ಅನುದಾನ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ಅನುದಾನದಲ್ಲಿ ಹೊಸ ರಸ್ತೆಗಳ ನಿರ್ಮಾಣಕ್ಕಾಗಿ ಮುಂದುವರೆದ ಕಾಮಗಾರಿಗಳಿಗಾಗಿ ಮತ್ತು ಗುತ್ತಿಗೆದಾರರಿಗೆ ಬಾಕಿ ಬಿಲ್ ಪಾವತಿಗಾಗಿ ಬಳಕೆ ಆಗಿರುವ ಅನುದಾನ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಗುತ್ತಿಗೆದಾರರಿಗೆ ಎಷ್ಟು ಹಣ ನೀಡಲು ಬಾಕಿ ಇದೆ; ಬಾಕಿ ಹಣ ಬಿಡುಗಡೆಗೆ ಗುತ್ತಿಗೆದಾರರು ಆಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಯೇ ; ಬಂದಿದ್ದಲ್ಲಿ, ಗುತ್ತಿಗೆದಾರರಿಗೆ ಬಾಕಿ ಹಣ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಯಾವ ಕಾಲಮಿತಿಯೊಳಗೆ ಗುತ್ತಿಗೆದಾರರಿಗೆ ಬಾಕಿ ಹಣ ಪಾವತಿಸಲಾಗುವುದು ;

(ಈ) ೨೦೨೫–೨೬ನೇ ಸಾಲಿನಲ್ಲಿ ಹೊಸ ರಸ್ತೆಗಳ ನಿರ್ಮಾಣಕ್ಕೆ ಹಾಗೂ ಮುಂದುವರೆದ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು? (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

## ನಿಗಮ/ಮಂಡಳಿಗಳಿಗೆ ಅನುದಾನ ಬಿಡುಗಡೆ ಮಾಡದಿರುವ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೬ (೧೨೧೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ನಿಗಮ/ ಮಂಡಳಿಗಳು ಯಾವುವು ೨೦೨೩–೨೪, ೨೦೨೪–೨೫ ಮತ್ತು ೨೦೨೫ –೨೬ನೇ ಸಾಲಿನಲ್ಲಿ ಈ ನಿಗಮ/ಮಂಡಳಿಗಳಿಗೆ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ವರ್ಷವಾರು ವಿವರವನ್ನು ನಿಗಮ/ಮಂಡಳಿವಾರು ಒದಗಿಸುವುದು)

(ಆ) ಸದರಿ ಅನುದಾನದಲ್ಲಿ ಯಾವ ಯಾವ ಕಾರ್ಯಕ್ರಮ/ ಯೋಜನೆಗಳಿಗೆ ಎಷ್ಟು ಹಣ ವೆಚ್ಚ ಮಾಡಲಾಗಿದೆ; ಎಷ್ಟು

ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; (ನಿಗಮ/ ಮಂಡಳಿವಾರು ವಿವರಗಳನ್ನು ವರ್ಷವಾರು ನೀಡುವುದು)

(ಇ) ಅನುದಾನದ ಕೊರತೆಯಿಂದಾಗಿ ಸ್ಥಗಿತಗೊಂಡಿರುವ ಮತ್ತು ಪೂರ್ಣಗೊಳ್ಳದ ಕಾರ್ಯಕ್ರಮ/ಯೋಜನೆಗಳು ಯಾವುವು ಸದರಿ ಕಾರ್ಯಕ್ರಮ/ಯೋಜನೆಗಳಿಗೆ ಎಷ್ಟು ಅನುದಾನದ ಕೊರತೆ ಉಂಟಾಗಿದೆ ; (ನಿಗಮ/ಮಂಡಳಿವಾರು ವಿವರ ನೀಡುವುದು)

(ಈ) ಅನುದಾನದ ಕೊರತೆಯಿಂದಾಗಿ ನಿಗಮ/ಮಂಡಳಿಗಳ ಉದ್ದೇಶ ಈಡೇರದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅನುದಾನ ಹೆಚ್ಚಳಕ್ಕೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಕಟ್ಟಡ ಕಾರ್ಮಿಕರಿಗೆ ಒದಗಿಸಿರುವ ಸುರಕ್ಷತಾ ಕಿಟ್‌ಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೭ (೧೨೬೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕಾರ್ಮಿಕ ಇಲಾಖೆಯು ಕಾರ್ಮಿಕರಿಗೆ ವಿತರಿಸಲಾಗುವ ಸುರಕ್ಷತಾ ಪರಿಕರಗಳನ್ನು ಒಳಗೊಂಡಿರುವ ಸುರಕ್ಷತಾ ಕಿಟ್‌ಗಳಿಗೆ ಸಂಬಂಧಿಸಿದಂತೆ ಹಿಂದೆ ಖರೀದಿಸಿರುವ ಸುರಕ್ಷತಾ ಕಿಟ್‌ಗಳು ಇನ್ನೂ ಸಂಪೂರ್ಣವಾಗಿ ವಿತರಣೆ ಆಗದೇ ಇರುವ ಸಂದರ್ಭದಲ್ಲಿ ಸುಮಾರು ೪ ಲಕ್ಷ ಹೊಸ ಸುರಕ್ಷತಾ ಕಿಟ್‌ಗಳನ್ನು ಖರೀದಿಸಿರುವುದು ನಿಜವೇ ;

(ಆ) ಕಿಟ್‌ಗಳನ್ನು ಸ್ವೀಕರಿಸಲು ಯಾವ ಮಾನದಂಡಗಳನ್ನು (ಪ್ಯಾರಾಮೀಟರ್) ಅನುಸರಿಸಲಾಗುತ್ತಿದೆ ; ಸುರಕ್ಷತಾ ಕಿಟ್‌ಗಳಲ್ಲಿ ಇರುವ ಪರಿಕರಗಳನ್ನು ಉತ್ಪಾದನೆ ಮಾಡುವ ಕಂಪನಿಯ ಹೆಸರು ಹಾಗೂ ಪರಿಕರಗಳ ಮೂಲ ಬೆಲೆಯ ಮಾಹಿತಿ ಒದಗಿಸುವುದು ;

(ಇ) ಸದರಿ ಸುರಕ್ಷತಾ ಕಿಟ್‌ಗಳನ್ನು ಸಂಗ್ರಹಿಸಲು (ಸ್ಟೋರೇಜ್) ಎಷ್ಟು ವಿಸ್ತೀರ್ಣದ ಜಾಗದ ಅಗತ್ಯವಿದೆ; ಅಷ್ಟು ವಿಸ್ತೀರ್ಣದ ಜಾಗ ಎಲ್ಲೆಲ್ಲಿ ಲಭ್ಯವಿದೆ ಹಾಗೂ ಈಗಾಗಲೇ ಖರೀದಿಸಿರುವ ಸುರಕ್ಷತಾ ಕಿಟ್‌ಗಳನ್ನು ಸಂಗ್ರಹಿಸಿಟ್ಟಿರುವ ಜಾಗಗಳ ಕುರಿತಾದ ಮಾಹಿತಿ ಒದಗಿಸುವುದು ;

(ಈ) ಹಿಂದೆ ಖರೀದಿಸಿರುವ ಸುರಕ್ಷತಾ ಕಿಟ್‌ಗಳ ವಿತರಣೆ ಇನ್ನೂ ಪೂರ್ಣಗೊಳ್ಳದೇ ಇರುವಾಗ ೨೦೦ ಕೋಟಿ ರೂಪಾಯಿಗಳನ್ನು ಖರ್ಚು ಮಾಡುವ ತುರ್ತು ಅಗತ್ಯ ಇದೆಯೇ ;

(ಉ) ಸುರಕ್ಷತಾ ಕಿಟ್ ವಿತರಣೆಗೆ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಯಾವ ರೀತಿಯಾಗಿದೆ ; ಕಾರ್ಮಿಕರ ಆಧಾರ್ ಕಾರ್ಡ್ ಅಥವಾ ಕಾರ್ಮಿಕರ ಗುರುತಿನ ಚೀಟಿ ಇವುಗಳ ಆಧಾರದ ಮೇಲೆ ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಣೆ ಮಾಡಲಾಗಿದೆಯೇ ; ಕಿಟ್ ನೀಡಿರುವುದಕ್ಕೆ ಸ್ವೀಕೃತಿ (Receipt) ಪಡೆದುಕೊಳ್ಳಲಾಗಿದೆಯೇ ; (ಮಾಹಿತಿ ಒದಗಿಸುವುದು)

(ಊ) ಕಿಟ್‌ಗಳ ಸಂಗ್ರಹಣೆ, ಲಭ್ಯವಿರುವ ಸಂಗ್ರಹಣಾ ಜಾಗದ ಹೊಂದಾಣಿಕೆ ಹಾಗೂ ಪಾರದರ್ಶಕ ಮತ್ತು ದೋಷರಹಿತ ವಿತರಣಾ ವ್ಯವಸ್ಥೆಗೆ ಸಂಬಂಧಿಸಿದಂತೆ ಸಂಪೂರ್ಣ ಸ್ಟ್ಯಾಂಡರ್ಡ್ ಆಪರೇಟಿಂಗ್ ಪ್ರೊಸೀಜರ್ (SOP) ವಿವರಗಳನ್ನು ಒದಗಿಸುವುದು ;

(ಋ) ಸುರಕ್ಷತಾ ಕಿಟ್‌ಗಳನ್ನು ಸರಬರಾಜು ಮಾಡಲು ಟೆಂಡರ್ ಕರೆಯಲಾಗಿದೆಯೇ ; ಕರೆದಿದ್ದಲ್ಲಿ, ಟೆಂಡರ್‌ನ ಮೊತ್ತ ಎಷ್ಟು ; ಸುರಕ್ಷತಾ ಕಿಟ್ ನ ಪರಿಕರಗಳ ಗುಣಮಟ್ಟ ಪರಿಶೀಲಿಸಲಾಗಿದೆಯೇ; ಹೌದಾದಲ್ಲಿ, ಗುಣಮಟ್ಟ ಪರಿಶೀಲಿಸಿರುವ ಅಧಿಕಾರಿಗಳ ಹೆಸರು ಹಾಗೂ ಹುದ್ದೆಯ ಮಾಹಿತಿ ಒದಗಿಸುವುದು ; ಅಲ್ಲದೇ ಸುರಕ್ಷತಾ ಕಿಟ್‌ನಲ್ಲಿರುವ ಪರಿಕರಗಳು ISI ಪ್ರಮಾಣೀಕೃತವಾಗಿದೆಯೇ ? (ಮಾಹಿತಿ ಒದಗಿಸುವುದು)

# Electrician Tool Kit ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯೮ (೧೨೬೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಲ್ಲಿ Electrician Tool kit ಖರೀದಿಸಲು ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ; ಸದರಿ ಮೊತ್ತವನ್ನು ಟೆಂಡರ್ ಪಡೆದಿರುವ ಯಾವ ಸಂಸ್ಥೆಯ ಹೆಸರಿನಲ್ಲಿ ನೀಡಲಾಗಿದೆ ; ಸಂಸ್ಥೆಯ ಹೆಸರು ವಿಳಾಸ, ಹಾಗೂ ಸದರಿ ಸಂಸ್ಥೆಗೆ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಪಾವತಿಸಲಾದ ಮೊತ್ತದ ಸಮಗ್ರ ವಿವರ ನೀಡುವುದು ; (ಸದರಿ ಮೊತ್ತವನ್ನು ಡ್ರಾ ಮಾಡಲಾದ ದಿನಾಂಕ, ಎಷ್ಟು ಮೊತ್ತದ ಬಿಲ್ ಡ್ರಾ ಮಾಡಲಾಗಿದೆ, ಬಿಲ್ ಸಂಖ್ಯೆ, ಪಾವತಿದಾರರ ಹೆಸರು, ಯಾವ ಬ್ಯಾಂಕಿನ ಮೂಲಕ ಪಾವತಿಸಲಾಗಿದೆ)

(ಆ) ಕಳೆದ ಎರಡು ವರ್ಷದಲ್ಲಿ Electrician Tool kit ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ ; ಫಲಾನುಭವಿಗಳ ಆಧಾರ್ ಕಾರ್ಡ್ ಹಾಗೂ ಲೇಬರ್ ಕಾರ್ಡ್‌ಗಳ ವಿವರ ಒದಗಿಸುವುದು ; ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) Electrician Tool kit ಬಳಕೆಯ ಕುರಿತು ಇದುವರೆಗೆ ಎಷ್ಟು ತರಬೇತಿ ಶಿಬಿರಗಳನ್ನು ಆಯೋಜಿಸಲಾಗಿದೆ ; ತರಬೇತಿ ನೀಡಲು ಯಾವ ಸಂಸ್ಥೆಗಳನ್ನು ಆಯ್ಕೆ ಮಾಡಲಾಗಿದೆ ; ತರಬೇತಿ ನೀಡಲು ಆ ಸಂಸ್ಥೆಗೆ ಇರಬೇಕಾದ ಅರ್ಹತೆಗಳೇನು ; ತರಬೇತಿ ಪಡೆದ ಹಾಗೂ Electrician Tool kit ಪಡೆದ ಫಲಾನುಭವಿಗಳ ಆಧಾರ್ ಕಾರ್ಡ್ ಹಾಗೂ ಲೇಬರ್ ಕಾರ್ಡ್ ಜೋಡಣೆ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) Electrician Tool kit ನಲ್ಲಿ ಇರುವ ಪ್ರತಿಯೊಂದು ವಸ್ತುವಿನ ಬೆಲೆ ಎಷ್ಟು ; ಒಟ್ಟಾರೆಯಾಗಿ Electrician Tool kit ನ ಬೆಲೆ ಎಷ್ಟು ; ಎಲ್ಲಾ ವಸ್ತುಗಳು ISI ಗುಣಮಟ್ಟ ಹೊಂದಿರುವ ಬಗ್ಗೆ ಪ್ರಮಾಣೀಕರಿಸಿದವರ ಹೆಸರು ಮತ್ತು ಹುದ್ದೆಯೊಂದಿಗೆ ವಿವರ ನೀಡುವುದು ?

## Welding Tool Kit ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೯ (೧೨೭೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಲ್ಲಿ Welding Tool kit ಖರೀದಿಸಲು ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ; ಸದರಿ ಮೊತ್ತವನ್ನು ಟೆಂಡರ್ ಪಡೆದಿರುವ ಯಾವ ಸಂಸ್ಥೆಯ ಹೆಸರಿನಲ್ಲಿ ನೀಡಲಾಗಿದೆ ; ಸಂಸ್ಥೆಯ ಹೆಸರು ವಿಳಾಸ ಹಾಗೂ ಸದರಿ ಸಂಸ್ಥೆಗೆ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಪಾವತಿಸಲಾದ ಮೊತ್ತದ ಸಮಗ್ರ ವಿವರ ನೀಡುವುದು ; (ಸದರಿ ಮೊತ್ತವನ್ನು ಡ್ರಾ ಮಾಡಲಾದ ದಿನಾಂಕ, ಎಷ್ಟು ಮೊತ್ತದ ಬಿಲ್ ಡ್ರಾ ಮಾಡಲಾಗಿದೆ, ಬಿಲ್ ಸಂಖ್ಯೆ, ಪಾವತಿದಾರರ ಹೆಸರು, ಯಾವ ಬ್ಯಾಂಕಿನ ಮೂಲಕ ಪಾವತಿಸಲಾಗಿದೆ)

(ಆ) ಕಳೆದ ಎರಡು ವರ್ಷದಲ್ಲಿ Welding Tool kit ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ; ಫಲಾನುಭವಿಗಳ ಆಧಾರ್ ಕಾರ್ಡ್ ಹಾಗೂ ಲೇಬರ್ ಕಾರ್ಡ್‌ಗಳ ವಿವರ ಒದಗಿಸುವುದು; ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) Welding Tool kit ಬಳಕೆಯ ಕುರಿತು ಇದುವರೆಗೆ ಎಷ್ಟು ತರಬೇತಿ ಶಿಬಿರಗಳನ್ನು ಆಯೋಜಿಸಲಾಗಿದೆ ; ತರಬೇತಿ ನೀಡಲು ಯಾವ ಸಂಸ್ಥೆಗಳನ್ನು ಆಯ್ಕೆ ಮಾಡಲಾಗಿದೆ ; ತರಬೇತಿ ನೀಡಲು

ಆ ಸಂಸ್ಥೆಗೆ ಇರಬೇಕಾದ ಅರ್ಹತೆಗಳೇನು ; ತರಬೇತಿ ಪಡೆದ ಹಾಗೂ Welding Tool kit ಪಡೆದ ಫಲಾನುಭವಿಗಳ ಆಧಾರ್ ಕಾರ್ಡ್ ಹಾಗೂ ಲೇಬರ್ ಕಾರ್ಡ್ ಜೋಡಣೆ ಕುರಿತು ಸರ್ಕಾರ ತೆಗೆದು ಕೊಂಡ ಕ್ರಮಗಳೇನು ;

(ಈ) Welding Tool kit ನಲ್ಲಿ ಇರುವ ಪ್ರತಿಯೊಂದು ವಸ್ತುವಿನ ಬೆಲೆ ಎಷ್ಟು ; ಒಟ್ಟಾರೆಯಾಗಿ Welding Tool kit ನ ಬೆಲೆ ಎಷ್ಟು ; ಎಲ್ಲಾ ವಸ್ತುಗಳು ISI ಗುಣಮಟ್ಟ ಹೊಂದಿರುವ ಬಗ್ಗೆ ಪ್ರಮಾಣೀಕರಿಸಿದವರ ಹೆಸರು ಮತ್ತು ಹುದ್ದೆಯೊಂದಿಗೆ ವಿವರ ನೀಡುವುದು ?

## Mason Tool Kit ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೦೦ (೧೨೭೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷದಲ್ಲಿ Mason Tool kit (ಮೇಸನ್ ಟೂಲ್ ಕಿಟ್) ಖರೀದಿಸಲು ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ; ಸದರಿ ಮೊತ್ತವನ್ನು ಟೆಂಡರ್ ಪಡೆದಿರುವ ಯಾವ ಸಂಸ್ಥೆಯ ಹೆಸರಿನಲ್ಲಿ ನೀಡಲಾಗಿದೆ ; ಸಂಸ್ಥೆಯ ಹೆಸರು, ವಿಳಾಸ ಹಾಗೂ ಸದರಿ ಸಂಸ್ಥೆಗೆ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಪಾವತಿಸಲಾದ ಮೊತ್ತದ ಸಮಗ್ರ ವಿವರ ನೀಡುವುದು ; (ಸದರಿ ಮೊತ್ತವನ್ನು ಡ್ರಾ ಮಾಡಲಾದ ದಿನಾಂಕ, ಎಷ್ಟು ಮೊತ್ತದ ಬಿಲ್ ಡ್ರಾ ಮಾಡಲಾಗಿದೆ, ಬಿಲ್ ಸಂಖ್ಯೆ, ಪಾವತಿದಾರರ ಹೆಸರು, ಯಾವ ಬ್ಯಾಂಕಿನ ಮೂಲಕ ಪಾವತಿಸಲಾಗಿದೆ)

(ಆ) ಕಳೆದ ೨ ವರ್ಷದಲ್ಲಿ ಮೇಸನ್ ಟೂಲ್ ಕಿಟ್ ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ ; ಫಲಾನುಭವಿಗಳ ಆಧಾರ್ ಕಾರ್ಡ್ ಹಾಗೂ ಲೇಬರ್ ಕಾರ್ಡ್‌ಗಳ ವಿವರ ಒದಗಿಸುವುದು ; ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) Mason Tool kit ಬಳಕೆಯ ಕುರಿತು ಇದುವರೆಗೆ ಎಷ್ಟು ತರಬೇತಿ ಶಿಬಿರಗಳನ್ನು ಆಯೋಜಿಸಲಾಗಿದೆ ; ತರಬೇತಿ ನೀಡಲು ಯಾವ ಸಂಸ್ಥೆಗಳನ್ನು ಆಯ್ಕೆ ಮಾಡಲಾಗಿದೆ ; ತರಬೇತಿ ಪಡೆದ ಹಾಗೂ Mason Tool kit ಪಡೆದ ಫಲಾನುಭವಿಗಳ ಆಧಾರ್ ಕಾರ್ಡ್ ಹಾಗೂ ಲೇಬರ್ ಕಾರ್ಡ್ ಜೋಡಣೆ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) Mason Tool kit ನಲ್ಲಿ ಇರುವ ಪ್ರತಿಯೊಂದು ವಸ್ತುವಿನ ಬೆಲೆ ಎಷ್ಟು ; ಒಟ್ಟಾರೆಯಾಗಿ Mason Tool kit ನ ಬೆಲೆ ಎಷ್ಟು ; ಎಲ್ಲಾ ವಸ್ತುಗಳು ISI ಗುಣ ಮಟ್ಟ ಹೊಂದಿರುವ ಬಗ್ಗೆ ಪ್ರಮಾಣೀಕರಿಸಿದವರ ಹೆಸರು ಮತ್ತು ಹುದ್ದೆಯೊಂದಿಗೆ ವಿವರ ನೀಡುವುದು ?

## Menstrual Cup ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೦೧ (೧೨೭೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೪–೨೫ನೇ ಸಾಲಿನಲ್ಲಿ Menstrual cup ಗಳನ್ನು ಮಾತ್ರವೇ ಫಲಾನುಭವಿಗಳಿಗೆ ನೀಡುವುದರಿಂದ ಆ ಫಲಾನುಭವಿಗಳಿಗೆ ಆಗುವ ಲಾಭವೇನು ; ಒಬ್ಬ ಫಲಾನುಭವಿಗೆ ಒಂದು ಭಾರಿ ನೀಡಲಾದ Menstrual cup ಎಷ್ಟು ಬಾರಿ ಬಳಕೆ ಮಾಡಬಹುದು ಹಾಗೂ ಈ ಕಾರ್ಯಕ್ರಮ ಎಷ್ಟು ವರ್ಷ ಜಾರಿಯಲ್ಲಿರುತ್ತದೆ ; (ಸಮಗ್ರ ವಿವರ ನೀಡುವುದು)

(ಆ) ರೂ ೫೫ ರಿಂದ ರೂ. ೮೮ ಕ್ಕೆ ತೆರೆದ ಮಾರುಕಟ್ಟೆಯಲ್ಲಿ ದೊರೆಯುವ ಉತ್ತಮ ಗುಣಮಟ್ಟದ BIS ಸ್ಟಾಂಡರ್ಡ್ Menstrual cup ಅನ್ನು ರೂ.೨೮೦ಕ್ಕೂ ಹೆಚ್ಚು ಬೆಲೆ ನೀಡಿ ಖರೀದಿಸುವಲ್ಲಿ ಭ್ರಷ್ಟಾಚಾರವಾಗಿರುವ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) Menstrual cup ಬಳಕೆಯ ಕುರಿತು ಇದುವರೆಗೆ ಎಷ್ಟು ತರಬೇತಿ ಶಿಬಿರಗಳನ್ನು ಆಯೋಜಿಸಲಾಗಿದೆ ; ತರಬೇತಿ ನೀಡಲು ಯಾವ ಸಂಸ್ಥೆಗಳನ್ನು ಆಯ್ಕೆ ಮಾಡಲಾಗಿದೆ ; ತರಬೇತಿ ಪಡೆದ ಮಹಿಳೆಯರ ಮತ್ತು ಫಲಾನುಭವಿಗಳ ಆಧಾರ್ ಕಾರ್ಡ್ ಹಾಗೂ ಲೇಬರ್ ಕಾರ್ಡ್ ಜೋಡಣೆ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ನಾಗರಿಕ ಸಮಾಜದ ಸಾಮಾನ್ಯ ಮಹಿಳೆಯರೇ ಬಳಸಲು ಹಿಂಜರಿಯುವ Menstrual cup ಅನ್ನು ಕಾರ್ಮಿಕ ಮಹಿಳೆಯರ ಹೆಸರಿನಲ್ಲಿ ಖರೀದಿಸುತ್ತಿರುವ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಕೆ.ಕೆ.ಆರ್.ಡಿ.ಬಿ ಮಂಡಳಿಯಿಂದ ಅನುದಾನದ ಹಂಚಿಕೆ ಬಗ್ಗೆ

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೨ (೧೨೨೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ನೇ ಸಾಲಿನಿಂದ ೨೦೨೫–೨೬ನೇ ಸಾಲಿನವರೆಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಅನುದಾನ ನೀಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಅನುದಾನದಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನವು ಕಲ್ಯಾಣ ಕರ್ನಾಟಕ ಭಾಗದ ವಿಧಾನ ಪರಿಷತ್ ಭಾಗದ ಶಾಸಕರಿಗೆ ಅನುದಾನ ಹಂಚಿಕೆಗೆ ಅವಕಾಶವಿದೆಯೇ ; ಇದ್ದಲ್ಲಿ, ಈ ಭಾಗದಲ್ಲಿ ಯಾವ ಯಾವ ಜಿಲ್ಲೆಯ ವಿಧಾನ ಪರಿಷತ್ ಶಾಸಕರಿಗೆ ಎಷ್ಟು ಅನುದಾನ ಹಂಚಿಕೆ ಮಾಡಲಾಗಿದೆ ;

(ಈ) ಇಲ್ಲದಿದ್ದಲ್ಲಿ, ಸರ್ಕಾರದಿಂದ ತಾರತಮ್ಯ ಮಾಡದೇ ಕಲ್ಯಾಣ ಕರ್ನಾಟಕ ಭಾಗದ ವಿಧಾನ ಪರಿಷತ್ ಭಾಗದ ಶಾಸಕರಿಗೆ ಅನುದಾನ ಹಂಚಿಕೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು ;

(ಉ) ಸದರಿ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಅನುಷ್ಠಾನಗೊಳಿಸಲಾದ ಕಾಮಗಾರಿಗಳನ್ನು ತಂತ್ರಾಂಶದಲ್ಲಿ (ವೆಬ್‌ಸೈಟ್) ಅಳವಡಿಸದೆ ಇರಲು ಕಾರಣವೇನು ? (ಮಾಹಿತಿ ಒದಗಿಸುವುದು)

## ರಾಮನಗರದ ಜಾನಪದ ಪರಿಷತ್ತಿಗೆ ಅನುದಾನ ಒದಗಿಸುವ ಬಗ್ಗೆ

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೩ (೧೨೨೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರದಲ್ಲಿರುವ ಜಾನಪದ ಪರಿಷತ್ತಿನ ಮೂಲ ಕಾರ್ಯಭಾರಗಳೇನು/ಉದ್ದೇಶಗಳೇನು ಅದರಲ್ಲಿ ಸಂಸ್ಥೆ ಸಾಧಿಸಿರುವ ಪ್ರಗತಿಗಳೇನು ; (ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಜಾನಪದ ಪರಿಷತ್ತಿಗೆ ಸರ್ಕಾರ ನೀಡುವ ಅನುದಾನ ಎಷ್ಟು; ಈ ಸಂಸ್ಥೆಗೆ ಇತರೆ ಹಣದ ಮೂಲಗಳಿವೆಯೇ ; ಇದ್ದಲ್ಲಿ, ಅದರ ವಿವರಗಳೊಂದಿಗೆ ಸರ್ಕಾರ ಮತ್ತು ಇತರೆ ಮೂಲಗಳಿಂದ ಬಂದ ಅನುದಾನ/ಆದಾಯ ಮತ್ತು ಖರ್ಚು ವೆಚ್ಚಗಳ ಮಾಹಿತಿ ಒದಗಿಸುವುದು ;

(ಇ) ಈ ಸಂಸ್ಥೆಯು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಸರ್ಕಾರವು ಹೆಚ್ಚಿನ ಅನುದಾನವನ್ನು ನೀಡಲು ಮುಂದಾಗದೆ ಇರಲು ಕಾರಣಗಳೇನು ; (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ಜಾನಪದ ವಿಷಯದಲ್ಲಿ ಈ ಸಂಸ್ಥೆಯು ಉತ್ತಮ ಕಾರ್ಯ ನಿರ್ವಹಿಸುವಂತೆ ಹೆಚ್ಚಿನ ಅನುದಾನವನ್ನು ನೀಡಲು ಸ್ಪಷ್ಟ ನಿರ್ಧಾರಗಳೇನು ? (ಮಾಹಿತಿ ಒದಗಿಸುವುದು)

## ರಾಜ್ಯದ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಅನುದಾನ ಒದಗಿಸುವ ಬಗ್ಗೆ

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೪ (೧೨೨೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ನೀಡಲಾಗಿರುವ ಅನುದಾನ ಎಷ್ಟು; ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ೨೦೨೩–೨೪ನೇ ಸಾಲಿನಿಂದ ೨೦೨೫–೨೬ನೇ ಸಾಲಿನವರೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; (ಪ್ರತಿ ವಾರ್ಷಿಕವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಸದರಿ ಸಾಲಿನಲ್ಲಿ ಆಯ್ಕೆ ಮಾಡಿದ ಫಲಾನುಭವಿಗಳು ಎಷ್ಟು; (ಪ್ರತಿ ವಾರ್ಷಿಕವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ ಹೆಚ್ಚಿನ ಅನುದಾನವನ್ನು ನೀಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ?

## ನರೇಗಾ ಯೋಜನೆಯಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ಬಗ್ಗೆ

**ಶ್ರೀ ಶರವಣ ಟಿ. ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೦೫ (೧೧೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನರೇಗಾ ಯೋಜನೆಯಡಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಎಷ್ಟು; ಅವರಿಗೆ ಪಾವತಿಸುತ್ತಿರುವ ಗೌರವ ಧನವೆಷ್ಟು; ಗೌರವ ಧನ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪಾವತಿಗೆ ಬಾಕಿ ಇರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಪಾವತಿಸಲಾಗುವುದು ;

(ಆ) ಸದರಿ ಸಿಬ್ಬಂದಿಗಳಿಗೆ ವೈದ್ಯಕೀಯ ಸೌಲಭ್ಯ, ಉದ್ಯೋಗ ಭದ್ರತೆ ಸೇರಿದಂತೆ ಇತರೆ ಸೌಲಭ್ಯಗಳನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) VBGRAM G ಯೋಜನೆಯಲ್ಲಿ ಸದರಿ ಸಿಬ್ಬಂದಿಯನ್ನು ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಹೇಗೆ ಮುಂದುವರೆಸಲಾಗುವುದು ; ಇಲ್ಲದಿದ್ದಲ್ಲಿ, ಕಾರಣಗಳೇನು ?

## ನರೇಗಾ ಯೋಜನೆಯ ಅಕ್ರಮಗಳ ಕುರಿತು

**ಶ್ರೀ ಶರವಣ ಟಿ. ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೦೬ (೧೧೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ನರೇಗಾ ಯೋಜನೆಯಲ್ಲಿ ನಡೆದ ಅಕ್ರಮಗಳ ಪ್ರಕರಣಗಳೆಷ್ಟು ಮತ್ತು ಸ್ವರೂಪಗಳಾವುವು ; (ವರ್ಷವಾರು ಮತ್ತು ಜಿಲ್ಲೆವಾರು ಮಾಹಿತಿ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ವಸೂಲಾತಿ ಮತ್ತು ಅಕ್ಷೇಪಣೆ ಸೂಚಿಸಿದ ಪ್ರಕರಣಗಳೆಷ್ಟು ಮತ್ತು ಮೊತ್ತವೆಷ್ಟು ; ಇಲ್ಲಿಯವರೆಗೆ ಎಷ್ಟು ಮೊತ್ತ ವಸೂಲಿ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಸೂಲಾತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; ದೊಡ್ಡ ಪ್ರಮಾಣದಲ್ಲಿ ವಸೂಲಾತಿ ಮೊತ್ತ ಬಾಕಿ ಇರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ವಸೂಲಿ ಮಾಡಲಾಗುವುದು ; ಪ್ರಕರಣವಾರು ಮಾಹಿತಿ ನೀಡುವುದು ?

## ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿನಿಲಯಗಳ ಬಗ್ಗೆ

**ಶ್ರೀ ಶರವಣ ಟಿ. ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೦೭ (೧೧೪೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ೨೦೨೩ ರಿಂದ ೨೦೨೫ ರವರೆಗೆ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿಗಳ ನಿಲಯಗಳಿಗೆ ಪ್ರವೇಶ ಬಯಸಿ ಬಂದ ಅರ್ಜಿಗಳೆಷ್ಟು ; ಹಂಚಿಕೆಯಾದ ಸೀಟುಗಳು ದಾಖಲಾದ ವಿದ್ಯಾರ್ಥಿಗಳು ಮತ್ತು ಹಾಸ್ಟೆಲ್ ಪ್ರವೇಶ ನವೀಕರಿಸಿಕೊಂಡ ವಿದ್ಯಾರ್ಥಿಗಳ ಸಂಖ್ಯೆಯ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಹಾಸ್ಟೆಲ್ ಪ್ರವೇಶ ಬಯಸಿದ ಅರ್ಜಿ ಮತ್ತು ಹಂಚಿಕೆಯಾದ ಸೀಟುಗಳ ನಡುವೆ ಅಂತರವಿರಲು ಕಾರಣಗಳೇನು ; (ವರ್ಷವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಯಾವ ಸ್ಥಳಗಳಲ್ಲಿ ಹಾಸ್ಟೆಲ್‌ಗಳು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ ; ಬಾಡಿಗೆ ದರವೆಷ್ಟು ; ಸದರಿ ಸ್ಥಳಗಳಲ್ಲಿ ಸ್ವಂತ ಕಟ್ಟಡ ನಿರ್ಮಿಸದಿರಲು ಕಾರಣಗಳೇನು; (ಹಾಸ್ಟೆಲ್‌ವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಿಂದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ಹಾಸ್ಟೆಲ್‌ಗಳ ಆರಂಭಕ್ಕೆ ಬಂದ ಬೇಡಿಕೆ ಎಷ್ಟು; ಹಾಸ್ಟೆಲ್‌ಗಳ ಕಾಮಗಾರಿಗಳಿಗೆ ಮಂಜೂರು ಮಾಡಿದ ಅನುದಾನ ಹಾಗೂ ಸದರಿ ಕಾಮಗಾರಿಗಳ ವಸ್ತುಸ್ಥಿತಿ ಬಗ್ಗೆ ವಿದ್ಯಾರ್ಥಿನಿಲಯ ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯ ಸರ್ಕಾರವು ನೇಮಕಾತಿಯಲ್ಲಿ ಅಳವಡಿಸಿರುವ ೫೬% ಮೀಸಲಾತಿ ಹಾಗೂ ಇದರಿಂದಾಗಿ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೦೮ (೧೨೩೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ೫೬% ಮೀಸಲಾತಿಗೆ ಸಂಬಂಧಿಸಿದಂತೆ ಒಟ್ಟು ಎಷ್ಟು ಪ್ರಕರಣಗಳು ದಾಖಲಾಗಿವೆ ; ಈ ಪ್ರಕರಣಗಳು ಯಾವ ಹಂತದಲ್ಲಿವೆ ; (ಎಲ್ಲಾ ಪ್ರಕರಣಗಳ ವಿವರ ನೀಡುವುದು)

(ಆ) ರಾಜ್ಯದ ಲಕ್ಷಾಂತರ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ೫೬% ಮೀಸಲಾತಿ ಪ್ರಕರಣವು ಇತ್ಯಾರ್ಥವಾಗುವವರೆಗೂ ಹಳೆಯ ೫೦% ಮೀಸಲಾತಿ ಮತ್ತು ರೋಸ್ಟರ್ ಅನುಸಾರವಾಗಿಯೇ ನೇಮಕಾತಿಗಳನ್ನು ಮಾಡಿಕೊಳ್ಳಬಹುದಲ್ಲವೇ ; ಈ ಕುರಿತು ಸರ್ಕಾರ ಯಾವ ನಿರ್ಧಾರ ಕೈಗೊಳ್ಳಲಿದೆ ; ಈ ಕುರಿತು ಸ್ಪಷ್ಟನೆ ನೀಡುವುದು ;

(ಇ) ಮುಂದಿನ ದಿನಗಳಲ್ಲಿ ಈ ಮೀಸಲಾತಿ ಪ್ರಕರಣವನ್ನು ಬೇಗ ಇತ್ಯರ್ಥ ಪಡಿಸಿಕೊಳ್ಳಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; (ವಿವರ ನೀಡುವುದು)

(ಈ) ೩೮೪ ಕೆ.ಎ.ಎಸ್ ಗೆಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳ ನೇಮಕಾತಿಯಲ್ಲಿ ರೋಸ್ಟರ್/ಮೀಸಲಾತಿ ಅನ್ವಯವಾಗಲಿದ್ದು, ೫೬% ಗೆ ಸಂಬಂಧಿಸಿದ ಮಧು ಬಿ. ಎನ್ ಪ್ರಕರಣದಲ್ಲಿ ಉಚ್ಚ ನ್ಯಾಯಾಲಯವು ಅಂತಿಮವಾಗಿ ೫೦% ಗೆ ನಿಗದಿಪಡಿಸಲು ಆದೇಶಿಸಿದರೆ, ಈ ನೇಮಕಾತಿಯಲ್ಲಿ ಯಾವ ರೀತಿಯ ಮಾರ್ಪಾಡುಗಳನ್ನು ಮಾಡಲಾಗುತ್ತದೆ ?

## ಪ್ರಾದೇಶಿಕ ಅಸಮತೋಲನವನ್ನು ನಿವಾರಿಸಲು ರಚಿಸಲಾಗಿದ್ದ ಡಾ॥ ಡಿ.ಎಂ. ನಂಜುಂಡಪ್ಪ ಆಯೋಗದ ವರದಿಯಲ್ಲಿ ತಿಳಿಸಿರುವ ತಾಲ್ಲೂಕುಗಳ ಪ್ರಸ್ತುತ ಸ್ಥಿತಿಗತಿಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೧೯ (೧೨೩೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾದೇಶಿಕ ಅಸಮತೋಲನವನ್ನು ನಿವಾರಣೆ ಮಾಡಲು ಯಾವ ಯಾವ ಸಮಿತಿಗಳನ್ನು ರಚಿಸಲಾಗಿದೆ ; ಸದರಿ ಸಮಿತಿಗಳಿಗೆ ರಾಜ್ಯಾದ್ಯಂತ ಅಧ್ಯಯನ ನಡೆಸಿ ವರದಿಯನ್ನು ನೀಡಲು ಮೀಸಲಿರಿಸಿದ್ದ ಅನುದಾನವೆಷ್ಟು ;

(ಆ) ಡಾ॥ ಡಿ.ಎಂ ನಂಜುಂಡಪ್ಪ ವರದಿಯನ್ವಯ ರಾಜ್ಯದಲ್ಲಿರುವ ಒಟ್ಟು ಎಷ್ಟು ತಾಲ್ಲೂಕುಗಳು ಅತಿ ಹೆಚ್ಚು ಹಿಂದುಳಿದ ತಾಲ್ಲೂಕುಗಳೆಂದು ಗುರುತಿಸಲಾಗಿತ್ತು ; ಈ ಸಮಿತಿಯು ಅಂದಿನ ತಾಲ್ಲೂಕುಗಳ ಸ್ಥಿತಿಗತಿಗಳನ್ನು ನಿರ್ಧರಿಸಲು ಅನುಸರಿಸಿದ ನಿಯಮಗಳು, ರೂಪುರೇಷೆಗಳು ಹಾಗೂ ನಿಬಂಧನೆಗಳು ಯಾವುವು ಹಾಗೂ ಈ ಸಮಿತಿಯು ಚಾಲ್ತಿಯಲ್ಲಿದ್ದ ಒಟ್ಟು ಅವಧಿ ಎಷ್ಟು ಹಾಗೂ ಅಭಿವೃದ್ಧಿಗಾಗಿ ನೀಡಲಾದ ಶಿಫಾರಸ್ಸುಗಳು ಯಾವುವು ;

(ಇ) ಸದರಿ ವರದಿಯು ನೀಡಿದ ಪ್ರತಿ ತಾಲ್ಲೂಕಿನ ಅಂದಿನ ಸ್ಥಿತಿಗತಿಗಳ ಹಾಗೂ ಇತ್ತೀಚೆಗೆ ರಚಿಸಿದ್ದ ಪ್ರೋ.ಎಂ.ಗೋವಿಂದರಾವ್ ಸಮಿತಿಯು ನೀಡಿದ್ದ ತಾಲ್ಲೂಕುಗಳ ಪ್ರಸ್ತುತ ಸ್ಥಿತಿಗತಿಗಳ ವ್ಯತ್ಯಾಸಗಳೇನು ಅಥವಾ ಬದಲಾವಣೆಗಳೇನು ;

(ಈ) ಡಾ॥ ಡಿ.ಎಂ ನಂಜುಂಡಪ್ಪ ವರದಿಯ ಶಿಫಾರಸ್ಸಿನಂತೆ ೧೫ ವರ್ಷಗಳ ಪ್ರಾದೇಶಿಕ ಅಸಮತೋಲನ ನಿವಾರಣೆಯ ಅಭಿವೃದ್ಧಿಗೆ ಮೀಸಲಿರಿಸಿದ ಅನುದಾನವೆಷ್ಟು ; ಇದರಲ್ಲಿ ಬಳಕೆಯಾದ ಹಾಗೂ ಬಾಕಿ ಉಳಿದ ಅನುದಾನ ಎಷ್ಟು ; ಇದರಲ್ಲಿ ಕೈಗೊಂಡ ವಿವಿಧ ಆಭಿವೃದ್ಧಿ ಕಾರ್ಯಕ್ರಮಗಳು, ಕಾಮಗಾರಿಗಳು ಯಾವುವು ; ತಾಲ್ಲೂಕುವಾರು ಹಾಗೂ ಜಿಲ್ಲಾವಾರು ಮಾಹಿತಿಯನ್ನು ನೀಡುವುದು ;

(ಉ) ಇತ್ತೀಚೆಗೆ ರಚನೆಯಾದ ಪ್ರೋ. ಎಂ.ಗೋವಿಂದರಾವ್ ರವರ ಸಮಿತಿಯು ಯಾವ ಯಾವ ಆಯಾಮಗಳಲ್ಲಿ ಅಧ್ಯಯನ ನಡೆಸಿದೆ ; ಹಾಗೂ ಈ ಸಮಿತಿಯು ಕಳೆದ ೧೫ ವರ್ಷಗಳಲ್ಲಿ ಡಾ॥ ಡಿ.ಎಂ.ನಂಜುಂಡಪ್ಪ ವರದಿಯಲ್ಲಿ ತಿಳಿಸಿದ ತಾಲ್ಲೂಕುಗಳ ಅಭಿವೃದ್ಧಿ ಕಾರ್ಯಗಳಲ್ಲಿ ಆದ ಲೋಪದೋಷಗಳ ಬಗ್ಗೆ ನೀಡಿದ ವಿವರಗಳು ಯಾವುವು ;

(ಊ) ಪ್ರೋ.ಎಂ.ಗೋವಿಂದರಾವ್ ರವರ ಸಮಿತಿಯ ಶಿಫಾರಸ್ಸುಗಳು ಯಾವುವು ? (ಡಾ॥ ಡಿ.ಎಂ.ನಂಜುಂಡಪ್ಪ ವರದಿ ಹಾಗೂ ಪ್ರೋ. ಎಂ. ಗೋವಿಂದರಾವ್ ಸಮಿತಿಯ ವರದಿಯ ಪ್ರತಿಯನ್ನು ನೀಡುವುದು)

# ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಬರುವ ವಸತಿ ಶಿಕ್ಷಣ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಚಿತ್ರಕಲಾ ಶಿಕ್ಷಕರ ವೇತನದ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೧೦ (೧೨೩೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ನಡೆಯುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ॥ ಬಿ. ಆರ್. ಅಂಬೇಡ್ಕರ್ ಹಾಗೂ ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ ಯಾವೆಲ್ಲ ಹುದ್ದೆಗಳ ವಿಶೇಷ ಶಿಕ್ಷಕರಾಗಿರುತ್ತಾರೆ ;

(ಆ) ಸಂಗೀತ ಶಿಕ್ಷಕ, ದೈಹಿಕ ಶಿಕ್ಷಕರು ಹಾಗೂ ಕಂಪ್ಯೂಟರ್ ಶಿಕ್ಷಕರನ್ನು ವಿಶೇಷ ಶಿಕ್ಷಕರು ಎಂದು ಪರಿಗಣಿಸುವುದಾದರೆ ಚಿತ್ರಕಲಾ ಶಿಕ್ಷಕರನ್ನು ವಿಶೇಷ ಶಿಕ್ಷಕರು ಎಂದು ಪರಿಗಣಿಸದೇ ಇರಲು ಕಾರಣವೇನು ;

(ಇ) ಚಿತ್ರಕಲಾ ಶಿಕ್ಷಕರ ವೇತನ ಹೊರತುಪಡಿಸಿ ಬೇರೆ ಎಲ್ಲಾ ಶಿಕ್ಷಕರ ಹುದ್ದೆಗಳು ಸಮಾನ ವೇತನ ಮಾಡಿ ಕೇವಲ ಚಿತ್ರಕಲಾ ಶಿಕ್ಷಕರ ಹುದ್ದೆಗೆ ಮಾತ್ರ ವೇತನ ಕಡಿಮೆ ಮಾಡಲು ಕಾರಣವೇನು ; ಹಾಗೂ ಚಿತ್ರಕಲಾ ಶಿಕ್ಷಕರ ವೇತನ ತಾರತಮ್ಯ ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಈಗಾಗಲೇ ಸಂಗೀತ ಶಿಕ್ಷಕರ ಮತ್ತು ಸ್ಟಾಫ್ ನರ್ಸ್‌ಗಳ ವೇತನ ಸರಿಪಡಿಸಲಾಗಿದ್ದು, ಆದರೆ ಚಿತ್ರಕಲಾ ಶಿಕ್ಷಕರಿಗೆ ಇಲ್ಲಿಯವರೆಗೂ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ; ಯಾವ ಕಾಲಮಿತಿಯಲ್ಲಿ ಈ ವೇತನ ತಾರತಮ್ಯವನ್ನು ಸರಿಪಡಿಸಲಾಗುತ್ತದೆ ? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇಡ್–೧ ಮತ್ತು ಗ್ರೇಡ್–೨ ಹುದ್ದೆಗಳ ನೇಮಕಾತಿಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೧೧ (೧೨೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿಯಿರುವ ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇಡ್–೧ ಮತ್ತು ಗ್ರೇಡ್–೨ ಹುದ್ದೆಗಳ ನೇಮಕಾತಿಗಾಗಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದಲ್ಲಿ, ಎಷ್ಟು ಹುದ್ದೆಗಳ ನೇಮಕಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ;

(ಆ) ಪ್ರಸ್ತುತ ನೇಮಕಾತಿ ಹಂತದಲ್ಲಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ಹೊರತು ಪಡಿಸಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಎಷ್ಟು ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆಯಲಾಗಿದೆ ; (ವಿವರ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಉಳಿದ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳಲ್ಲಿ ನೇಮಕಾತಿ ಆಗದೆ ಇರುವುದರಿಂದ ಆಗುತ್ತಿರುವ ಸಮಸ್ಯೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೧೧೨ (೧೧೮೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫–೬ ವರ್ಷಗಳಿಂದ ಗ್ರಾಮ ಪಂಚಾಯಿತಿಗಳಲ್ಲಿ ನೇಮಕಾತಿ ಆಗದೆ ಇರುವುದರಿಂದ ಉತ್ತರ ಕನ್ನಡ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರ ಪಂಚಾಯಿತಿಗಳಲ್ಲಿ ತಮ್ಮ ಕೆಲಸಗಳನ್ನು ಸಮಯಕ್ಕೆ ಸರಿಯಾಗಿ ಮಾಡಿಕೊಳ್ಳಲು ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ;

(ಆ) ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಯೋಜನೆ ಸರ್ಕಾರಕ್ಕೆ ಇದೆಯೇ ; ಯಾವ ಕಾಲಮಿತಿಯೊಳಗೆ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಹಕ್ಕುಪತ್ರ ಪಡೆದಿರುವ ಅರಣ್ಯ ಅತಿಕ್ರಮಣದಾರರಿಗೆ ಇ–ಸ್ವತ್ತು ಮನೆಕರ ತುಂಬಲು ಅವಕಾಶ ಇಲ್ಲದಿರುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೧೧೧೩ (೧೧೮೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಅತಿಕ್ರಮಣ ಮಾಡಿ ಹಕ್ಕುಪತ್ರ ಪಡೆದಿರುವ ಕುಟುಂಬಗಳ ಮನೆಗಳಿಗೆ ಇ–ಸ್ವತ್ತುನಲ್ಲಿ ಮನೆಕರ ತುಂಬಲು ಅವಕಾಶ ಇಲ್ಲದೆ ಇರುವುದರಿಂದ ಗ್ರಾಮ ಪಂಚಾಯಿತಿಗಳಿಗೆ ನಷ್ಟ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮೈಸೂರು ಅರಮನೆ ಮಂಡಳಿಯ ಕುರಿತು

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೧೧೧೪ (೧೨೫೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಅರಮನೆ ಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ಸಂಖ್ಯೆ ಎಷ್ಟು ; ಈ ಉದ್ಯೋಗಿಗಳ ವೇತನಕ್ಕೆ ಭರಿಸುತ್ತಿರುವ ವಾರ್ಷಿಕ ವೆಚ್ಚ ಎಷ್ಟು ;

(ಆ) ಮೈಸೂರು ಅರಮನೆಯ ದೀಪಗಳ ಅಳವಡಿಕೆ ಮತ್ತು ನಿರ್ವಹಣೆಗೆ ಭರಿಸಿರುವ ವೆಚ್ಚ ಎಷ್ಟು ; (ಕಳೆದ ೩ ವರ್ಷಗಳ ಮಾಹಿತಿ ಒದಗಿಸುವುದು)

(ಇ) ದಸರಾ ಮಹೋತ್ಸವದ ಸಂದರ್ಭದಲ್ಲಿ ಅರಮನೆ ಮುಂಭಾಗ ಜರುಗುವ ಸಾಂಸ್ಕೃತಿಕ ಕಾರ್ಯಕ್ರಮದ ವೇದಿಕೆ ನಿರ್ಮಾಣ ಹಾಗೂ ಧ್ವನಿವರ್ಧಕ ಕಾರ್ಯಾದೇಶ ಯಾವ ಸಂಸ್ಥೆಗೆ ನೀಡಲಾಗಿದೆ ಹಾಗೂ ಎಷ್ಟು ವೆಚ್ಚ ಭರಿಸಲಾಗಿದೆ ; (ಕಳೆದ ೩ ವರ್ಷಗಳ ಮಾಹಿತಿಯನ್ನು ವಾರ್ಷಿಕವಾರು ಒದಗಿಸುವುದು)

(ಈ) ೨೦೨೪–೨೫ ಮತ್ತು ೨೦೨೫–೨೬ರ ಅವಧಿಯಲ್ಲಿ ಅರಮನೆ ವೀಕ್ಷಣೆಗೆಂದು ಬರುವ ಪ್ರವಾಸಿಗರ ಸಂಖ್ಯೆ ಎಷ್ಟು ಹಾಗೂ ಸಂಗ್ರಹವಾಗುವ ಪ್ರವೇಶ ಶುಲ್ಕದ ಮೊತ್ತ ಎಷ್ಟು ?

## ಪರಿಶಿಷ್ಟ ಜಾತಿಗಳ ಶಾಶ್ವತ ಆಯೋಗ ರಚಿಸುವ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೧೧೧೫ (೧೨೫೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳಿಗೆ ೬:೬:೫ ರ ಅನುಪಾತದಲ್ಲಿ ಒಳಮೀಸಲಾತಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದಕ್ಕೆ ಸಂಬಂಧಿಸಿದ ವಿಧೇಯಕದ ಪ್ರಸ್ತುತ ಹಂತವೇನು ;

(ಆ) ಒಳಮೀಸಲಾತಿ ಜಾರಿಯ ನಂತರ ಸಮುದಾಯಗಳ ಸ್ಥಿತಿಗತಿಗಳನ್ನು ಕಾಲಕಾಲಕ್ಕೆ ಪರಿಶೀಲಿಸಲು “ಪರಿಶಿಷ್ಟ ಜಾತಿಗಳ ಶಾಶ್ವತ

ಆಯೋಗ" ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಈ ಆಯೋಗವನ್ನು ಎಷ್ಟು ಕಾಲಮಿತಿಯೊಳಗೆ ರಚಿಸಲಾಗುವುದು ;

(ಇ) ಈ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿಗೆ ನಿಗದಿಪಡಿಸಲಾದ ಮಾನದಂಡಗಳೇನು ; ಆಯೋಗದಲ್ಲಿ ಪರಿಶಿಷ್ಟ ಜಾತಿಯ ವಿವಿಧ ಒಳಪಂಗಡಗಳಿಗೆ (ಎಡಗೈ, ಬಲಗೈ ಹಾಗೂ ಸ್ಪೃಶ್ಯ ಸಮುದಾಯಗಳು) ಸಮಾನ ಪ್ರಾತಿನಿಧ್ಯ ನೀಡಲಾಗುವುದೇ ;

(ಈ) ಈ ಆಯೋಗಕ್ಕೆ ಇರುವ ಅಧಿಕಾರಗಳೇನು ಮತ್ತು ಇದು ಸಲ್ಲಿಸುವ ವರದಿಗಳು ಸರ್ಕಾರದ ಮೇಲೆ ಕಡ್ಡಾಯವಾಗಿ ಜಾರಿಯಾಗುವಂತೆ ಕಾನೂನು ಚೌಕಟ್ಟು ರೂಪಿಸಲಾಗಿದೆಯೇ ?

## ಪತ್ರಾಗಾರ ಇಲಾಖೆಯ ದಾಖಲೆಗಳ ಸಂರಕ್ಷಣೆ ಮತ್ತು ಗಣಿಕೀಕರಣ ಕುರಿತು

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೧೧೧೬ (೧೨೫೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪತ್ರಾಗಾರ ಇಲಾಖೆಯು ಆಧುನಿಕ ಕರ್ನಾಟಕದ ಇತಿಹಾಸ ರಚನೆಗೆ ಆಧಾರವಾಗಿರುವ ಜಾರಿತ್ರಿಕ ದಾಖಲೆಗಳನ್ನು ಸಂರಕ್ಷಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪತ್ರಾಗಾರದಲ್ಲಿರುವ ದಾಖಲೆಗಳನ್ನು ಸಂರಕ್ಷಿಸಿ, ಅವುಗಳನ್ನು ಮುಂದಿನ ಪೀಳಿಗೆಗೆ ಕಾಯ್ದಿರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಲ್ಲಿ ಇಲಾಖೆಯ ದಾಖಲೆಗಳ ಸಂರಕ್ಷಣೆ ಕಾರ್ಯಕ್ರಮಗಳಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು ;

(ಈ) ಪತ್ರಾಗಾರ ಇಲಾಖೆಯ ದಾಖಲೆಗಳ ಸಂರಕ್ಷಣೆ, ಗಣಕೀಕರಣ ಮತ್ತು ಸೂಕ್ಷ್ಮಚಿತ್ರೀಕರಣ ಕಾರ್ಯಗಳಿಗೆ ಸೂಕ್ತ ಅನುದಾನ ಒದಗಿಸಿ ದಾಖಲೆಗಳ ಪರಂಪರೆ ಸಂರಕ್ಷಿಸಲು ಸರ್ಕಾರ ಮುಂದಾಗುವುದೇ ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ನಿಗಮಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೧೧೧೭ (೧೨೫೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿ ಎಷ್ಟು ಅಭಿವೃದ್ಧಿ ನಿಗಮಗಳು ಕಾರ್ಯನಿರ್ವಹಿಸುತ್ತಿವೆ ; ಹೊಸದಾಗಿ ಯಾವುದಾದರೂ ಸಮುದಾಯಗಳಿಗೆ ಪ್ರತ್ಯೇಕ ನಿಗಮಗಳನ್ನು ಸ್ಥಾಪಿಸುವ ಬೇಡಿಕೆ ಅಥವಾ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವು ಯಾವಾಗ ಸ್ಥಾಪನೆಯಾಯಿತು ; ಪ್ರಸ್ತುತ ಈ ನಿಗಮದ ವ್ಯಾಪ್ತಿಗೆ ಒಳಪಡುವ ಹಿಂದುಳಿದ ಜಾತಿಗಳು ಯಾವುವು ;

(ಇ) ಸದರಿ ನಿಗಮವು ಸ್ಥಾಪನೆಯಾದಗಿನಿಂದ ವಿವಿಧ ಜಾತಿವಾರು ನಿಗಮಗಳು ಪ್ರತ್ಯೇಕಗೊಳ್ಳುವವರೆಗೂ ಯಾವ ಜಾತಿಗಳ ಅಭಿವೃದ್ಧಿಗೆ ಎಷ್ಟು ಅನುದಾನ ಬಳಸಲಾಗಿತ್ತು ; ಹೊಸ ನಿಗಮಗಳು ರಚನೆಯಾದ ನಂತರ ಆಯಾ ಜಾತಿಗಳಿಗೆ ಹಂಚಿಕೆಯಾದ ಅನುದಾನದ ಮೊತ್ತವೆಷ್ಟು ?

# ರಾಜ್ಯದಲ್ಲಿನ ತೃತೀಯ ಲಿಂಗಿಗಳ ಕಲ್ಯಾಣ, ಭಿಕ್ಷಾಟನೆ ತಡೆ ಮತ್ತು ನಿರಾಶ್ರಿತ ಕೇಂದ್ರಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೧೧೧೮ (೧೨೫೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಗುರುತಿಸಲಾಗಿರುವ ತೃತೀಯ ಲಿಂಗಿಗಳ ಒಟ್ಟು ಸಂಖ್ಯೆ ಎಷ್ಟು ; ಅವರಲ್ಲಿ ಎಷ್ಟು ಜನರಿಗೆ 'ಮೈತ್ರಿ' ಮಾಸಾಶನ ಯೋಜನೆ ತಲುಪುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ತೃತೀಯ ಲಿಂಗಿಗಳು ಘನತೆಯಿಂದ ಬದುಕಲು ಮತ್ತು ಅವರು ಭಿಕ್ಷಾಟನೆಯಲ್ಲಿ ತೊಡಗುವುದನ್ನು ತಪ್ಪಿಸಲು ಸರ್ಕಾರ ಹಮ್ಮಿಕೊಂಡಿರುವ ಕೌಶಲ್ಯಾಭಿವೃದ್ಧಿ ಮತ್ತು ಸ್ವಯಂ ಉದ್ಯೋಗ ಯೋಜನೆಗಳು ಯಾವುವು ;

(ಇ) ರಾಜ್ಯದ ವಿವಿಧ ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ (Beggar Relief Centers) ಇರುವ ಭಿಕ್ಷುಕರ ಒಟ್ಟು ಸಂಖ್ಯೆ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಸ್ಥಳೀಯ ಸಂಸ್ಥೆಗಳಿಂದ (ನಗರಪಾಲಿಕೆ/ಪುರಸಭೆ) ಸಂಗ್ರಹವಾದ 'ಭಿಕ್ಷುಕರ ಉಪಕರ' (Beggar Cess) ಮೊತ್ತ ಎಷ್ಟು ;

(ಈ) ಸಂಗ್ರಹವಾದ ಭಿಕ್ಷುಕರ ಉಪಕರವನ್ನು ಭಿಕ್ಷುಕರ ಪುನರ್ವಸತಿಗೆ ಮತ್ತು ತೃತೀಯ ಲಿಂಗಿಗಳ ಅಭಿವೃದ್ಧಿಗೆ ಯಾವ ರೀತಿ ಬಳಸಲಾಗುತ್ತಿದೆ; ಈ ನಿಧಿಯು ಸಮರ್ಪಕವಾಗಿ ಬಳಕೆಯಾಗದಿರಲು ಕಾರಣಗಳೇನು ?

## ಪ್ರವರ್ಗ–೧ರ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿ ಮಾಡದಿರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೧೯ (೧೨೪೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ ನೇ ಸಾಲಿನಲ್ಲಿ ಅತ್ಯಂತ ಹಿಂದುಳಿದ ಪ್ರವರ್ಗ–೧ ರ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿ ಮತ್ತು ವೇತನಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಸರ್ಕಾರವು ವಿವಿಧ ಶಾಲಾ–ಕಾಲೇಜುಗಳಿಗೆ ನಿಗದಿಪಡಿಸಿದ ಶುಲ್ಕ ಮರು ಪಾವತಿ ಮಾಡಲು ಕಡಿಮೆ ಹಣವನ್ನು ನಿಗದಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪ್ರವರ್ಗ–೧ ರ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ಮರುಪಾವತಿ ಮಾಡದಿದ್ದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗುವುದಿಲ್ಲವೇ ; ಇದರಿಂದ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುವುದಿಲ್ಲವೇ ;

(ಈ) ಸರ್ಕಾರದ ಆರ್ಥ್ಯತಾ ವಲಯದ ಶಿಕ್ಷಣದ ಅಡಿಯಲ್ಲಿ ಈ ರೀತಿಯಲ್ಲಿ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ, ಈ ಪ್ರವರ್ಗ–೧ರ ವಿದ್ಯಾರ್ಥಿಗಳು ಶಿಕ್ಷಣವನ್ನು ಮಧ್ಯದಲ್ಲಿಯೇ ಮೊಟಕುಗೊಳಿಸಿ, ನಿರುದ್ಯೋಗಿಗಳಾಗುವುದಿಲ್ಲವೇ ; ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಅಲೆಮಾರಿ/ಅರೆ ಅಲೆಮಾರಿ ಜನಾಂಗಗಳ ಅಭಿವೃದ್ಧಿ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೨೦ (೧೨೪೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಅಭಿವೃದ್ಧಿ ೨೦೨೫–೨೬ ನೇ ಸಾಲಿನ ಆಯವ್ಯಯದಲ್ಲಿ ನಿಗಧಿ ಪಡಿಸಿದ ಅನುದಾನ ಎಷ್ಟು ; ಬಿಡುಗಡೆಯಾದ ಹಣವೆಷ್ಟು; ಪೂರ್ಣ ಹಣವನ್ನು ಬಿಡುಗಡೆ ಮಾಡಲಾಗಿದೆಯೇ ; ಮಾಡದೇ ಇದ್ದಲ್ಲಿ, ಕಾರಣವೇನು ; ಮಾಹಿತಿ ಒದಗಿಸುವುದು ;

(ಆ) ನಿಗದಿತ ಉದ್ದೇಶಕ್ಕೆ ಬಿಡುಗಡೆಯಾದ ಹಣವನ್ನು ಬೇರೆ–ಬೇರೆ ಯೋಜನೆಗಳಿಗೆ ವಿನಿಯೋಗಿಸಲು ಅವಕಾಶವಿದೆಯೇ ; ವಿನಿಯೋಗಿಸಿದ್ದಲ್ಲಿ, ಯಾವ ಯೋಜನೆಗಳಿಗೆ ವಿನಿಯೋಗಿಸಲಾಗಿದೆ ; ವಿವರವಾದ ಮಾಹಿತಿ ನೀಡುವುದು ;

(ಇ) ಅನ್ಯ ಉದ್ದೇಶಕ್ಕೆ ಬಳಸಿದರೆ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗೆ ಅನ್ಯಾಯವಾಗುವುದಿಲ್ಲವೇ ; ಈ ಅನ್ಯಾಯವನ್ನು ಸರ್ಕಾರವು ಹೇಗೆ ಸರಿಪಡಿಸಲು ಕ್ರಮವಹಿಸುವುದು ?

## ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ನೋಂದಾಯಿಸಿಕೊಂಡಿರುವ ಸಂಘ ಸಂಸ್ಥೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೨೧ (೧೨೪೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ನೋಂದಾಯಿಸಿಕೊಂಡಿರುವ ಸ್ತ್ರೀ ಶಕ್ತಿ ಸಂಘಗಳು/ಸ್ವಸಹಾಯ ಸಂಘಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ರೀತಿಯಾಗಿ ನೋಂದಾಯಿಸಿಕೊಂಡಿರುವ ಸಂಘಗಳಿಗೆ ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು ; ಈ

ಯೋಜನೆಗಳಿಂದ ಇದುವರೆಗೂ ಎಷ್ಟು ಫಲಾನುಭವಿಗಳು ಪ್ರಯೋಜನ ಪಡೆದಿರುತ್ತಾರೆ ; (ಶಕ್ತಿ ಯೋಜನೆ ಹೊರತುಪಡಿಸಿ)

(ಇ) ಮಹಿಳೆಯರಿಗೆ ಮತ್ತು ಮಕ್ಕಳ ಅಭಿವೃದ್ಧಿಗೆ ಸರ್ಕಾರವು ರೂಪಿಸಿರುವ ಹೊಸ ಯೋಜನೆಗಳು ಯಾವುವು ; ಇವುಗಳಿಂದ ಉಂಟಾಗುವ ಪ್ರಯೋಜನಗಳೇನು ;

(ಈ) ಇತ್ತೀಚಿನ ದಿನಗಳಲ್ಲಿ ಮಹಿಳೆಯರ ಮೇಲೆ ಮತ್ತು ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವುಗಳನ್ನು ತಡೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳ ವ್ಯಾಪ್ತಿಗಳ ಅನಧಿಕೃತ ಆಸ್ತಿಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೨೨ (೧೨೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಪ್ರದೇಶದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಅನಧಿಕೃತ ಆಸ್ತಿಗಳಿಗೆ ಇ–ಆಸ್ತಿ/ಇ–ಖಾತೆ ಮಾಡುವ ಬಗ್ಗೆ ಸರ್ಕಾರದ ಹಂತದಲ್ಲಿ ಚರ್ಚೆಯಾಗಿದೆಯೇ ; ಆಗಿದ್ದಲ್ಲಿ, ಮಾಹಿತಿ ನೀಡುವುದು ;

(ಆ) ಇದುವರೆಗೂ ಅನಧಿಕೃತ ಆಸ್ತಿಗಳಲ್ಲಿ ಎಷ್ಟು ಆಸ್ತಿಗಳಿಗೆ ಇ–ಖಾತೆ ನೀಡಲಾಗಿದೆ ; ಇದರಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ಇ–ಖಾತಾ ನೀಡಲು ಬಂದಿರುವ ಒಟ್ಟು ಅನಧಿಕೃತ ಆಸ್ತಿಗಳು ಎಷ್ಟು ; ಎಷ್ಟು ಅರ್ಜಿಗಳು ಬಂದಿರುತ್ತವೆ ಮತ್ತು ಇ–ಖಾತಾ ವಿತರಿಸಲು ಎಷ್ಟು ಅವಧಿಯನ್ನು ಸರ್ಕಾರವು ನಿಗಧಿಪಡಿಸಿದೆ ;

(ಈ) ಇ–ಖಾತಾ ನೀಡದೇ ಇರುವುದರಿಂದ ಸಾರ್ವಜನಿಕರಿಗೆ ಆಸ್ತಿಗಳ ವ್ಯವಹಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹೇಗೆ ಪರಿಹರಿಸಲಾಗುವುದು ಹಾಗೂ ಕಾರಣಗಳೇನು ; ವಿವರವಾದ ಮಾಹಿತಿ ನೀಡುವುದು ?

## ವಿವಿಧ ವಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಸಂಘಟಿತ ವಲಯಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೨೩ (೧೨೬೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿವಿಧ ವಲಯಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು ; (ವಿವಿಧ ವಲಯವಾರು ಮಾಹಿತಿ ನೀಡುವುದು)

(ಆ) ನೀರು ಮತ್ತು ವಿದ್ಯುತ್ ಸಂಪರ್ಕದ ಕೊರತೆ ಹಾಗೂ ಅನಧಿಕೃತ ಆಸ್ತಿಗಳಿಗೆ ಇ–ಖಾತಾ ನೀಡುವ ವಿಳಂಬದಿಂದ ಅಸಂಘಟಿತ ಕಾರ್ಮಿರಿಗೆ ಉದ್ಯೋಗ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕೊರತೆಗಳನ್ನು ನಿವಾರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; ಈ ಕಾರ್ಮಿಕರಿಗೆ ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು ;

(ಈ) ಬೆಂಗಳೂರು, ಮೈಸೂರು, ಮಂಗಳೂರು, ಹುಬ್ಬಳ್ಳಿ–ಧಾರವಾಡ ಇತ್ಯಾದಿ ಪ್ರದೇಶಗಳಲ್ಲಿ ಗಿಗ್ ಕಾರ್ಮಿಕರ ಪರಿಸ್ಥಿತಿ ಶೋಚನೀಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಗಿಗ್ ಕಾರ್ಮಿಕರಿಗೆ (GIG) ಸರ್ಕಾರವು ರೂಪಿಸಿರುವ ಮತ್ತು ರೂಪಿಸಲು ಉದ್ದೇಶಿಸಿರುವ ಯೋಜನೆಗಳು ಯಾವುವು ?

# ಕಲ್ಯಾಣ ಕರ್ನಾಟಕದಲ್ಲಿ ಜಲ ಜೀವನ್ ಮಿಷನ್ ಯೋಜನೆ ಕಳಪೆ ಮತ್ತು ಅಪೂರ್ಣ ಕಾಮಗಾರಿಗಳ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೧೨೪ (೧೨೮೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಜಲ ಜೀವನ್ ಮಿಷನ್ ಯೋಜನೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಂಪೂರ್ಣ ವಿಫಲವಾಗಿರುವುದು ಸರ್ಕಾರದ ಗಮನಕ್ಕಿದೆಯೇ ;

(ಆ) ಜಲ ಜೀವನ್ ಮಿಷನ್ ಕಾಮಗಾರಿಗಳನ್ನು ತರಾತುರಿಯಲ್ಲಿ ಮುಗಿಸಿ, ಇಲ್ಲವೆ ಅರ್ಧದಲ್ಲಿಯೇ ನಿಲ್ಲಿಸಿ (ಅಪೂರ್ಣ ಕಾಮಗಾರಿ) ಗುತ್ತಿಗೆದಾರರು ಬಿಲ್ಲು ಎತ್ತಿರುವುದಕ್ಕೆ ತನಿಖೆ ಮಾಡಲಾಗಿದೆಯೇ ;

(ಇ) ಹಳ್ಳಿಗಳಲ್ಲಿ ನಿರ್ಮಿಸಿದ ಕಾಮಗಾರಿಗಳ ಕಾರಣದಿಂದ ಸಿಮೆಂಟ್ ರಸ್ತೆಗಳನ್ನು ಮಧ್ಯದಲ್ಲಿ ಸುಮಾರು ೪ ಇಂಚು/ಪ್ರತಿ ೧೦–೧೫ ಅಡಿ ಅಂತರದಲ್ಲಿ ಕೊರೆದು ಹಾಗೆಯೇ ಬಿಟ್ಟಿರುವುದು ಹಾಗೂ ಕೆಲವು ಕಡೆ ರಸ್ತೆ ಉದ್ದಕ್ಕೆ ಮಧ್ಯದಲ್ಲಿ ೪–೬ ಇಂಚು ಕೊರೆದಿರುವುದರಿಂದ ಜಾನುವಾರುಗಳು, ಜನರು ಓಡಾಡಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕಿದೆಯೇ ;

(ಈ) ನೀರಿನ ಕೊರತೆಯಿಂದ ಬಳಲುತ್ತಿರುವ ಕಲ್ಯಾಣ ಕರ್ನಾಟಕ ಪ್ರದೇಶದ ಜನರಿಗೆ ಹಳ್ಳಿಗಳಲ್ಲಿನ ಮನೆಗಳಿಗೆ ನೀರು ಸಿಗದಿರುವುದು ಹಾಗೂ ಜನರು ನೀರಿಗಾಗಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕಿದೆಯೇ ;

(ಉ) ಯೋಜನೆಯನ್ನು ಕಟ್ಟುನಿಟ್ಟಿನಿಂದ ಜಾರಿಗೆ ತರಲು ಗುತ್ತಿಗೆದಾರರು ಕೆಲಸ ಪೂರ್ಣಗೊಳಿಸಿದ ನಂತರ ಬಿಲ್ ಪಾವತಿಸಬೇಕು,

ರಸ್ತೆಗಳನ್ನು ಸರಿಯಾಗಿ ರಿಪೇರಿ ಮಾಡಬೇಕು ಹಾಗೂ ಇದಕ್ಕೆ ತಕ್ಷಣವೇ ಸೂಕ್ತ ತನಿಖೆಯಾಗಬೇಕು ; ಈ ನಿಟ್ಟಿನಲ್ಲಿ ಸರ್ಕಾರವು ನ್ಯಾಯಯುತವಾಗಿ ಕ್ರಮಕೈಗೊಳ್ಳಬಹುದೆ ?

## ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಅಧೀನದಲ್ಲಿ ನಡೆಯುತ್ತಿರುವ ಶಾಲೆಗಳ ಶಿಕ್ಷಕರ ವೇತನ ತಾರತಮ್ಯದ ಕುರಿತು

**ಡಾ|| ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೧೨೫ (೧೨೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಸರ್ಕಾರಿ ಅಂಧ, ಶ್ರವಣ ನ್ಯೂನ್ಯತೆ ಮತ್ತು ಬುದ್ಧಿಮಾಂದ್ಯ ಮಕ್ಕಳ ಅನುಪಾಲನ ಗೃಹ ವಿಶೇಷ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಥಮಿಕ ಶಾಲಾ ಸಹಾಯಕ ಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರು ಸಂಗೀತ ಶಿಕ್ಷಕರು ದರ್ಜೆ–೩ ಮತ್ತು ಪ್ರೌಢ ಶಾಲೆಯ ಸಂಗೀತ ಶಿಕ್ಷಕರು ದರ್ಜೆ–೨ರ ಹುದ್ದೆಯ ಮೂಲವೇತನ ಶ್ರೇಣಿ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಆ) ೭ನೇ ವೇತನ ಆಯೋಗದ ಅನ್ವಯ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಸರ್ಕಾರಿ ಮತ್ತು ೧೯೮೨ರ ಅನುದಾನಿತ ವಿಶೇಷ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಎಲ್ಲಾ ವೃಂದದ ಶಿಕ್ಷಕರಿಗೆ ನಿಗದಿಗೊಳಿಸಿದ ಮೂಲವೇತನ ಶ್ರೇಣಿ ಯಾವುದು ; (ಮಾಹಿತಿ ನೀಡುವುದು)

(ಇ) ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಸರ್ಕಾರಿ ಕಿವುಡ ಮತ್ತು ಮೂಕ ಮಕ್ಕಳ ವಸತಿಯುತ ವಿಶೇಷ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಮಂಜೂರಾತಿ ಹುದ್ದೆ ಇಲ್ಲದಿರುವುದಕ್ಕೆ ಕಾರಣವೇನು ;

(ಈ) ೧೯೮೨ರ ಅನುದಾನಿತ ಸಂಹಿತೆಯಡಿ ನಡೆಯುತ್ತಿರುವ ಅನುದಾನಿತ ಅಂಧ ಹಾಗೂ ಕಿವುಡ ಮತ್ತು ಮೂಕ ಮಕ್ಕಳ ಪ್ರಾಥಮಿಕ ವಿಶೇಷ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವೃಂದದ ಶಿಕ್ಷಕರ ಪ್ರಸ್ತುತ ಮೂಲ ವೇತನ ಶ್ರೇಣಿ ಏನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಇಲಾಖೆಯಲ್ಲಿನ ಕೆಲವು ವೃಂದದ ನೌಕರರಿಗೆ ಮುಂಬಡ್ತಿ ನೀಡುವಂತೆ ಮಾನ್ಯ ಸರ್ಕಾರದ ಕಾರ್ಯದರ್ಶಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಬೆಂಗಳೂರು ರವರು ೦೫-೦೭-೨೦೨೪ ರಲ್ಲಿ ಮುಂಬಡ್ತಿ ನೀಡಬಹುದೆಂದು ಸರ್ಕಾರದ ಆದೇಶವಾಗಿದ್ದರೂ ವಿಳಂಬ ಮಾಡುತ್ತಿರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಊ) ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ೨೦೦೪ ರಿಂದ ಇಲ್ಲಿಯವರೆಗೆ ಸಮಗ್ರವಾಗಿ ಪರಿಷ್ಕರಣೆಗೊಳ್ಳದಿರುವುದಕ್ಕೆ ಕಾರಣವೇನು ? (ಮಾಹಿತಿ ನೀಡುವುದು)

## ಸಾಮಾಜಿಕ ಭದ್ರತಾ ಯೋಜನೆಗಳ ಅನುದಾನ ಬಳಕೆ ಮತ್ತು ಮಾಸಾಶನ ಹೆಚ್ಚಳದ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೬ (೧೨೦೦) ಮಾನ್ಯ ಮಹಿಳಾ ಮತ್ತು ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನ ಆಯವ್ಯಯದಲ್ಲಿ ವೃದ್ಧಾಪ್ಯ ವೇತನ. ಸಂಧ್ಯಾ ಸುರಕ್ಷಾ ಸೇರಿದಂತೆ ೧೨ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಿಗಾಗಿ ಮೀಸಲಿಟ್ಟಿದ್ದ ಒಟ್ಟು ಅನುದಾನ ಎಷ್ಟು ; ಈ ಪೈಕಿ ಇಲ್ಲಿಯವರೆಗೆ ವೆಚ್ಚವಾಗಿರುವ ಮೊತ್ತವೆಷ್ಟು ಮತ್ತು ಬಳಕೆಯಾಗದೆ ಬಾಕಿ ಉಳಿದಿರುವ ರೂ. ೧.೮೯೮.೯೨ ಕೋಟಿ ಅನುದಾನಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ೨೦೨೬–೨೭ನೇ ಸಾಲಿನ ಆಯುವ್ಯಯುದಲ್ಲಿ ಈ ೧೨ ಯೋಜನೆಗಳಿಗಾಗಿ ಒಟ್ಟು ರೂ. ೧೨,೧೫೭.೩೧ ಕೋಟಿ ಬೇಡಿಕೆಯನ್ನು ಇಟ್ಟಿರುವುದು ನಿಜವೇ ; ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಅನುದಾನದ ಹಂಚಿಕೆಯಲ್ಲಿ ಮಾಡಲಾದ ಪ್ರಮುಖ ಬದಲಾವಣೆಗಳೇನು ;

(ಇ) ರಾಜ್ಯದಲ್ಲಿ ೨೦೨೪–೨೫ನೇ ಸಾಲಿನಿಂದಲೇ ಮಾಸಾಶನ ಹೆಚ್ಚಳ ಮಾಡುವುದಾಗಿ ಮಾನ್ಯ ಮುಖ್ಯಮಂತ್ರಿಗಳು ನೀಡಿದ್ದ ಭರವಸೆ ಈಡೇರದಿರಲು ಕಾರಣವೇನು ;

(ಈ) ಸರ್ಕಾರವು ಪ್ರಸ್ತುತ ಮಾಸಾಶನ ಮೊತ್ತವನ್ನು ಹೆಚ್ಚಿಸುವ ಯಾವುದೇ ಪ್ರಸ್ತಾವನೆ ತನ್ನ ಮುಂದೆ ಇಲ್ಲ ಎಂದು ಹೇಳುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಆರ್ಥಿಕ ಸಂಕಷ್ಟದಲ್ಲಿರುವ ಫಲಾನುಭವಿಗಳಿಗೆ ನೆರವಾಗಲು ಸರ್ಕಾರವು ಕೈಗೊಳ್ಳಲಿರುವ ಪರ್ಯಾಯ ಕ್ರಮಗಳೇನು ?

## ರಾಜ್ಯದಲ್ಲಿ ಸಿರಿಧಾನ್ಯ ಉತ್ಪನ್ನಗಳಿಗೆ ಉತ್ತೇಜನ ನೀಡುವ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೭ (೧೧೯೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸಿರಿಧಾನ್ಯ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಹಮ್ಮಿಕೊಂಡಿರುವ ವಿಶೇಷ ಯೋಜನೆಗಳೇನು ;

(ಆ) ಅಂತರಾಷ್ಟ್ರೀಯ ಕೃಷಿ ಮೇಳದಲ್ಲಿ ಕೇಂದ್ರ ಸಚಿವರು ಭರವಸೆ ನೀಡಿದಂತೆ ರಾಜ್ಯದ ಸಿರಿಧಾನ್ಯ ಬೆಳೆಗಾರರಿಗೆ ರಫ್ತು ಉತ್ತೇಜನ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸಿರಿಧಾನ್ಯ ಸಂಸ್ಕರಣಾ ಘಟಕಗಳನ್ನು (Processing units) ಗ್ರಾಮೀಣ ಮಟ್ಟದಲ್ಲಿ ಸ್ಥಾಪಿಸುವ ಸಣ್ಣ ಮತ್ತು ಮಧ್ಯಮ ವರ್ಗದ ಉದ್ದಿಮೆದಾರರಿಗೆ ನೀಡಲಾಗುತ್ತಿರುವ ರಿಯಾಯಿತಿ ಮತ್ತು ಪ್ರೋತ್ಸಾಹಧನ ಎಷ್ಟು ;

(ಈ) ಸಿರಿಧಾನ್ಯಗಳನ್ನು ಬೆಳೆಯುವ ರೈತರಿಗೆ ಕನಿಷ್ಠ ಬೆಂಬಲ ಬೆಲೆ (MSP) ನಿಗದಿಪಡಿಸುವಲ್ಲಿ ಮತ್ತು ಸಕಾಲಕ್ಕೆ ಖರೀದಿ ಕೇಂದ್ರಗಳನ್ನು ತೆರೆಯುವಲ್ಲಿ ಸರ್ಕಾರದ ನಿಲುವೇನು ?

## ಮೃತರ ಹೆಸರಿಗೆ ‘ಗೃಹಲಕ್ಷ್ಮಿ’ ಹಣ ಪಾವತಿ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೮ (೧೨೦೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ‘ಗೃಹಲಕ್ಷ್ಮಿ’ ಯೋಜನೆಯಡಿ ನೋಂದಣಿಯಾಗಿರುವ ಫಲಾನುಭವಿಗಳ ಪೈಕಿ ಮೃತ ಹೆಸರಿನಲ್ಲೂ ಹಣ ಜಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಜ್ಯಾದ್ಯಂತ ಅಂದಾಜು ಎಷ್ಟು ಪ್ರಕರಣಗಳು ಪತ್ತೆಯಾಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪತ್ರಿಕಾ ವರದಿಗಳ ಪ್ರಕಾರ ರಾಜ್ಯದಲ್ಲಿ ಸುಮಾರು ೨ ಲಕ್ಷಕ್ಕೂ ಹೆಚ್ಚು ಮೃತ ಫಲಾನುಭವಿಗಳ ಹೆಸರಿನಲ್ಲಿ ಹಣ

ದುರ್ಬಳಕೆಯಾಗುತ್ತಿರುವುದು ನಿಜವೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಅಥವಾ ಆಡಿಟ್ ವರದಿಯ ಹಂತಗಳೇನು ;

(ಇ) ಮೃತ ಫಲಾನುಭವಿಗಳ ಖಾತೆಗೆ ಜಮೆಯಾದ ಹಣವನ್ನು ಮರುಪಡೆಯಲು (Rcovery) ಸರ್ಕಾರ ರೂಪಿಸಿರುವ ಕ್ರಮಗಳೇನು ; ಇಂತಹ ಅಕ್ರಮ ಹಣ ವಿತ್‌ಡ್ರಾ ಮಾಡಿದ ಕುಟುಂಬಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಮುಂದಿನ ದಿನಗಳಲ್ಲಿ ಇಂತಹ ತಪ್ಪುಗಳು ಮರುಕಳಿಸದಂತೆ ಮತ್ತು ಅರ್ಹ ಫಲಾನುಭವಿಗಳಿಗೆ ಮಾತ್ರ ತಲುಪುವಂತೆ ಮಾಡಲು ಇ–ಆಡಳಿತ ಅಥವಾ ಮರಣ ನೋಂದಣಿ ದತ್ತಾಂಶದ (Birth and Death Portal) ಜೊತೆಗೆ ತಂತ್ರಾಂಶವನ್ನು ಲಿಂಕ್ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ?

## ರೈತರ ಆತ್ಮಹತ್ಯೆಯನ್ನು ತಡೆಗಟ್ಟುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೧೨೯ (೭೩೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಿಂದ ರಾಜ್ಯದಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ಹಾಗೂ ಆತ್ಮಹತ್ಯೆಗೊಂಡಿರುವ ರೈತರಿಗೆ ಪರಿಹಾರ ರೂಪದಲ್ಲಿ ಇದುವರೆಗೂ ಎಷ್ಟು ಹಣವನ್ನು ನೀಡಲಾಗಿದೆ ;

(ಇ) ಈ ರೀತಿ ರೈತರ ಆತ್ಮಹತ್ಯೆ ಪ್ರಕರಣಗಳು ಮರುಕಳಿಸದಂತೆ ನೋಡಿಕೊಳ್ಳುವ ಜವಾಬ್ದಾರಿ ಸರ್ಕಾರದ್ದಾಗಿರುವುದರಿಂದ ಈ ಸಾಲಿನ ಆಯವ್ಯಯದಲ್ಲಿ ಹೆಚ್ಚಿನ ಪರಿಹಾರವನ್ನು ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಮಕ್ಕಳು ತೀವ್ರ ಅಪೌಷ್ಠಿಕತೆಯಿಂದ ಬಳಲುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೧೩೦ (೧೧೭೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಮಕ್ಕಳು ತೀವ್ರ ಅಪೌಷ್ಠಿಕತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದುವರೆಗೂ ಎಷ್ಟು ಮಕ್ಕಳು ತೀವ್ರ ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರ ಅಪೌಷ್ಠಿಕತೆ ನಿವಾರಣೆಗೆ ಯೋಜನೆಗಳನ್ನು ರೂಪಿಸಲಾಗಿದೆಯೇ ; (ಯೋಜನೆಗಳ ವಿವರ ನೀಡುವುದು)

(ಇ) ತೀವ್ರ ಅಪೌಷ್ಠಿಕತೆ ನಿವಾರಣೆಗೆ ರಾಜ್ಯದಲ್ಲಿ ಸರ್ಕಾರವು ಮಕ್ಕಳ ಆರೋಗ್ಯ ತಪಾಸಣೆ ಹಾಗೂ ಅದಕ್ಕೆ ಬೇಕಾದ ಚಿಕಿತ್ಸೆಯನ್ನು ನೀಡಲಾಗುತ್ತಿದೆಯೇ ; ಇದುವರೆಗೂ ಎಷ್ಟು ಮಕ್ಕಳಿಗೆ ಚಿಕಿತ್ಸೆ ನೀಡಲಾಗಿದೆ ?

## ವಿಶೇಷ ಚೇತನ ಮಕ್ಕಳ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೧೩೧ (೧೧೮೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ವಿಶೇಷ ಚೇತನ ಮಕ್ಕಳ ಶಾಲೆಗಳ ಸಂಖ್ಯೆ ಎಷ್ಟು ; ಈ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಾಲೆಗಳಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಶಾಲೆಗಳಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಯಾವ ಕಾಲಮಿತಿಯೊಳಗೆ ಒದಗಿಸಲಾಗುವುದು ;

(ಇ) ಈ ಸಾಲಿನ ಆಯವ್ಯಯದಲ್ಲಿ ವಿಶೇಷ ಚೇತನ ಮಕ್ಕಳ ಶಾಲೆಗಳಿಗೆ ಪ್ರತ್ಯೇಕ ಅನುದಾನ ನೀಡುವುದರ ಬಗ್ಗೆ ಸರ್ಕಾರ ಚಿಂತಿಸಿದೆಯೇ ? (ಅನುದಾನದ ಮಾಹಿತಿ ಒದಗಿಸುವುದು)

## ಕ್ರೈಸ್ ವಸತಿ ಶಾಲೆಗಳ ನೌಕರರಿಗೆ ಆರೋಗ್ಯ ಸಂಜೀವಿನಿ ಯೋಜನೆ ಜಾರಿ ಮಾಡುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೧೩೨ (೧೨೭೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ರೈಸ್ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ/ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸರ್ಕಾರದಿಂದ ನೀಡಲಾಗುತ್ತಿದೆಯೇ ;

(ಆ) ಕ್ರೈಸ್ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರ ಆರೋಗ್ಯದ ಹಿತದೃಷ್ಟಿಯಿಂದ ಸರ್ಕಾರ ಈ ಯೋಜನೆಯನ್ನು ಎಂದಿನಿಂದ ಜಾರಿಗೆ ತರಲು ಉದ್ದೇಶಿಸಿದೆ ?

## ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ವಸತಿ ನಿಲಯಗಳ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೧೩೩ (೧೨೭೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಮೈಸೂರು, ಮಂಡ್ಯ, ಹಾಸನ ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ನಡೆಯುತ್ತಿರುವ ವಿವಿಧ ಎಲ್ಲಾ ವರ್ಗದ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಮೈಸೂರು, ಮಂಡ್ಯ, ಹಾಸನ ಹಾಗೂ ಚಾಮರಾನಗರ ಜಿಲ್ಲೆಗಳಲ್ಲಿ ಈ ಇಲಾಖೆಗಳಿಂದ ನಡೆಯುತ್ತಿರುವ ಎಲ್ಲಾ ವಸತಿ ನಿಲಯಗಳು ಸ್ವಂತ ಕಟ್ಟಡದಲ್ಲಿ ನಡೆಯುತ್ತಿವೆಯೇ ; ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ವಸತಿ ನಿಲಯುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಇ) ಈ ನಾಲ್ಕೂ ಜಿಲ್ಲೆಗಳಲ್ಲಿನ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದರಿಂದ, ಸರ್ಕಾರ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ವಿಶೇಷ ಅನುದಾನವನ್ನು ನೀಡಲು ಯಾವ ಕ್ರಮವನ್ನು ಕೈಗೊಂಡಿದೆ ?

## ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಇ–ತಂತ್ರಾಂಶದ ತೊಂದರೆಗಳ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೧೩೪ (೧೨೭೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಸರ್ಕಾರ ಜಾರಿಗೆ ತಂದಿರುವ ಇ–ಖಾತಾ ಆಂದೋಲನಕ್ಕೆ ಸಂಬಂಧಿಸಿದಂತೆ, ೨೦೨೫ ರಿಂದ ೨೦೨೬ನೇ ಸಾಲಿನವರೆಗೆ ಎಷ್ಟು ಇ–ಖಾತಾ ನೋಂದಣಿಯಾಗಿವೆ ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಗ್ರಾಮ ಪಂಚಾಯಿತಿಗಳಲ್ಲಿ ಇ–ಖಾತಾ ಹಾಗೂ ಇನ್ನಿತರ ಮೂಲಸೌಕರ್ಯಗಳನ್ನು ಸರ್ಕಾರದ ಇ–ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಲು ಸೂಚಿಸಿರುವುದರಿಂದ ಸರ್ವರ್‌ಗಳು ೦೨ಹಾವಾಗಲು ಸಮರ್ಪಕವಾಗಿ ಕೆಲಸ ನಿರ್ವಹಿಸದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಯಾವಾಗ ಸರಿಪಡಿಸಲಾಗುವುದು ? (ವಿವರ ನೀಡುವುದು)

## ಮೈಸೂರಿನಲ್ಲಿ ಹೊಸ ಗ್ರಾಮ ಗ್ರಂಥಾಲಯಗಳನ್ನು ಆರಂಭಿಸುವ ಕುರಿತು

**ಡಾ॥ ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೫ (೧೩೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ದಿನಾಂಕ : ३೧.೦೧.೨೦೨೫ ರಂದು ಸರ್ಕಾರದ ಆದೇಶ ಸಂಖ್ಯೆ: RDPR/9/GPA/2025 ರಲ್ಲಿ ಮೈಸೂರಿನಲ್ಲಿ ೨೪೪ ಹೊಸ ಗ್ರಾಮ ಗ್ರಂಥಾಲಯಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಈವರೆಗೆ ಎಷ್ಟು ಗ್ರಾಮ ಗ್ರಂಥಾಲಯಗಳನ್ನು ಸ್ಥಾಪಿಸಲಾಗಿದೆ ? (ವಿವರ ನೀಡುವುದು)

## ೨೦೨೫ನೇ ಸಾಲಿನ ಕರ್ನಾಟಕ ರತ್ನ ಪ್ರಶಸ್ತಿ ನೀಡುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧३೬ (೧೧೭೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫ನೇ ಸಾಲಿನ ಕರ್ನಾಟಕ ರತ್ನ ಪ್ರಶಸ್ತಿಯನ್ನು ನೀಡುವ ಬಗ್ಗೆ ಸರ್ಕಾರದಿಂದ ಯಾವ ತಿಂಗಳಲ್ಲಿ ಘೋಷಣೆಯನ್ನು ಮಾಡಲಾಗಿದೆ ;

(ಆ) ಸದರಿ ಪ್ರಶಸ್ತಿ ಘೋಷಣೆಯಾಗಿ ಆರು ತಿಂಗಳು ಕಳೆದರೂ ಪ್ರಶಸ್ತಿ ಪ್ರಧಾನ ಸಮಾರಂಭದ ದಿನಾಂಕ ಘೋಷಣೆ ಮಾಡುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಸದರಿ ಪ್ರಶಸ್ತಿಗೆ ದಿವಂಗತ ಡಾ॥ ವಿಷ್ಣುವರ್ಧನ್ ಮತ್ತು ಹಿರಿಯ ನಟಿ ಬಿ. ಸರೋಜಾದೇವಿ ಆಯ್ಕೆಯಾಗಿದ್ದು, ಇಲ್ಲಿವರೆಗೂ ಪ್ರಶಸ್ತಿಯನ್ನು ನೀಡದೆ ಅವರುಗಳಿಗೆ ಮಾಡಿರುವ ಅವಮಾನವಲ್ಲವೆ ಮತ್ತು ಇಲ್ಲಿಯವರೆಗೂ ಪ್ರಶಸ್ತಿ ನೀಡದಿರಲು ಕಾರಣವೇನು ; (ಮಾಹಿತಿ ನೀಡುವುದು)

(ಈ) ಪ್ರಶಸ್ತಿ ಪ್ರಧಾನ ಕಾರ್ಯಕ್ರಮದ ದಿನಾಂಕವನ್ನು ನಿಗದಿಪಡಿಸುವಂತೆ ಚಲನಚಿತ್ರ ವಾಣಿಜ್ಯ ಮಂಡಳಿ ಹಾಗೂ ಇತರೆ ಸೇವಾ ಸಮಿತಿಗಳು ಸಾರ್ವಜನಿಕರು ಮನವಿ ಸಲ್ಲಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ತೆಗೆದುಕೊಂಡ ಕ್ರಮಗಳೇನು ?

## ಕೃಷಿ ಇಲಾಖೆಯ ವಿವಿಧ ವೃಂದದ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೭ (೧೧೭೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ತಾಲ್ಲೂಕುಗಳಲ್ಲಿ ಕೃಷಿ ಅಧಿಕಾರಿ, ಸಹಾಯಕ ಕೃಷಿ ಅಧಿಕಾರಿ ಹಾಗೂ ಕೃಷಿ ಸಹಾಯಕರ ಹುದ್ದೆಗಳು ಖಾಲಿ ಇರುವುದರಿಂದ ರೈತರಿಗೆ ಸಮಯಕ್ಕೆ ಸರಿಯಾಗಿ ಕೃಷಿ ಸಲಹೆ ಹಾಗೂ ತಾಂತ್ರಿಕ ಸೇವೆಗಳು ಲಭ್ಯವಾಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು, ವೃಂದವಾರು ಖಾಲಿ ಹುದ್ದೆಗಳ ವಿವರ ನೀಡುವುದು)

(ಆ) ಖಾಲಿ ಇರುವ ಕೃಷಿ ಇಲಾಖೆಯ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಿರುವುದೇ ; ಇದ್ದಲ್ಲಿ, ನೇಮಕಾತಿ ಪೂರ್ಣಗೊಳಿಸುವ ಕಾಲಮಿತಿ ಎಷ್ಟು ; (ವಿವರ ನೀಡುವುದು)

(ಇ) ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ರೈತರಿಗೆ ತಕ್ಷಣ ಕೃಷಿ ಮಾರ್ಗದರ್ಶನ ನೀಡುವ ಉದ್ದೇಶದಿಂದ ಮೊಬೈಲ್ ಕೃಷಿ ಸಲಹಾ ತಂಡಗಳು ಅಥವಾ ಡಿಜಿಟಲ್ ಅಗ್ರಿ ಸಲಹಾ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಯೋಜನೆ ರೂಪಿಸಿರುವುದೇ ; (ವಿವರ ನೀಡುವುದು)

(ಈ) ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ರೈತ ಸಂಪರ್ಕ ಕೇಂದ್ರಗಳನ್ನು ಬಲಪಡಿಸಿ ಕೃಷಿ ಅಧಿಕಾರಿಗಳ ನಿಯಮಿತ ಗ್ರಾಮ ಭೇಟಿ ಕಡ್ಡಾಯಗೊಳಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗ್ರಾಮೀಣ ರಸ್ತೆಗಳ ದುರಸ್ತಿ ಹಾಗೂ ನಿರ್ಮಾಣ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೮ (೧೨೨೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗ್ರಾಮೀಣ ಪ್ರದೇಶದ ರಸ್ತೆಗಳನ್ನು ೨೦೨೩–೨೪, ೨೦೨೪–೨೦೨೫ ಮತ್ತು ೨೦೨೫–೨೬ನೇ ಸಾಲಿನಲ್ಲಿ (ಫೆಬ್ರವರಿ ೨೦೨೬ ಅಂತ್ಯದವರೆಗೆ) ಎಷ್ಟು ರಸ್ತೆಗಳ ನಿರ್ಮಾಣ ಮಾಡಲಾಗಿದೆ ; ಎಷ್ಟು ರಸ್ತೆಗಳ ದುರಸ್ತಿ ಮಾಡಲಾಗಿದೆ ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಸ್ತೆಗಳ ನಿರ್ಮಾಣ ಮತ್ತು ದುರಸ್ತಿಗೆ ಸಾಲಿನಲ್ಲಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ, ಎಷ್ಟು ಮೊತ್ತವನ್ನು ಬಿಡುಗಡೆಗೊಳಿಸಲಾಗಿದೆ ; ಎಷ್ಟು ಮೊತ್ತವನ್ನು ಖರ್ಚು

ಮಾಡಲಾಗಿದೆ ; ಪೂರ್ಣಗೊಂಡ ಕಾಮಗಾರಿಗಳ ಹಣ ಪಾವತಿಗೆ ಬಾಕಿ ಉಳಿಸಿಕೊಂಡಿರುವ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದ ಗ್ರಾಮೀಣ ಪ್ರದೇಶದಲ್ಲಿರುವ ಎಷ್ಟು ರಸ್ತೆಗಳು ದುರಸ್ತಿಗೆ ಬಾಕಿ ಇವೆ ; ಎಷ್ಟು ರಸ್ತೆಗಳು ಸಂಚರಿಸದ ಹಂತದಲ್ಲಿವೆ ; ಗ್ರಾಮಾಂತರ ಪ್ರದೇಶಗಳನ್ನು ಸಂಪರ್ಕಿಸುವ ರಸ್ತೆಗಳನ್ನು ನಿರ್ಮಾಣ ಮಾಡುವುದು ಯಾವ ಇಲಾಖೆಗಳಿಗೆ ಸಂಬಂಧಪಟ್ಟಿದೆ ; ನಿರ್ಮಾಣ ಮಾಡಿದ ರಸ್ತೆಗಳಲ್ಲಿ ಮಳೆ ಮತ್ತು ಇನ್ನಿತರ ಕಾರಣಗಳಿಂದ ಗುಂಡಿ/ತಗ್ಗುಗಳು ಬಿದ್ದಿದ್ದು ಅವುಗಳನ್ನು ಮುಚ್ಚುವುದು, ರಸ್ತೆಗಳನ್ನು ದುರಸ್ತಿ ಮಾಡುವುದು ಯಾರ ಜವಾಬ್ದಾರಿಯಾಗಿದೆ ; (ಗ್ರಾಮಾಂತರ ರಸ್ತೆಗಳಿಗೆ ಸಂಬಂಧಿಸಿದ ಸಂಪೂರ್ಣ ಮಾಹಿತಿ ನೀಡುವುದು)

(ಈ) ಗ್ರಾಮೀಣ ಭಾಗದ ರಸ್ತೆಗಳಲ್ಲಿ ಭಾರಿ ವಾಹನಗಳ ಸರಕು ವಾಹನಗಳನ್ನು ಚಲಾಯಿಸಿ ರಸ್ತೆಗಳನ್ನು ಹಾಳು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ;

(ಉ) ಗ್ರಾಮೀಣ ಭಾಗದ ರಸ್ತೆಗಳು ಹಾಳಾಗಿದ್ದು ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲು ಯಾರಿಗೆ ಹೊಣೆಗಾರಿಕೆಯನ್ನು ನೀಡಲಾಗಿದೆ ; ಇದನ್ನು ತಡೆಗಟ್ಟಲು ಸರ್ಕಾರದ ಕ್ರಮವೇನು ?

## ಕಾರ್ಮಿಕ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೯ (೧೨೨೮) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ ನೇ ಸಾಲಿನಲ್ಲಿ ಕಾರ್ಮಿಕ ಇಲಾಖೆಯಲ್ಲಿ ಜಾರಿಯಲ್ಲಿರುವ

ಯೋಜನೆಗಳು ಯಾವುವು ; (ಕೇಂದ್ರ ಮತ್ತು ರಾಜ್ಯ ಪುರಸ್ಕೃತ ಯೋಜನೆಗಳ ಕುರಿತು ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಆರ್ಥಿಕ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ವಿವಿಧ ಯೋಜನೆಗಳಡಿ ಹಾಗೂ ಕಾರ್ಮಿಕ ಇಲಾಖೆಗೆ ಕೇಂದ್ರ ಸರ್ಕಾರ ಮೀಸಲಿಟ್ಟಿರುವ ಹಾಗೂ ಬಿಡುಗಡೆಗೊಳಿಸಿರುವ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಕೃಷಿ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೦ (೧೨೨೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪, ೨೦೨೪–೨೫ ಮತ್ತು ೨೦೨೫–೨೬ ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳು ಯಾವುವು ; (ಕೇಂದ್ರ ಮತ್ತು ರಾಜ್ಯ ಪುರಸ್ಕೃತ ಯೋಜನೆಗಳ ಕುರಿತು ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಆರ್ಥಿಕ ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ವಿವಿಧ ಯೋಜನೆಗಳಡಿ ಹಾಗೂ ಕೃಷಿ ಇಲಾಖೆಗೆ ಕೇಂದ್ರ ಸರ್ಕಾರ ಮೀಸಲಿಟ್ಟಿರುವ ಹಾಗೂ ಬಿಡುಗಡೆಗೊಳಿಸಿರುವ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಪತ್ರಿಕೆ ಮತ್ತು ಟಿ.ವಿ ಮಾಧ್ಯಮಗಳಲ್ಲಿನ ಆಚರಣೆಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೧ (೧೨೩೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩-೨೪, ೨೦೨೪-೨೫, ೨೦೨೫-೨೬ನೇ ಸಾಲಿನಲ್ಲಿ (ಫೆಬ್ರವರಿ-೨೦೨೬ರ ಅಂತ್ಯದವರೆಗೆ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪತ್ರಿಕೆ ಮತ್ತು ಟಿ.ವಿ ಮಾಧ್ಯಮಗಳಲ್ಲಿ ಜಾಹೀರಾತು, ಜಯಂತಿ ಕಾರ್ಯಕ್ರಮಗಳ ಆಚರಣೆ, ದಸರಾ ಉತ್ಸವ ಆಚರಣೆ ಹಾಗೂ ಇನ್ನಿತರ ಎಲ್ಲಾ ಕಾರ್ಯಕ್ರಮಗಳಿಗೆ ಮೀಸಲಿಟ್ಟ, ಬಿಡುಗಡೆಗೊಳಿಸಿದ ಹಾಗೂ ವೆಚ್ಚ ಮಾಡಿದ ಅನುದಾನವೆಷ್ಟು; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಆರ್ಥಿಕ ವರ್ಷದಲ್ಲಿ ಪತ್ರಿಕೆ ಮತ್ತು ಟಿ.ವಿ. ಮಾಧ್ಯಮಗಳಲ್ಲಿ ಸದರಿ ಕಾರ್ಯಕ್ರಮಗಳಿಗೆ ಖರ್ಚಾದ ಅನುದಾನವನ್ನು ಯಾವ ಏಜೆನ್ಸಿಗೆ/ಕಂಪನಿಗೆ/ಇತರರಿಗೆ ಯಾವ ದಿನಾಂಕದಂದು ಎಷ್ಟು ಮೊತ್ತವನ್ನು ಪಾವತಿಸಲಾಗಿದೆ ; ಯಾವ ಇಲಾಖೆಯ ಮೂಲಕ ಪಾವತಿಸಲಾಗಿದೆ ; ವೆಚ್ಚ ಮಾಡಿದ ಅನುದಾನದಲ್ಲಿ ಕೈಗೊಂಡ ಕಾರ್ಯಕ್ರಮಗಳ ಸಂಪೂರ್ಣ ವಿವರಗಳ ಕುರಿತು ವರ್ಷವಾರು ಮಾಹಿತಿ ನೀಡುವುದು ?

## ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಕಾಡಂಮಗೆರಾ ಗ್ರಾಮದಲ್ಲಿ ಮೂಲಸೌಕರ್ಯದ ಕೊರತೆ ಬಗ್ಗೆ

**ಡಾ|| ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೪೨ (೧೨೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಕಾಡಂಮಗೆರಾ (ಬಿ) ಗ್ರಾಮದಲ್ಲಿ ಮೂಲಸೌಕರ್ಯಗಳ ಅಭಾವ ತೀವ್ರವಾಗಿದ್ದು, ಗ್ರಾಮಸ್ಥರು ದಿನ ನಿತ್ಯ ಸಂಕಷ್ಟ ಅನುಭವಿಸುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಗ್ರಾಮದಲ್ಲಿ ಚರಂಡಿ ವ್ಯವಸ್ಥೆ ಕಲ್ಪಿಸಬೇಕೆಂದು ೨ ವರ್ಷಗಳಿಂದ ಬೇಡಿಕೆ ಇದ್ದು, ಕೊಳಚೆ ನೀರು ರಸ್ತೆ ಮೇಲೆ

ಹರಿದು ದುರ್ವಾಸನೆ ವ್ಯಾಪಿಸುತ್ತಿದ್ದು, ಗ್ರಾಮದಲ್ಲಿ ಆರೋಗ್ಯ ಸಮಸ್ಯೆಗಳು ಉಂಟಾಗುವ ಭೀತಿ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಅನುದಾನ ಬಿಡುಗಡೆ ಮಾಡಿ ಮೂಲ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಡಾ॥ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೩ (೧೨೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; ಒಂದು ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆಗೆ ತಗಲುವ ವೆಚ್ಚ ಎಷ್ಟು ; ಸದರಿ ಜಿಲ್ಲೆಗಳಲ್ಲಿ ಶುದ್ಧ ಕುಡಿಯುವ ನೀರಿಗಾಗಿ ಸರ್ಕಾರ ನೀಡಿರುವ ಅನುದಾನ ಎಷ್ಟು ;

(ಆ) ಸದರಿ ಶುದ್ಧ ಕುಡಿಯುವ ನೀರಿನ ಘಟಕಗಳ ಪೈಕಿ ಎಷ್ಟು ಘಟಕಗಳು ಚಾಲ್ತಿಯಲ್ಲಿವೆ ಹಾಗೂ ಎಷ್ಟು ಘಟಕಗಳು ದುರಸ್ತಿಯಲ್ಲಿವೆ ; (ವಿವರ ನೀಡುವುದು)

(ಇ) ಈ ಮೇಲ್ಕಂಡ ಜಿಲ್ಲೆಗಳಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ ಹಾಗೂ ದುರಸ್ತಿ ಕಾರ್ಯಗಳನ್ನು ನಿಭಾಯಿಸುವವರು ಯಾರು, ಇದಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ವಿವರ ನೀಡುವುದು)

# ಯಾದಗಿರಿ ಜಿಲ್ಲೆಯಲ್ಲಿ ಬಾಲ್ಯವಿವಾಹ ಹಾಗೂ ಪೋಕ್ಸೋ ಪ್ರಕರಣಗಳು ದಾಖಲಾಗುತ್ತಿರುವ ಬಗ್ಗೆ

**ಡಾ॥ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೪ (೧೨೫೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲೆಯ ಪ್ರತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವಾರ್ಷಿಕ ಸರಾಸರಿ ೨೫ ರಿಂದ ೩೦ ಬಾಲ್ಯ ವಿವಾಹ ಹಾಗೂ ಪೋಕ್ಸೋ ಪ್ರಕರಣಗಳು ದಾಖಲಾಗುತ್ತಿರುವ ಆತಂಕಕಾರಿ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಾಮಾಜಿಕ ಪಿಡುಗಿನಂತಾಗಿರುವ ಈ ಅಪರಾಧಗಳನ್ನು ತಡೆಯುವಲ್ಲಿ ಜಿಲ್ಲಾಡಳಿತ ವಿಫಲವಾಗಿದೆಯೇ ; (ವಿವರ ನೀಡುವುದು)

(ಇ) ಇಂತಹ ಅಪರಾಧಗಳನ್ನು ತಡೆಯಲು ಹಾಗೂ ಈ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಮಕ್ಕಳ ರಕ್ಷಣೆಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

# ಮಹಿಳಾ ಸ್ವ–ಸಹಾಯ ಗುಂಪುಗಳ ಯೋಜನೆಗಳ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ)(ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೫ (೧೧೫೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಹಿಳಾ ಸ್ವ–ಸಹಾಯ ಗುಂಪುಗಳಲ್ಲಿ ಸಕ್ರಿಯ ಮತ್ತು ನಿಷ್ಕ್ರಿಯ ಮಹಿಳಾ ಸ್ವ–ಸಹಾಯ ಗುಂಪುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಮಹಿಳಾ ಸ್ವ–ಸಹಾಯ ಗುಂಪುಗಳ ಸಬಲೀಕರಣ ಪ್ರಯುಕ್ತ ರಾಜ್ಯ ಸರ್ಕಾರ ಕಲ್ಪಿಸಿರುವ ಯೋಜನೆಗಳ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ರಾಜ್ಯದ ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ಕೇಂದ್ರ ಸರ್ಕಾರದಿಂದ ಮತ್ತು ರಾಜ್ಯ ಸರ್ಕಾರದಿಂದ ಒದಗಿಸಿರುವ ಅನುದಾನದ ಮೊತ್ತದ ವಿವರ ನೀಡುವುದು ?

## ಕೃಷಿ ಇಲಾಖೆಗಳ ಫಲಾನುಭವಿಗಳ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ)(ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೬ (೧೧೫೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯಿಂದ ಕೈಗೊಳ್ಳುತ್ತಿರುವ ಫಲಾನುಭವಿಗಳ ಆಧಾರಿತ ಯೋಜನೆಗಳು ಯಾವುವು ; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಈ ಯೋಜನೆಗಳಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಬಿಡುಗಡೆಯಾದ ಅನುದಾನ ವೆಚ್ಚ ಹಾಗೂ ಫಲಾನುಭವಿಗಳ ವಿವರಗಳನ್ನು ಯೋಜನಾವಾರು/ ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು ;

(ಇ) ಕಳೆದ ಎರಡು ವರ್ಷಗಳಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೃಷಿಯಿಂದ ಆಧಾರಿತ ತೊಂದರೆಗಳಿಗೆ ಅತ್ಯಹತ್ಯೆ ಮಾಡಿಕೊಂಡಿರುವ ರೈತರ ವಿವರ ಹಾಗೂ ಇವುಗಳಿಗೆ ಸರ್ಕಾರದಿಂದ ದೊರೆತ ಪರಿಹಾರ ವಿವರಗಳನ್ನು ಒದಗಿಸುವುದು ;

(ಈ) ಕೃಷಿ ಇಲಾಖೆಯಿಂದ ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆ ಘೋಷಿಸಲಾಗಿದೆ ; ಎಷ್ಟು ಬೆಳೆಗಳಿಗೆ ನೀಡಲಾಗಿದೆ ? (ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳ ಮಂಜೂರಿನ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪೭ (೧೧೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಹೊಸದಾಗಿ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆಯೇ ; ಮಂಜೂರು ಮಾಡಲಾಗಿರುವ ಸಂಖ್ಯೆ ಎಷ್ಟು ; (ವಿಧಾನಸಭಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಂಜೂರಾದ ಆಂಗನವಾಡಿಗಳ ಪೈಕಿ ಸ್ವಂತ ಕಟ್ಟಡಗಳಲ್ಲಿ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವುದು ಎಷ್ಟು ; (ವಿಧಾನಸಭಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ೧೯೯೩ ರ ಪ್ರಕರಣ ೪೩(ಎ)ರಡಿ ದಿನಾಂಕ: ೧೧.೦೨.೨೦೨೦ ರಂದು ಹೊರಡಿಸಿದ ಆದೇಶದ ಬಗ್ಗೆ

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೮ (೧೧೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ೧೯೯೩ರ ಪ್ರಕರಣ ೪೩(ಎ)ರಡಿ ವಿಚಾರಣೆ ನಡೆಸಿ

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ ೧೪ ಗ್ರಾಪಂಅ ೨೦೨೦ ದಿನಾಂಕ:೧೧.೦೨.೨೦೨೦ರಲ್ಲಿ, ತಂಗಡಗಿ ಕುಂಚಗನೂರ ರಸ್ತೆಯಲ್ಲಿನ ಸಿ.ಸಿ. ಚರಂಡಿ ಕಾಮಗಾರಿಯು ಉತ್ತಮ ಗುಣಮಟ್ಟದಾಗಿರುವುದಿಲ್ಲವೆಂಬ ಆರೋಪವು ಸಾಭೀತಾಗಿರುವುದಿಲ್ಲ ಎಂದು ಆದೇಶ ಹೊರಡಿಸಿರುವುದು ನಿಜವೇ ; (ಆದೇಶದ ಪ್ರತಿ ಒದಗಿಸುವುದು)

(ಆ) ಸದರಿ ಆದೇಶದ ವಿರುದ್ಧ ಆರೋಪಗಳನ್ನು ಮಾಡಿದ ದೂರುದಾರರು ಸರ್ಕಾರದ ಹಂತದಲ್ಲಿ ಪುನರ್ ಪರಿಶೀಲನೆ ಅಥವಾ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿರುತ್ತಾರೆಯೇ ; ಸಲ್ಲಿಸಿದ್ದಲ್ಲಿ, ಇದರ ವಿವರ ಒದಗಿಸುವುದು ;

(ಇ) ದಿನಾಂಕ: ೧೧.೦೨.೨೦೨೦ರ ಆದೇಶವನ್ನು ಸರ್ಕಾರದ ಹಂತದಲ್ಲಿ ಬದಲಾವಣೆ ಅಥವಾ ರದ್ದು ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಆದೇಶ ಪ್ರತಿ ಒದಗಿಸುವುದು ;

(ಈ) ತಂಗಡಗಿ ಕುಂಚಗನೂರ ರಸ್ತೆಯಲ್ಲಿನ ಸಿ.ಸಿ. ಚರಂಡಿ ಕಾಮಗಾರಿಯ ಬಿಲ್ ಪಾವತಿ ಮಾಡದಂತೆ ಸರ್ಕಾರ ಆದೇಶ ಹೊರಡಿಸಿದೆಯೇ ; ಹೊರಡಿಸಿದ್ದಲ್ಲಿ, ಆದೇಶದ ಪ್ರತಿ ಒದಗಿಸುವುದು ;

(ಉ) ದಿನಾಂಕ:೧೧.೦೨.೨೦೨೦ರ ಆದೇಶ ಬಂದ ನಂತರ ಸದರಿ ಕಾಮಗಾರಿಯ ಹಣ ಪಾವತಿಯಾದಲ್ಲಿ ಈ ಕಾಮಗಾರಿ ಗುಣಮಟ್ಟದ ಬಗ್ಗೆ ಮರು ತನಿಖೆಗೆ ಅವಕಾಶ ನೀಡುವ ಸರ್ಕಾರದ ನಿಯಮದ ಪ್ರತಿ ಒದಗಿಸುವುದು ;

(ಊ) ಎಮ್.ಜಿ.ಎನ್.ಆರ್.ಎ.ಜಿ ಯೋಜನೆಯ ಕಾರ್ಯಾರಚಣೆ ಮಾರ್ಗಸೂಚಿ ೨೦೧೩ ರ ಅಧ್ಯಾಯ ೧೪.೬ ಹಾಗೂ ಸನ್ ೨೦೨೨–೨೩ನೇ ಸಾಲಿನ ಸಂಯುಕ್ತ ಸುತ್ತೋಲೆಗಳ ಅಧ್ಯಾಯ ೨೦.೨ ರಲ್ಲಿ ತಿಳಿಸಿದಂತೆ ಈ ಯೋಜನೆಯಡಿ ಕೈಗೊಳ್ಳುವ

ಕಾಮಗಾರಿಗಳಿಗೆ ಆಂತರಿಕ ಗುಣಮಟ್ಟ ಕಾಪಾಡಲು ಜವಾಬ್ದಾರಿ ಹೊಂದಿರುವವರು ಯಾರು ; ಮತ್ತು ಅಧ್ಯಾಯ ೧೪.೭ರಲ್ಲಿ ಈ ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳಿಗೆ ಪರಿಶೀಲನೆ/ ಮಾಪನ ಮತ್ತು ವಿಶ್ಲೇಷಣೆ ಮಾಡುವ ಅಧಿಕಾರ ಹೊಂದಿರುವವರು ಯಾರು ?

## ಪಿ.ಡಿ.ಓ ಗಳ ಶಿಸ್ತು ಪ್ರಾಧಿಕಾರದ ಬಗ್ಗೆ

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೯ (೧೧೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ ೯೭ ಜಿಪಿಕೆ ೨೦೨೩(ಇ), ಬೆಂಗಳೂರು, ದಿನಾಂಕ:೧೫.೦೭.೨೦೨೩ ರಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಪಿ.ಡಿ.ಓ ರವರನ್ನು ಅಮಾನತ್ತು ಮಾಡಿರುವ ಆದೇಶಗಳನ್ನು ರದ್ದುಗೊಳಿಸಿ, ದಿನಾಂಕ:೧೩.೦೩.೨೦೨೪ರ ಅಧಿಸೂಚನೆಯ ಪ್ರಕಾರ ಈ ವೃಂದ ನೇಮಕಾತಿ ಪ್ರಾಧಿಕಾರಿಯಾದ ಆಯುಕ್ತರು ಪಂಚಾಯತ್ ರಾಜ್ ಆಯುಕ್ತಾಲಯ ಮಾತ್ರ ಅಮಾನತ್ತುಗೊಳಿಸಲು ಸಕ್ಷಮ ಪ್ರಾಧಿಕಾರ ಎಂದು ಕೆ.ಎ.ಟಿ ತೀರ್ಪು ನೀಡಿದರೂ ಸಹ, ಪುನಃ ದಿನಾಂಕ:೧೫.೦೭.೨೦೨೩ರ ಆದೇಶವನ್ನು ಉಲ್ಲೇಖಿಸಿ ಪಿ.ಡಿ.ಓ ರವರನ್ನು ಅಮಾನತ್ತು ಮಾಡುವ ಸಕ್ಷಮ ಪ್ರಾಧಿಕಾರ ಮುಖ್ಯ ಕಾರ್ಯನಿರ್ವಾಹಕರ ಅಧಿಕಾರಿಗಳೆಂದು ಸೂಚನೆ ನೀಡುವುದು. ಕೆ.ಎ.ಟಿ. ತೀರ್ಪುಗಳ ಉಲ್ಲಂಘನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಮೇಲಿನ ಕೆ.ಎ.ಟಿ ಪ್ರಕರಣಗಳಿಗೆ ಪಂಚಾಯತ್ ರಾಜ್ ಆಯುಕ್ತಾಲಯದದಿಂದ ಕೆ.ಎ.ಟಿ ಸಲ್ಲಿಸಿದ ಪ್ರತ್ಯುತ್ತರ ಹೇಳಿಕೆಯ

(REPLY STATEMENT) ಪ್ರತಿ ನೀಡುವುದು ಹಾಗೂ ಈ ತೀರ್ಪುಗಳ ಮೇಲೆ ಪಂಚಾಯತ್ ರಾಜ್ ಆಯುಕ್ತಾಲಯವು ಕೈಗೊಂಡ ಕ್ರಮದ ವಿವರ ನೀಡುವುದು ; ಅಮಾನತ್ತುಗೊಂಡ ಪಿ.ಡಿ.ಓ ರವರ ಅಮಾನತ್ತು ತೆರವುಗೊಳಿಸುವ ಮತ್ತು ಇವರಿಗೆ ಸ್ಥಳ ನಿಯುಕ್ತಿ ಮಾಡುವ ಸಕ್ಷಮ ಪ್ರಾಧಿಕಾರದ ವಿವರ ಒದಗಿಸುವುದು ಹಾಗೂ ಸರ್ಕಾರ ಈ ಬಗ್ಗೆ ಹೊರಡಿಸಿದ ಅಧಿಸೂಚನೆ ಪ್ರತಿ ಒದಗಿಸುವುದು ;

(ಇ) ಒಂದು ವೃಂದಕ್ಕೆ ಎಷ್ಟು ನೇಮಕಾತಿ ಪ್ರಾಧಿಕಾರ ಇರುತ್ತದೆ ; ಸಿ.ಸಿ.ಎ–೧೯೫೭ರ ನಿಯಮಗಳ ಅನುಸೂಚಿ–೨ ಪ್ರಕಾರ ಪಿ.ಡಿ.ಓ ಹುದ್ದೆ ನೇಮಕಾತಿ ಪ್ರಾಧಿಕಾರ ಯಾರು ಹಾಗೂ ದಿನಾಂಕ:೧೩.೦೩.೨೦೨೪ರ ವೃಂದ ಮತ್ತು ನೇಮಕಾತಿ ಅಧಿಸೂಚನೆ ಪ್ರಕಾರ ಪಿ.ಡಿ.ಓ ಹುದ್ದೆ ನೇಮಕಾತಿ ಪ್ರಾಧಿಕಾರದ ವಿವರ ಒದಗಿಸುವುದು ;

(ಈ) ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ ೨೯ ಜಿಪಿಎನ್ ೨೦೨೫ ದಿನಾಂಕ:೨೧.೦೨.೨೦೨೫ರಲ್ಲಿ ಪಿ.ಡಿ.ಓ ವೃಂದಕ್ಕೆ ಆಯುಕ್ತಾಲಯದ ಆಯುಕ್ತರು, ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರ ಹಾಗೂ ಈ ವೃಂದದ ನೌಕರರನ್ನು ಅಮಾನತ್ತುಗೊಳಿಸುವ ಸಕ್ಷಮ ಪ್ರಾಧಿಕಾರ ಎಂದು ತಿಳಿಸಿದ್ದರೂ ಸಹ ಈ ಆದೇಶದ ವಿರುದ್ಧ ಜಿಲ್ಲೆಗಳಿಂದ ಬಂದ ಎಷ್ಟು ಶಿಸ್ತು ಪ್ರಸ್ತಾವನೆಗಳ ಮೇಲೆ ಕ್ರಮವಹಿಸದೇ ಆಯುಕ್ತಾಲಯದಿಂದ ಜಿಲ್ಲಾ ಪಂಚಾಯಿತಿಗಳಿಗೆ ವಾಪಸ್ಸು ಕಳುಹಿಸಲಾಗಿದೆ, ಪಿ.ಡಿ.ಓ ರವರನ್ನು ಆಯುಕ್ತರು ಅಮಾನತ್ತುಗೊಳಿಸಲು ಕ್ರಮ ವಹಿಸದೇ ಇರುವುದಕ್ಕೆ ಕಾರಣಗಳೇನು ;

(ಉ) ಆಯುಕ್ತಾಲಯ ಪತ್ರ ದಿನಾಂಕ:೧೭.೦೨.೨೦೨೬ರಲ್ಲಿ ದುರ್ನಡತೆ ತೋರಿದ ಪಿ.ಡಿ.ಓರವರನ್ನು ಈಗಾಗಲೇ ಸರ್ಕಾರವು ಅಧಿಕೃತ ಜ್ಞಾಪನ ದಿನಾಂಕ:೧೬.೦೧.೨೦೨೬ ರಂದು ಅಧೀಕ್ಷಕರು, ಬೈಲಹೊಂಗಲ ತಾಲ್ಲೂಕು ಪಂಚಾಯತ್ ಬೆಳಗಾವಿ ಜಿಲ್ಲೆಗೆ

ವರ್ಗಾಯಿಸಲಾಗಿದೆ. ಇವರನ್ನು ಪ್ರಸ್ತುತ ಅಮಾನತ್ತುಗೊಳಿಸುವ ಹಾಗೂ ಇವರ ಮೇಲೆ ಜುಲ್ಮಾನೆಗಳನ್ನು ಯಾರು ವಿಧಿಸಬೇಕು ; ಈ ರೀತಿಯ ಪ್ರಕರಣಗಳಲ್ಲಿ ಕೈಗೊಳ್ಳಬೇಕಾದ ಕ್ರಮದ ಕುರಿತು ಸರ್ಕಾರ ಹೊರಡಿಸಿದ ಅಧಿಸೂಚನೆಯ ಪ್ರತಿ ಒದಗಿಸುವುದು ?

## ನವ್ಯೋದ್ಯಮಗಳ ರಿಯಾಯಿತಿ ಪ್ರೋತ್ಸಾಹ ಧನಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೦ (೧೧೮೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನವ್ಯೋದ್ಯಮ ಎಂದರೇನು ; ಯಾವ ರೀತಿ ವರ್ಗೀಕರಿಸಲಾಗಿದೆ ; ಇದರಡಿಯಲ್ಲಿ ಬರುವ ಉದ್ಯಮಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ನವ್ಯೋದ್ಯಮಗಳಿಗೆ ಸರ್ಕಾರ ಹಾಲಿ ನೀಡುತ್ತಿರುವ ರಿಯಾಯಿತಿ ಮತ್ತು ಪ್ರೋತ್ಸಾಹ ಧನ ಹಾಗೂ ಇತರೆಗಳು ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಪ್ರಾರಂಭದಿಂದ ಇಲ್ಲಿಯವರೆಗೆ ಸರ್ಕಾರವು ಎಷ್ಟು ನವ್ಯೋದ್ಯಮಗಳಿಗೆ ರಿಯಾಯಿತಿ ಪ್ರೋತ್ಸಾಹ ಧನ ಹಾಗೂ ಇತರೆಗಳನ್ನು ನೀಡಿರುತ್ತದೆ ; ವಿವರವಾಗಿ ನವ್ಯೋದ್ಯಮದ ಹೆಸರು, ವಿಳಾಸ ಉದ್ಯಮದ ಕಾರ್ಯವೈಖರಿ ಮಾಲೀಕರ ಹೆಸರು ಹಾಗೂ ಸರ್ಕಾರದಿಂದ ಪಡೆದ ಪ್ರೋತ್ಸಾಹ/ರಿಯಾಯಿತಿಧನದ ಜಿಲ್ಲಾವಾರು ಮಾಹಿತಿ ನೀಡುವುದು ;

(ಈ) ನವ್ಯೋದ್ಯಮಗಳಿಗೆ ಪ್ರೋತ್ಸಾಹ/ರಿಯಾಯಿತಿ ನೀಡುವ ಕಾರ್ಯಕ್ರಮಗಳನ್ನು ಯಾವ ಸಂಸ್ಥೆಯಿಂದ ಆಯೋಜನೆ ಮಾಡಲಾಗಿರುತ್ತದೆ ; ಸದರಿ ಸಂಸ್ಥೆಯ ಹೆಸರು, ವಿಳಾಸ ಹಾಗೂ

ಅಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಹೆಸರು ಹುದ್ದೆಯ ಪದನಾಮ, ವೇತನ ವಿವರ ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು ?

## ಕಲಬುರಗಿ ESI ಆಸ್ಪತ್ರೆ ಸಿಬ್ಬಂದಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೧ (೧೨೮೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿನ ಕಾರ್ಮಿಕರ ಮಕ್ಕಳಿಗೆ ಉಚಿತ ಲ್ಯಾಪ್‌ಟಾಪ್ ನೀಡಲಾದ ಸಂಖ್ಯೆ ಎಷ್ಟು ಮತ್ತು ಇದಕ್ಕಾಗಿ ಖರ್ಚು ಮಾಡಲಾದ ಹಣ ಎಷ್ಟು ; (ಜಿಲ್ಲಾವಾರು ಫಲಾನುಭವಿಗಳ ಹೆಸರಿನೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯಲ್ಲಿ ಕಾರ್ಮಿಕರ ಹೆಸರಿನಲ್ಲಿ ಅಕ್ರಮವಾಗಿ ಲ್ಯಾಪ್ ಟಾಪ್‌ಗಳನ್ನು ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಎಷ್ಟು ಪ್ರಕರಣಗಳು ವರದಿಯಾಗಿವೆ ಮತ್ತು ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಕಲಬುರಗಿ ಇ.ಎಸ್.ಐ ಆಸ್ಪತ್ರೆಯಲ್ಲಿ ತಜ್ಞ ವೈದ್ಯರು ಹಾಗೂ ಇತರೆ ಸಿಬ್ಬಂದಿ ಸೇರಿದಂತೆ ಒಟ್ಟು ಮಂಜೂರಾದ ಹುದ್ದೆಗಳು ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಆಸ್ಪತ್ರೆಯಲ್ಲಿ ಡಯಾಲಿಸಿಸ್, ಎಕ್ಸ್‌ರೆ, ಎಂ ಆರ್ ಐ, ಸೇರಿದಂತೆ ಎಲ್ಲಾ ತರಹದ ಪರೀಕ್ಷಾ ಯಂತ್ರಗಳು ಇವೆಯೇ ; ಇಲ್ಲದಿದ್ದಲ್ಲಿ ಯಾವ ಯಾವ ಯಂತ್ರಗಳ ಕೊರತೆ ಇದೆ ; ಸದರಿ ಯಂತ್ರಗಳನ್ನು ನಿರ್ವಹಿಸಲು ನುರಿತ ಸಿಬ್ಬಂದಿಗಳು ಆಸ್ಪತ್ರೆಯಲ್ಲಿ ಇದ್ದಾರೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

# ಜಲ ಜೀವನ್ ಮಿಷನ್ ಯೋಜನೆಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೨ (೧೨೮೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಡೆಯುತ್ತಿರುವ ಜಲ ಜೀವನ್ ಮಿಷನ್ ಯೋಜನೆಯಲ್ಲಿ ರಾಜ್ಯ ಸರ್ಕಾರದಿಂದ ಮತ್ತು ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು;

(ಆ) ರಾಜ್ಯದಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳು ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಜಲ ಜೀವನ್ ಮಿಷನ್ ಯೋಜನೆಯಲ್ಲಿ ಕಾಮಗಾರಿಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಜಲ ಜೀವನ್ ಮಿಷನ್ ಯೋಜನೆ ರಾಜ್ಯದ ಯಾವ ಯಾವ ಹಳ್ಳಿಗಳಲ್ಲಿ ಇನ್ನು ಕಾಮಗಾರಿ ಪ್ರಾರಂಭವಾಗಿಲ್ಲ, ಅಂತಹ ಹಳ್ಳಿಗಳು ಯಾವುವು; ಇನ್ನು ಯಾವ ಕಾಲಮಿತಿಯೊಳಗೆ ಯೋಜನೆಯನ್ನು ಪೂರ್ಣಗೊಳಿಸಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಜಲ ಜೀವನ್ ಮಿಷನ್ ಯೋಜನೆಯಲ್ಲಿ ಕಾಮಗಾರಿ ಪೂರ್ಣಗೊಂಡಿದ್ದು ನೀರು ಬಿಡುಗಡೆ ಮಾಡದೆ ಇರುವ ತಾಲ್ಲೂಕುಗಳು ಯಾವುವು? (ಸಂಪೂರ್ಣ ಮಾಹಿತಿ ನೀಡುವುದು)

# KKRDB ಅನುದಾನಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೩ (೧೨೮೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದ ಕೆಕೆಆರ್‌ಡಿಬಿ ಯಲ್ಲಿ ಪ್ರಸ್ತುತ ಸಾಲಿನಲ್ಲಿ(೨೦೨೫–೨೬) ಬಿಡುಗಡೆಯಾದ ಅನುದಾನ ಎಷ್ಟು; ಆ ಅನುದಾನದಲ್ಲಿ ಇಲ್ಲಿಯವರೆಗೆ ನಡೆದ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು; (ಗುತ್ತಿಗೆದಾರರ ಹೆಸರು, ಪರವಾನಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಕೆಕೆಆರ್‌ಡಿಬಿ ಯೋಜನೆಯಲ್ಲಿ ಪ್ರಸ್ತುತ ಸಾಲಿನಲ್ಲಿ(೨೦೨೫–೨೬) ಬಿಡುಗಡೆಯಾದ ಅನುದಾನದಲ್ಲಿ ಉಳಿದಿರುವ ಅನುದಾನ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೆಕೆಆರ್‌ಡಿಬಿಯಲ್ಲಿ ವಿಧಾನ ಪರಿಷತ್ ಶಾಸಕರಿಗೆ ಅನುದಾನವನ್ನು ನೀಡದಿರಲು ಕಾರಣವೇನು; ಮುಂದಿನ ದಿನಗಳಲ್ಲಿ ವಿಧಾನ ಪರಿಷತ್ ಶಾಸಕರಿಗೆ ಅನುದಾನವನ್ನು ನೀಡಲಾಗುವುದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೆಕೆಆರ್‌ಡಿಬಿ ಕಳೆದ ೨ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನದ ಸಮಯ ಮುಗಿದ ನಂತರ ಉಳಿದ ಹಣದಲ್ಲಿ ಯಾವ ಯಾವ ಕಾಮಗಾರಿಯನ್ನು ಮಾಡಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–181 /500 ಪ್ರತಿಗಳು/27–02–2026